ಸಂಪುಟ: ೦೬/ ಸಂಚಿಕೆ: ೨೪೭/ಶುಕ್ರವಾರ ದಿನಾಂಕ : ೨೯-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 247/ FRIDAY Date : 29-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ॥ ಸಪ್ತಮಿಷಿವಾಣಿ ॥

ಬದುಕಿನಲ್ಲಿ ನೀರಿಗೆ ಬಿದ್ದ ಪ್ರತಿಯೊಬ್ಬರೂ ಮುಳುಗುವುದಿಲ್ಲ. ಈಜು ಬರಲಾರದವರು ಮಾತ್ರ ಮುಳುಗಿ ಹೋಗುತ್ತಾರೆ. ಜೀವನ ಕೂಡ ಅಷ್ಟೇ, ಸಮಸ್ಯೆ ಇರುವ ಪ್ರತಿಯೊಬ್ಬನೂ ಸೋಲುವುದಿಲ್ಲ. ಪರಿಹಾರ ಹುಡುಕಲಾಗದವನು ಮಾತ್ರ ಸೋತು ಹೋಗುತ್ತಾನೆ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ಗುಡ್ಡಾಪೂರ: ಇಂದಿನಿಂದ ಕಾರ್ತಿಕೋತ್ಸವ ಆರಂಭ




ರಬಕವಿ–ಬನಹಟ್ಟಿ,ನ28: ಮಹಾರಾಷ್ಟ್ರದ ಧಾರ್ಮಿಕ ಕ್ಷೇತ್ರದಲ್ಲಿ ಒಂದಾದ ಗುಡ್ಡಾಪುರ ದಾನಮ್ಮದೇವಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ನಿಮಿತ್ತ ನ.29 ರಿಂದ ಡಿ.2 ವರೆಗೂ ಜಾತ್ರೆ ನಡೆಯಲಿದೆ. ಬೆಳಿಗ್ಗೆ 10 ಗಂಟೆಗೆ ಜಾತ್ರೆಯ ನಿಮಿತ್ತ ದಾಸೋಹ ಕಾರ್ಯಕ್ರಮವನ್ನು ಗುಡ್ಡಾಪುರ ಗ್ರಾಮದ ಹಿರೇಮಠದ ಶ್ರೀ ಗುರುಪಾದ ಶಿವಾಚಾರ್ಯರು ಹಾಗೂ ಗೌಡಗಾಂವ ಹಿರೇಮಠದ ಡಾ. ಜಯಸಿದ್ಧೇಶ್ವರ ಶಿವಾಚಾರ್ಯ ಶ್ರೀಗಳಿಂದ ಚಾಲನೆ ನೀಡಲಿದ್ದಾರೆ.

ನ.30 ರಂದು ಕಾರ್ತಿಕ ಅಮವಾಸ್ಯೆಯ ನಿಮಿತ್ತ ಸಂಜೆ 8 ಕ್ಕೆ ವಿಶ್ವ ಪ್ರಸಿದ್ದ ಕಾರ್ತಿಕ ದೀಪೋತ್ಸವ ಜರುಲಿದೆ. ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿಯ ಪಲ್ಲಕ್ಕಿ ಉತ್ಸವ ಜರುಗಲಿದೆ. ಸ್ಥಳಿಯ ಹಿರೇಮಠದ ಗುರುಪಾದ ಶಿವಾಚಾರ್ಯರು, ಮನಗೂಳಿ ಹಿರೇಮಠದ ಸಂಗನಬಸವ ಶಿವಾಚಾರ್ಯರು, ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಬಸವಲಿಂಗ ಸ್ವಾಮೀ–ಜಿಯವರ ನೇತೃತ್ವದಲ್ಲಿ ಕಾರ್ತಿಕೋತ್ಸವ ಜರುಲಿದೆ.

ಡಿ.1 ರಂದು ಸಂಜೆ 5ಕ್ಕೆ ದಾನಮ್ಮದೇವಿಯ ವಿಶ್ವ ವಿಖ್ಯಾತ ಬೃಹತ್ ರಥೋತ್ಸವ ಬುರಾಣಪುರ ಸಿದ್ದಾರೂಢ ಮಠದ ಯೋಗೇಶ್ವರಿ ಮಾತಾಜಿ, ಸ್ಥಳಿಯ ಹಿರೇಮಠದ ಗುರುಪಾದ ಶಿವಾಚಾರ್ಯರು ಚಾಲನೆ ನೀಡಲಿದ್ದಾರೆ. ಈ ಸಂರ್ಭದಲ್ಲಿ ಸೋಲಾಪುರ ಶಾಸಕ ವಿಜಯಕುಮಾರ ದೇಶಮುಖ್, ಜತ್ ಶಾಸಕ ಗೋಪಿಚಂದ ಪಡಳಕರ ಭಾಗವಹಿಸಲಿದ್ದಾರೆಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಹೆದ್ದಾರಿಯಿಂದ 10 ಕಿ.ಮೀ ದೂರದ ರಸ್ತೆಗೆ ಸಂಪರ್ಕ ಹೊಂದಿವೆ



ಮೂಡಲಗಿ: ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು ರಾಷ್ಟ್ರೀಯ ಹೆದ್ದಾರಿಯಿಂದ 10 ಕಿ.ಮೀ ದೂರದ ರಸ್ತೆಗೆ ಸಂಪರ್ಕ ಹೊಂದಿವೆ. ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಅವರು ರಾಜ್ಯಸಭೆಯಲ್ಲಿ ಲಿಖಿತ ಉತ್ತರದಲ್ಲಿ ಈ ಮಾಹಿತಿಯನ್ನು ನೀಡಿದ್ದಾರೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ನವದೆಹಲಿಯಲ್ಲಿ ನಡೆಯುತ್ತಿರುವ ಸಂಸತ್ತಿನ ಚಳಿಗಾಲ ಅಧಿವೇಶನದಲ್ಲಿ ಜಿಲ್ಲಾ ಕೇಂದ್ರಗಳಿಂದ ರಾಷ್ಟ್ರೀಯ ಹೆದ್ದಾರಿಗೆ ರಸ್ತೆ ಸಂಪರ್ಕ ಕಲ್ಪಿಸುವ ಕು–ರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ದೇಶದಲ್ಲಿ ರಾಷ್ಟ್ರೀಯ ಹೆದ್ದಾರಿ 2014 ರಲ್ಲಿ 91,287 ಕಿಮೀ ನಿರ್ಮಾಣವಾಗಿತು. ಪ್ರಸ್ತುತ 1,46,195 ಕಿ.ಮೀ. ರಸ್ತೆ ನಿರ್ಮಾಣವಾಗಿದೆ. ರಸ್ತೆ ಸಾರಿಗೆ ಮತ್ತು ಹೆದ್ದಾ–ರಿಗಳ ಸಚಿವಾಲಯಕ್ಕೆ 2013–14ರಲ್ಲಿ 31,130 ಕೋಟಿ ರೂ. ಅನುದಾನ ನೀಡಲಾಗಿತ್ತು. ಪ್ರಸ್ತುತ 2024–25ರಲ್ಲಿ 2,84,000 ಕೋಟಿ ರೂ. ಅನುದಾನವನ್ನು ಹೆಚ್ಚಿಗೆ ಮಾಡಿ ರಾಷ್ಟ್ರೀಯ ಹೆದ್ದಾರಿಗಳ ಗುಣಮಟ್ಟ ಮತ್ತು ವಿಸ್ತಾರದಲ್ಲಿ ಗಣನೀಯ ಸುಧಾರಣೆಯಾಗಿದೆ. ದೇಶದ 784 ಜಿಲ್ಲಾ ಕೇಂದ್ರಗಳನ್ನು 746 ರಾಷ್ಟ್ರೀಯ ಹೆದ್ದಾರಿಗಳು 10 ಕಿ.ಮೀ ದೂರದಲ್ಲಿ ಪ್ರವೇಶಿಸಬಹುದು. ಈ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಮತ್ತು ನಿರ್ವಹಣೆ ರಸ್ತೆ, ಸಂಚಾರ ಮತ್ತು ಚಾಲಕರ ಲಭ್ಯತೆಯ ಆಧಾರದ ಮೇಲೆ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಲಾಜಿಸ್ಟಿಕ್ ದಕ್ಷತೆಯ ಮೂಲಸೌಕರ್ಯ ಮತ್ತು ಸಾರಿಗೆ ನಿಯಂತ್ರಿತ ರಾಷ್ಟ್ರೀಯ ಹೆದ್ದಾರಿಗಳು ಮತ್ತು 4–ಲೇನ್ ಹಾಗೂ 6–ಲೇನ್ ರಸ್ತೆಗಳ ನಿರ್ಮಾಣದ ಬಗ್ಗೆಯೂ ಸರ್ಕಾರ ಗಮನಹರಿಸುತ್ತಿದೆ.

ಕರ್ನಾಟಕ ರಾಜ್ಯವನ್ನು ಒಳಗೊಂಡಂತೆ ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸಿದೆ ಮತ್ತು ದೇಶದಾದ್ಯಂತ ರಾಷ್ಟ್ರೀಯ ಹೆದ್ದಾರಿಗಳಿಗೆ ಪ್ರವೇಶಿಸಲು ಕಾರಣವಾಗಿದೆ ಎಂದು ಸಚಿವರು ಉತ್ತರಿಸಿದ್ದಾರೆಂದು ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

## ಚಳಿಗಾಲ ಅಧಿವೇಶನ
### ಡಿ.1 ರಿಂದ 30 ವರೆಗೆ ನಿಷೇದಾಜ್ಞೆ

ಬೆಳಗಾವಿ : ಸುವರ್ಣ ವಿಧಾನ ಸೌಧದದಲ್ಲಿ ಡಿ.9 ರಿಂದ 20 ರವರೆಗೆ ಚಳಿಗಾಲ ಅಧಿವೇಶನ ನಡೆಯಲಿದೆ. ಅಧಿವೇಶನ ಕಾಲಕ್ಕೆ ಕಾನೂನು ಮತ್ತು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತತೆ ಕಾಪಾಡುವ ಹಿತದೃಷ್ಟಿಯಿಂದ ಸುವರ್ಣ ವಿಧಾನ ಸೌಧದ ಸುತ್ತಲೂ ಸುಮಾರು 500 ಮೀ. ಸುತ್ತಳತೆಯಲ್ಲಿ ಡಿ.1 ರಿಂದ 30 ವರೆಗೆ ನಿಷೇದಾಜ್ಞೆ ಹೊರಡಿಸಿ ನಗರದ ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ, ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ ಅವರು ಆದೇಶಿಸಿದ್ದಾರೆ. ಸದರಿ ಆದೇಶವನ್ನು ಉಲ್ಲಂಘಿ–ಸುವವರ ವಿರುದ್ಧ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.೯ ರಿಂದ ಬೆಳಗಾವಿಯಲ್ಲಿ ವಿಧಾನಮಂಡಳ ಅಧಿವೇಶನ
## ಉತ್ತರ ಕರ್ನಾಟಕದ ಪ್ರಗತಿಗೆ ಒತ್ತು; ಸ್ಪೀಕರ್ ಯು.ಟಿ. ಖಾದರ್



ಮಂಗಳೂರು: ನ.28: ರಾಜ್ಯ ವಿಧಾನ ಮಂಡಲ ಚಳಿಗಾಲದ ಅಧಿವೇಶನ ಡಿಸೆಂಬರ್ 9 ರಿಂದ 19 ರವರೆಗೆ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯಲಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಅವರು ಗುರುವಾರ ಮಂಗಳೂ–ರಿನ ಸರ್ಕ್ಯೂಟ್ ಹೌಸ್ ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಇರುವುದರಿಂದ ಅಧಿವೇಶನವನ್ನು ಡಿಸೆಂಬರ್ 19 ಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ನಿರ್ಧ–ರಿಸಿದೆ. ಅಧಿವೇಶನ ಮುಂದುವರಿಸುವ ಕುರಿತು ಡಿಸೆಂಬರ್ 9ರಂದು ಸ್ಪೀಕರ್ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಕಾನೂನು ಸಚಿವರು ಎಲ್ಲಾ ರಾಜಕೀಯ ಮುಖಂಡರು, ವಿರೋಧ ಪಕ್ಷದ ಮುಖಂಡರು ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಅಧಿವೇಶನದಲ್ಲಿ ರಾಜ್ಯದ ಅಭಿವೃದ್ಧಿ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಅಭಿವೃದ್ಧಿ ಕು–ರಿತು ಚರ್ಚೆಯಾಗಬೇಕಿದೆ. ಇದ–ರಿಂದ ಆ ಭಾಗದ ಜನರ ಭಾವನೆಗಳನ್ನು ಗೌರವಿಸಿದಂತಾಗುತ್ತದೆ. ಈ ನಿಟ್ಟಿನಲ್ಲಿ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷ ಸಹಕ–ರಿಸಬೇಕು ಎಂದು ಸ್ಪೀಕರ್ ಮನವಿ ಮಾಡಿದರು.

## ಕಾಂಗ್ರೆಸ್ ಸರಕಾರದಿಂದ ಉತ್ತರ ಕರ್ನಾಟಕಕ್ಕೆ ಏನೂ ಸಿಕ್ಕಿಲ್ಲ : ಆರ್. ಅಶೋಕ್



ಬೆಂಗಳೂರು : "ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಉತ್ತರ ಕರ್ನಾಟಕಕ್ಕೆ ಏನೂ ಸಿಕ್ಕಿಲ್ಲ ಎಂಬುದು ಸ್ಪಷ್ಟವಾಗಿದೆ. ಈ ಬಗ್ಗೆ ನಾನೂ ಸೇರಿದಂತೆ ಉತ್ತರ ಕರ್ನಾಟಕದ ಎಲ್ಲ ಶಾಸಕರು ಮಾತನಾಡಲಿದ್ದೇವೆ" ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ಉತ್ತರ ಕರ್ನಾಟಕ ಭಾಗದ ಶಾಸಕರೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕಾಂಗ್ರೆಸ್ ಸರಕಾರ ಹಣ ಇದೆ ಎಂದು ಹೇಳುತ್ತಲೇ ಇದೆ. ಆದರೂ ಉತ್ತರ ಕರ್ನಾಟಕಕ್ಕೆ ಯಾವುದೇ ಅನುದಾನ ನೀಡಿಲ್ಲ. ಎಷ್ಟು ಹೂಡಿಕೆ ಬಂದಿದೆ, ಎಷ್ಟು ಬೆಳೆಹಾನಿ ಪರಿಹಾರ ಸಿಕ್ಕಿದೆ, ನೀರಾವರಿ ಯೋಜನೆಗೆ ಎಷ್ಟು ಅನುದಾನ ನೀಡಲಾಗಿದೆ ಎಂಬ ಬಗ್ಗೆ ಉತ್ತರ ಕರ್ನಾಟಕದ ಬಿಜೆಪಿ ಶಾಸಕರು ಚರ್ಚೆ ಮಾಡಿದ್ದಾರೆ.

ನಂಜುಂಡಪ್ಪ ವರದಿಗೆ ಚಾಲನೆ ನೀಡುತ್ತೇವೆ ಎಂದು ಸರಕಾರ ಹೇಳಿ ವರ್ಷವಾಗುತ್ತಾ ಬಂದಿದೆ ಎಂಬುದು ಕೂಡ ಚರ್ಚೆಯಾಗಿದೆ. ಇದನ್ನು ಸದನದಲ್ಲಿ ಪ್ರಶ್ನಿಸುವ, ಮಾತನಾಡುವ ಬಗ್ಗೆ ಶಾಸಕರು ಹೇಳಿದ್ದಾರೆ. ಕಾಂಗ್ರೆಸ್ ಹೇಳಿದ್ದು ಏನು, ಉತ್ತರ ಕರ್ನಾಟಕಕ್ಕೆ ನೀಡಿದ್ದೇನು ಎಂಬ ಬಗ್ಗೆ ಶಾಸಕರೇ ಮಾತನಾಡಲಿದ್ದಾರೆ' ಎಂದು ತಿಳಿಸಿದರು.

ಸಾರಿಗೆ ಇಲಾಖೆ ನೌಕರರು ಬಂದ್ ಮಾಡುತ್ತೇವೆ ಎಂದು ಹೇಳಿದ್ದಾರೆ. ಅಬಕಾರಿ ಇಲಾಖೆ ಗುತ್ತಿಗೆದಾರರು ಕೂಡ ಬಂದ್ ಮಾಡಲು ಮುಂದಾಗಿದ್ದರು.

ಈ ನಡುವೆ ರಸ್ತೆ ಅಭಿವೃದ್ಧಿ, ಆಸ್ಪತ್ರೆ ನಿರ್ಮಾಣ, ಬೆಳೆಹಾನಿ ಪರಿಹಾರ ಯಾವುದಕ್ಕೂ ಹಣ ಇಲ್ಲ. ಕಲ್ಯಾಣ ಕರ್ನಾಟಕಕ್ಕೆ ಆದ್ಯತೆ ನೀಡಲು ಕಲಬುರ್ಗಿಯಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗಿತ್ತು. ಆದರೆ ಈವರೆಗೆ ಯಾವುದೇ ಯೋಜನೆಯ ಕಾರ್ಯಾದೇಶವಾಗಿಲ್ಲ ಎಂದು ದೂರಿದರು.

**ಲಂಚ ಕೇಳಿದ ಧ್ವನಿಮುದ್ರಣ ಈಗ ಬಿಡುಗಡೆಯಾಗಿದೆ :** ಅಬಕಾರಿ ಇಲಾಖೆಯಲ್ಲಿ ಪರವಾನಗಿಗೆ ಅರ್ಜಿ ಸಲ್ಲಿಸಿದಾಗ ಲಂಚ ಕೇಳಿದ ಧ್ವನಿಮುದ್ರಣ ಈಗ ಬಿಡುಗಡೆಯಾಗಿದೆ. ಕಾಂಗ್ರೆಸ್ ಕಾರ್ಯಕರ್ತ ಆಗಿರುವುದರಿಂದ ಶೇ.50 ರಿಯಾಯಿತಿ ಎಂದು ಅಧಿಕಾರಿ ಹೇಳಿದ್ದಾರೆ. ಇದು ಈಗ ಜಗಜ್ಜಾಹೀರಾಗಿದೆ.

ಈ ಭ್ರಷ್ಟಾಚಾರದ ವಿರುದ್ಧವೂ ಬಿಜೆಪಿ ಹೋರಾಟ ಮಾಡಲಿದೆ. ಇಷ್ಟು ಸಾಕ್ಷಿ ಇದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ತೆರೆದ ಪುಸ್ತಕ ಎಂದು ಹೇಳುತ್ತಿದ್ದಾರೆ. ದಾಖಲೆ ನೀಡಿದರೆ ರಾಜೀನಾಮೆ ನೀಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಈಗ ಅವರು ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು.

## ಮುಗಳಖೋಡ ಶ್ರೀಮಠಕ್ಕೆ ಬರುವ ರೈತರ ಬಾಳು ಬಂಗಾರವಾಗಲಿದೆ: ಶ್ರೀ ಮುರುಘರಾಜೇಂದ್ರ ಶ್ರೀ



**ಮುಗಳಖೋಡ:** ರೈತರು ಬೆಳೆದಿರುವ ಬೆಳೆಗೆ ಸರಿಯಾದ ಬೆಲೆ ನಿಗದಿಪಡಿಸಿದರೆ ರೈತರ ಸಾಲ ಮನ್ನಾ ಮಾಡುವ ಬದಲು, ರೈತರೆ ಸರ್ಕಾರದ ಸಾಲ ಮನ್ನಾ ಮಾಡುತ್ತಾರೆ ಅಂತಹ ಬೆಳವಣಿಗೆ ನಮ್ಮ ರೈತರದು ಎಂದು ಮುಗಳಖೋಡ–ಜಿಡಗಾ ಮಠದ ಪೀಠಾಧಿಪತಿ ಡಾ. ಶ್ರೀ ಮುರುಘರಾಜೇಂದ್ರ ಸ್ವಾಮಿಗಳು ರೈತರನ್ನು ಕುರಿತು ಮಾತನಾಡಿದರು.

ಅವರು 40 ನೇ ಗುರುವಂದನ ಕಾರ್ಯಕ್ರಮದ ನಿಮಿತ್ಯ ಹಮ್ಮಿಕೊಂಡ ಪ್ರವಚನದ ದಿವ್ಯ ಸಾನಿದ್ಯವಹಿಸಿ ಮಾತನಾಡಿ ಮುಗಳಖೋಡ ಶ್ರೀಮಠಕ್ಕೆ ಬರುವ ರೈತರ ಬಾಳು ಬಂಗಾರವಾಗಲಿದೆ ಎಂದು ಆಶೀರ್ವಚನ ನೀಡಿದರು.

ನಂತರ ಪ್ರವಚನಕಾರರಾಗಿ ಆಗಮಿಸಿದ್ದ ಶೇಗುಣಸಿ ವಿರಕ್ತಮಠದ ಡಾ. ಶ್ರೀ ಮಹಾಂತ ಸ್ವಾಮಿಗಳು ಸಮಾಜಮುಖಿ ಕಾರ್ಯಕ್ರಮಕ್ಕೆ ಹೆಸರುವಾಸಿಯಾಗಿರುವ ಮುಗಳಖೋಡ ಶ್ರೀಮಠ ದೇಶವೇ ಪಟ್ಟಣದತ್ತ ನೋಡುವಹಾಗೆ ಸಾಮಾಜಿ–ಕ ಮತ್ತು ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಒಂದು ವಿಶೇಷ ಮಠವಾಗಿದೆ ಎಂದರು.

ನಂತರ ಚಿನ್ಮಯಗಿರಿಯ ವೀರಮಹಾಂತ ಶಿವಾಚಾರ್ಯ, ಬೆಳಗಲಿಯ ಸಿದ್ದರಾಮ ಶಿವಯೋಗಿ, ಸಂಗಮ ತಾಯಿ ಅವರು ಪ್ರವಚನ ನೀಡಿದರು. ಕಾರ್ಯಕ್ರಮದಲ್ಲಿ ಮಠದ ವ್ಯವಸ್ಥಾಪಕರು, ಸ್ವಾಗತ ಸಮಿತಿ, ಅಪ್ಪಾಜಿ ಸೆಕ್ಯೂರಿಟಿ ಫೋರ್ಸ್ ಸೇ–ರಿದಂತೆ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಖ್ಯಾತ ನ್ಯಾಯವಾದಿ ಸೋಮು ಹೊರಟ್ಟಿ ನಿರೂಪಿಸಿ ವಂದಿಸಿದರು.

### ಬಾಲ್ಯ ವಿವಾಹ ನಿಷೇದ ಕುರಿತು ಕಾರ್ಯಕ್ರಮ
## ಬಾಲ್ಯ ವಿವಾಹ ತಡೆಯಲು 1098 ಸಹಾಯವಾಣಿಗೆ ತಿಳಿಸಲು ಕರೆ

**ಯರಗಟ್ಟಿ:** ಬಾಲ್ಯದಲ್ಲಿ ಯಾವುದೇ ಮಗು ಹೆಣ್ಣಾಗಲಿ ಗಂಡಾಗಲಿ ವಿವಾಹ ಮಾಡಬಾರದು ಅಂತವರಿಗೆ ಅಂತವರಿಗೆ ಪೋಕ್ಸೊ ಎಂದು ಕಾನೂನು ಇದೆ ಅದರಿಂದ ಕಠಿಣ ಶಿಕ್ಷೆಗೆ ಗುರಿಯಾಗುತ್ತಾರೆ ಎಂದು ಗ್ರಾಪಂ ಅಭಿವೃದ್ಧಿ ಅಧಿಕಾರಿ ಸಂಕಪ್ಪ ಪಡಿ ಹೇಳಿದರು.

ಅವರು ಗುರುವಾರ ದಿ.28 ರಂದು ಸಮೀಪದ ಕೋಟೂರ ಶಿವಾಪೂರ ಗ್ರಾಮ ಪಂಚಾಯತಿ ಗ್ರಂಥಾಲಯ ಅರಿವು ಕೇಂದ್ರದಲ್ಲಿ ಬಾಲ್ಯವಿವಾಹ ನಿರ್ಮೂಲನಾ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಮನೆಯ ಅಕ್ಕ ಪಕ್ಕದಲ್ಲಿ ಕೋಡಾ ಕದ್ದು ಮುಚ್ಚಿ ಬಾಲ್ಯ ವಿವಾಹ ಮಾಡುತ್ತಿದ್ದರೆ ಅಂತವರನ್ನು 1098 ಸಹಾಯವಾಣಿಗೆ ತಿಳಿವಂತೆ ಹೇಳಿದರು. ಸಹಾಯವಾಣಿಗೆ ಕರೆ ಮಾಡುವುದರಿಂದ ಬಾಲ್ಯ ವಿವಾಹ ತಡೆಗಟ್ಟಬಹುದು ಎಂದರು.

ಅಂಗನವಾಡಿ ಕಾರ್ಯಕರ್ತರಾದ ಭಾರತಿ ಮಠದ ಮಾತನಾಡಿ ಬಾಲ್ಯವಿವಾಹ ನಿಷೇದ ಕಾಯ್ದೆ 2006ರ ಪ್ರಕಾರ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾದ ವಾಗಿರುವುದರಿಂದ ನಮ್ಮ ಊರು ಮತ್ತು ನಮ್ಮ ರಾಜ್ಯವನ್ನು ಬಾಲ್ಯ ವಿವಾಹ ಮುಕ್ತ ರಾಜ್ಯವನ್ನಾಗಿಸುವ ದಿಶೇಯಲ್ಲಿ ಎಲ್ಲಾ ಅಗತ್ಯ ಕ್ರಮ ತೆಗೆದುಕೊಂಡು ಮಕ್ಕಳ ಅಭಿವೃದ್ದಿಗಾಗಿ ಕೆಲಸ ಮಾಡುತ್ತೆನೆಂದು ಎಲ್ಲಾ ಮಕ್ಕಳಿಂದ ಶ್ರದ್ದಾ ಪೂರ್ವಕವಾಗಿ ಪ್ರಮಾಣ



ಮಾಡಿದರು. ನನ್ನ ವಯಕ್ತಿಕ ನೆಲೆಯಿಂದ ಸಮಾಜದಲ್ಲಿನ ಸ್ಥಾನ ಮಾನದ ನೆಲೆಯಿಂದ ನನ್ನ ಕುಟುಂಬದಲ್ಲಿ ಬಂದು ಬಳಗದಲ್ಲಿ ಸಮೂದಾಯದಲ್ಲಿ ಹಾಗೂ ಸಮಾಜದಲ್ಲಿ ನಾನು ಬಾಲ್ಯ ವಿವಾಹಗಳನ್ನು ವಿರೋದಿಸೂಣ ಎಂದು ತಿಳಿಸಿದರು. 18 ವರ್ಷದ ಒಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದ ಒಳಗಿನ ಗಂಡು ಮಕ್ಕಳಿಗೆ ವಿವಾಹ ನಡೆಸುವ ಸಾದ್ಯತೆ ಕಂಡು ಬಂದಲ್ಲಿ ಅದನ್ನು ಪೋಲಿಸ್ ರಿಗೆ ಅಥವಾ ನ್ಯಾಯಾಧಿಶರಿಗೆ ತಿಳಿಸಲು ಹೇಳಿದರು.

ಸಂದರ್ಬದಲ್ಲಿ ಶಿಕ್ಷಕಿಯರಾದ ಸರಸ್ವತಿ ಚಿಗರಿ, ಶೀವಲೀಲಾ ಸಂಭಾಳದ, ಅನಿತಾ ಇತಾಪಿ, ಮಮತಾಜ ಮುಲ್ಲಾ, ಸರಸ್ವತಿ ಬೆಟಸೋರ, ಮಂಜುಳಾ ಪಾಟೀಲ, ಎ ಎಸ್ ಮುಲ್ಲಾ, ಮಹಾದೇವ ಜಕ್ಕನ್ನವರ, ಎಸ್ ಎಮ್ ಪಾಟೀಲ, ಮಹಾಂತೇಶ ಮಠಪತಿ, ಮುಂತಾದವರು ಇದ್ದರು.

### ವಿವಿಧ ಪಂಚಾಯತಿಗಳಿಗೆ ಜಿ.ಪಂ.ಸಿಇಓ ರಿಷಿ ಆನಂದ ಭೇಟಿ : ಪರಿಶೀಲನೆ
## ಪಂಚಾಯತಿಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಲು ಸೂಚನೆ

**ವಿಜಯಪುರ**: ಬಸವನಬಾಗೇವಾಡಿ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ಬುಧವಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಸವನ ಬಾಗೇವಾಡಿ ತಾಲೂಕು ಪಂಚಾಯಿತಿ ಮತ್ತು ನರಸಲಗಿ ಗ್ರಾಮ ಪಂಚಾಯಿತಿಗೆ ದಿಢೀರ್ ಭೇಟಿ ನೀಡಿ ವಿವಿಧ ಯೋಜನೆಗಳ ಕಾಮಗಾರಿಗಳನ್ನು ಪರಿಶೀಲನೆ, ತಾಲೂಕು ಪಂಚಾಯಿತಿ ಕಛೇರಿ ಸಿಬ್ಬಂದಿ ಹಾಜರಾತಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿದ ಅವರು, ಕಛೇರಿ ಒಳಾಂಗಣ ಹಾಗೂ ಹೊರಾಂಗಣ ಆವರಣಗಳನ್ನು ಪ್ರತಿದಿನ ಸ್ವಚ್ಛತೆಯಿಂದ ಕಾಪಾಡಿಕೊಳ್ಳಬೇಕು ಮತ್ತು ಪ್ರತಿ ಮಾಹೆಯ ಮೊದಲನೇ ಶನಿವಾರ ಸ್ವಚ್ಛ ಶನಿವಾರ ಆಚರಣೆ ಮಾಡುವಂತೆ ಅವರು ಸೂಚನೆ ನೀಡಿದರು.

ನರಸಲಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಂಚಿನಾಳ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಅಂಗನವಾಡಿಗೆ ಭೇಟಿ ನೀಡಿ, ಮಕ್ಕಳ ಹಾಜರಾತಿ, ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ, ಬಿಸಿಯೂಟ ಕೋಣೆ ಮತ್ತು ದಾಸ್ತಾನುಗಳನ್ನು ಪರಿಶೀಲಿಸಿದರು. ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿನಿತ್ಯ ಸ್ವಚ್ಛತೆಯನ್ನು ಕಾಪಾಡಬೇಕು. ಸದರಿ ಕೇಂದ್ರದ ಮಕ್ಕಳಿಗೆ ಸರಿಯಾಗಿ ಶಾಲಾ ಪೂರ್ವ ಶಿಕ್ಷಣ ನೀಡಬೇಕು. ಕೇಂದ್ರದಲ್ಲಿ ಪ್ರತಿನಿತ್ಯ ಸ್ವಚ್ಛತೆ ಕಾಪಾಡಿಕೊಳ್ಳುವುದರ ಜೊತೆಗೆ ಮಕ್ಕಳಿಗೆ ಶಿಸ್ತು ಪಾಲನೆ ಹಾಗೂ ಕಲಿಕೆಗೆ ಆದ–್ಯತೆ ನೀಡಬೇಕು. ಪ್ರತಿ ತಿಂಗಳು ಕಡ್ಡಾಯವಾಗಿ ಮಕ್ಕಳು, ಬಾಣಂತಿಯರಿಗೆ ಪೂರಕ ಪೌಷ್ಟಿಕ ಆಹಾರದ ಸಮರ್ಪಕ ವಿತರಣೆ ಮಾಡಬೇಕು. ಪ್ರತಿ ಮಾಹೆ ಮಕ್ಕಳ ಆರೋಗ್ಯ ತಪಾಸಣೆ ಕೈಗೊಳ್ಳುವಂತೆ ಸೂಚನೆ ನೀಡಿದರು,.

ಪ್ರತಿ ವಾರ ಶ್ರಮದಾನ ಹಮ್ಮಿಕೊಳ್ಳಬೇಕು. ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರವನ್ನು ಕಡ್ಡಾಯವಾಗಿ ವಿತರಣೆ ಮಾಡಬೇಕು. ಸರ್ಕಾರಿ ಶಾಲೆಯಲ್ಲಿಯೂ ಸಹ ಮಕ್ಕಳಿಗೆ ಉತ್ತಮ ಗುಣಮಟ್ಟದ ಬಿಸಿಯೂಟವನ್ನು ತಯಾರಿಸಿ ವಿತರಿಸಬೇಕು ಎಂದು ಶಾಲಾ ಮುಖ್ಯೋಪಾಧ್ಯಾಯರಿಗೆ ಹಾಗೂ ಅಂಗನವಾಡಿ ಕಾರ್ಯಕರ್ತೆಗೆ ಸೂಚಿಸಿದರು.



ನರಸಲಗಿ ಗ್ರಾಮದ ಪ್ರೌಢ ಶಾಲೆಗೆ ಭೇಟಿ ನೀಡಿ, ಹತ್ತನೇ ತರಗತಿ ಕೊಠಡಿಗೆ ತೆರಳಿ ಮಕ್ಕಳ ಕಲಿಕಾ ಮಟ್ಟವನ್ನು ಪರಿಶೀಲಿಸಿದರು. ಇದೇ ವೇಳೆ 10ನೇ ತರಗತಿಯ ಮಕ್ಕಳಿಗೆ ಗಣಿತ ವಿಷಯವನ್ನು ಬೋಧನೆ ಮಾಡಿದ ಅವರು, ಹತ್ತನೇ ತರಗತಿಯ ವಿದ್ಯಾರ್ಥಿಗಳು ಅಭ್ಯಾಸದಲ್ಲಿ ಹೆಚ್ಚಿನ ಗಮನವಿಟ್ಟು ಓದಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶವನ್ನು ಪಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತುಗಳನ್ನು ಹೇಳಿದರು. ಬಳಿಕ ನರಸಲಗಿ ಹಿಂದುಳಿದ ವರ್ಗದ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ವಸತಿ ನಿಲಯದ ಆವರಣ, ಆಹಾರ ಕೋಣೆ, ಶುದ್ಧ ಕುಡಿಯುವ ನೀರು, ಅಡುಗೆ ಕೋಣೆ, ಗ್ರಂಥಾಲಯ ಪರಿಶೀಲಿಸಿ, ಅಡುಗೆ ಕೋಣೆ, ವಸತಿ ಕೋಣೆ, ಶೌಚಾಲಯ ಮತ್ತು ಆವರಣವನ್ನು ಪರಿಶಿಲಿಸಿದರು. ನಿಲಯದ ಆವರಣದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಪೌಷ್ಟಿಕ ಕೈತೋಟವನ್ನು ನಿರ್ಮಿಸಿಕೊಳ್ಳಲು ಅಲ್ಲಿನ ಸಿಬ್ಬಂದಿಗೆ ಸಲಹೆ ನೀಡಿದರು. ವಸತಿ ನಿಲಯದ ವಿದ್ಯಾರ್ಥಿಗಳಿಗೆ ಕೊಠಡಿ ವ್ಯವಸ್ಥೆ ಬೆಡ್ ವ್ಯವಸ್ಥೆಗಳು ಕಡಿಮೆ ಇದ್ದಲ್ಲಿ ಜಿಲ್ಲಾ ಪಂಚಾಯಿತಿಗೆ ಅರ್ಜಿ ಸಲ್ಲಿಸಲು ವಸತಿ ನಿಲಯದ ವಾರ್ಡನ್ ರವರಿಗೆ ಸೂಚನೆ ನೀಡಿದರು. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಸಿಬ್ಬಂದಿ ಹಾಜರಾತಿ ಪರಿಶೀಲನೆ ನಡೆಸಿದ ಅವರು, ಆಸ್ಪತ್ರೆಯಲ್ಲಿ ನಿರಂತರ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಸೂಚನೆ ನೀಡಿದರು. ನರಸಲಗಿ ಗ್ರಾಮದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಸತಿ ನಿಲಯಕ್ಕೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದ ಅವರು, ವಸತಿ ನಿಲಯದ ಸ್ವಚ್ಛತೆ ಮತ್ತು ಶಿಸ್ತು ಪಾಲನೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು.

ವಸತಿ ನಿಲಯದಲ್ಲಿ ಕುಡಿಯುವ ನೀರು ಮತ್ತು ಇತರೆ ಸಣ್ಣ ಪುಟ್ಟ ಸಮಸ್ಯೆಗಳಿದ್ದಲ್ಲಿ ಕೂಡಲೇ ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ನಿಲಯ ಪಾಲಕರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರಾದ ಎ ಎಮ್ ನರಸರಡ್ಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯದ ನಿಲಯಪಾಲಕರಾದ ರಸೂಲಸಾಬ, ಅಂಗನವಾಡಿ ಕಾರ್ಯಕರ್ತೆ ಗೀತಾ ಚಿಂಚೋಳ್ಳಿ ಹಾಗೂ ಇತರರು ಉಪಸ್ಥಿತರಿದ್ದರು.

## ನಾಲ್ಕು ವರ್ಷಗಳಲ್ಲಿ 500 ಸರಕಾರಿ ಪಬ್ಲಿಕ್ ಶಾಲೆಗಳು: ಸಚಿವ ಸಂಪುಟ ನಿರ್ಣಯ

ಬೆಂಗಳೂರು: ಏಷಿಯನ್ ಅಭಿವೃದ್ಧಿ ಬ್ಯಾಂಕ್‌ನ 2500 ಕೋಟಿ ರೂ.ಗಳ ಬಾಹ್ಯ ನಿಧಿ ಸಹಯೋಗದೊಂದಿಗೆ 2025ರ ಜುಲೈ ತಿಂಗಳಿನಿಂದ 2029ರ ಜೂನ್ ತಿಂಗಳವರೆಗೆ 4 ವರ್ಷಗಳ ಕಾಲಾವಧಿಯಲ್ಲಿ ಅಸ್ತಿತ್ವದಲ್ಲಿರುವ 500 ಸರಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಪರಿವರ್ತಿಸುವ ಉಪಕ್ರಮವನ್ನು ಜಾರಿಗೊಳಿಸಲು ನಿರ್ಧರಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2024–25ನೇ ಸಾಲಿನಲ್ಲಿ ವಿವಿಧ ಕಾರ್ಯಕ್ರಮಗಳಡಿ 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಪ್ರಾಥ–'ಮಿಕ ಆರೋಗ್ಯ ಕೇಂದ್ರ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರೋಗ ಪತ್ತೆ ಮೂಲ ಸೌಕರ್ಯಗಳನ್ನು ಒದಗಿಸಲು 145.99 ಕೋಟಿ ರೂ.ಗಳ ಅಂ–ದಾಜು ಮೊತ್ತದಲ್ಲಿ ಉಪಕರಣಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದರು.

84.88 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಆರೋಗ್ಯ ಕ್ಷೇಮ ಕೇಂದ್ರ, ನಮ್ಮ ಕ್ಲಿನಿಕ್‌ಗಳಲ್ಲಿನ ಪ್ರಯೋಗಾಲಯಗಳನ್ನು ಮತ್ತು ಆರೋಗ್ಯ ಸೇವೆಗಳನ್ನು ಬಲಪಡಿಸಲು ಉಪಕರಣಗಳನ್ನು ಖರೀದಿಸಲು ಮತ್ತು ಐದು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

72.96 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನಮ್ಮ ಕ್ಲಿನಿಕ್‌ಗಳಿಗೆ ಅಗತ್ಯವಿರುವ ಔಷಧಿ ಮತ್ತು ರಾಸಾಯನಿಕಗಳನ್ನು ಪಿಎಂ–ಅಭಿಮ್ ಅನುದಾನದಲ್ಲಿ ಖರೀದಿಸಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನಿಡಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು.

2023–24ನೇ ಸಾಲಿನಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದ ಪಿಎಂ–ಅಭಿಮ್ ಯೋಜನೆಯಡಿ ಚಿಕ್ಕಬಳ್ಳಾಪುರದ ನಂದಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಅನುಮೋದನೆಯಾಗಿರುವ 50 ಹಾಸಿಗೆಗಳ ತೀವ್ರ ನಿಗಾ ಆರೈಕೆ ಘಟಕವನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿಗೆ ಸ್ಥಳಾಂತರಿಸಿ 16.63 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಅ.15ರಂದು ಆದೇಶ ಹೊರಡಿಸಿರುವ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಪಿಎಂ–ಅಭಿಮ್ ಯೋಜನೆ ಅಡಿಯಲ್ಲಿ ಅನುಮೋದಿತವಾಗಿರುವ ಒಟ್ಟು 108.36 ಕೋಟಿ ರೂ.ಗಳ ವೆಚ್ಚದಲ್ಲಿ ಒಟ್ಟು 254 ನಗರ ಆರೋಗ್ಯ ಕ್ಷೇಮಕೇಂದ್ರ–ನಮ್ಮ ಕ್ಲಿನಿಕ್‌ಗಳನ್ನು ಉಪಕರಣಗಳೊಂದಿಗೆ ಸ್ಥಾಪಿಸಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು.

'ರಾಯಚೂರು ತಾಲೂಕಿನ ಯರಮರಸ್ ಗ್ರಾಮದಲ್ಲಿ 14 ಗುಂಟೆ ಗೋಮಾಳ ಜಮೀನನ್ನು ಬಡ ವಿದ್ಯಾರ್ಥಿಗಳಿಗೆ ಉಚಿತ ವಸತಿ ನಿಲಯವನ್ನು ನಿರ್ಮಿಸಲು ಬೆಂಗಳೂರಿನಲ್ಲಿರುವ ಕರ್ನಾಟಕ ಪ್ರದೇಶ ಕುರುಬರ ಸಂಘಕ್ಕೆ ಮಂಜೂರು ಮಾಡಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದರು.

ವಾಹನ ನೋಂದಣಿ ಪ್ರಮಾಣ ಪತ್ರ ಮತ್ತು ಚಾಲನಾ ಪರವಾನಿಗಿ ನೀಡುವ ಹೊಸ ಸ್ಮಾರ್ಟ್ ಕಾರ್ಡ್ ಯೋಜನೆಗೆ ಸಂಬಂಧಿಸಿದಂತೆ ಮಾ.15ರಂದು ಹೊರಡಿಸಿರುವ ಆದೇಶದಲ್ಲಿ 'ಸಾರ್ವಜನಿಕ–ಖಾಸಗಿ ಸಹಭಾಗಿತ್ವದ(ಪಿಪಿಪಿ) ಮಾದರಿ' ಎಂಬುದನ್ನು ಕೈ ಬಿಡಲು ಜು.18ರಂದು ತಿದ್ದುಪಡಿ ಆದೇಶ ಹೊರಡಿಸಿರುವ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಲಾಗಿದೆ ಎಂದು ಅವರು ಹೇಳಿದರು.

ಕಬ್ಬು ಬೆಳೆಗಾರರ ಹಿತ ಕಾಯಲು ಎಲ್ಲ ಸಕ್ಕರೆ ಕಾರ್ಖಾನೆಗಳ ಬಳಿ ಡಿಜಿಟಲ್ ವೇ ಬ್ರಿಡ್ಜ್‌ಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಮೊದಲ ಹಂತದಲ್ಲಿ 13 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಗುರುತಿಸಿರುವ 15 ಸ್ಥಳಗಳಲ್ಲಿ 11.01 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಡಿಜಿಟಲ್ ವೇ ಬ್ರಿಡ್ಜ್ ಗಳನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಬೆಂಗಳೂರು ಉಪನಗರ ರೈಲ್ವೆ ಯೋಜನೆಗೆ ರೈಲು ಬೋಗಿಗಳನ್ನು 4300 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ರಾಜ್ಯ ಮತ್ತು ಕೇಂದ್ರ ಸರಕಾರಗಳ ಅನುದಾನದಿಂದ ಖರೀದಿಸಲು ಅನುಮೋದನೆ ನೀಡಲಾಗಿದೆ. ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲೂಕಿನ ಕಪ್ಪಡಿ ಗ್ರಾಮದ ಬಳಿ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಯನ್ನು 25 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಅವರು ಹೇಳಿದರು.

ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದಿಂದ 'ಸ್ವದೇಶ್ ದರ್ಶನ್ 2.0 ಯೋಜನೆಯಡಿ ಅನುಮೋದನೆಗೊಂಡಿರುವ ಮೈಸೂರಿನಲ್ಲಿ 'ಇಕೋಲಾಜಿಕಲ್ ಎಕ್ಸ್‌ಪೀರಿಯನ್ಸ್ ಝೋನ್' ಅಭಿವೃದ್ಧಿಪಡಿಸಲು ಯೋಜನೆಯ ಅನುಷ್ಠಾನಕ್ಕಾಗಿ 18.47 ಕೋಟಿ ರೂ.ಮೊತ್ತದ ಟೆಂಡರ್ ಅನ್ನು ರಾಜ್ಯ ಅನುಷ್ಠಾನ ಸಂಸ್ಥೆಯಾದ ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಕರ್ಯ ನಿಗಮದ ಮೂಲಕ ಕರೆಯಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದರು. ಹಂಪಿಯಲ್ಲಿ 'ಟ್ರಾವೆಲರ್ಸ್ ನೂಕ್' ಅಭಿವೃದ್ಧಿಪಡಿಸಲು ಯೋಜನೆಯ ಅನುಷ್ಠಾನಕ್ಕಾಗಿ 25.63 ಕೋಟಿ ರೂ.ಮೊತ್ತದ ಟೆಂಡರ್ ಅನ್ನು ರಾಜ್ಯ ಪ್ರವಾಸೋದ್ಯಮ ಮೂಲಸೌಕರ್ಯ ನಿಗಮದ ಮೂಲಕ ಅನುಷ್ಠಾನಗೊಳಿಸಲು ಹಾಗೂ ಮೈಸೂರು ಲಲಿತ್ ಮಹಲ್ ಅರಮನೆ ಹೊಟೇಲ್‌ನ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಅರಣ್ಯ, ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಯಿಂದ ಪಾರದರ್ಶಕ ಟೆಂಡರ್ ಪ್ರಕ್ರಿಯೆ ಮೂಲಕ ಹೊಟೇಲ್ ಆಪರೇಟರ್ ಅನ್ನು ಆಯ್ಕೆ ಮಾಡಲು ನಿರ್ಧರಿಸಲಾಗಿದೆ ಎಂದು ಅವರು ಹೇಳಿದರು.

## ನೇಕಾರ ಹೋರಾಟ: ರಸ್ತೆ ಮೇಲೆ ಅಡುಗೆ-ಊಟ



**ರಬಕವಿ–ಬನಹಟ್ಟಿ**, : ಕಳೆದ 8 ದಿನಗಳಿಂದ ಮೂಲಭೂತ ಸೌಲಭ್ಯಗಳಿಗಾಗಿ ನೇಕಾರರು ನಡೆಸುತ್ತಿರುವ ಹೋರಾಟಕ್ಕೆ ಜನಪ್ರತಿನಿಧಿಗಳ ಸ್ಪಂದನೆಯಿಲ್ಲದ ಕಾರಣ ತೀವ್ರ ಕೆಂಗಣ್ಣಿಗೆ ಕಾರಣವಾಗಿದೆ. 8 ನೇ ದಿನವಾದ ಗುರುವಾರದಂದು ಪ್ರತಿಭಟನಾ ಸ್ಥಳದಿಂದ ರಸ್ತೆಗಳಿದು ರಸ್ತೆ ಮೇಲೆಯೇ ಅಡುಗೆ ತಯಾರಿಸಿ ಊಟ ಮಾಡಿದ ಘಟನೆ ಜರುಗಿತು.

ಮನೆ ಉತಾರ, ನಿವೇಶನ ಹಂಚಿಕೆ, ನಿರಂತರ ಉದ್ಯೋಗ ಹಾಗು ಮಾಸಾಶನ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲವೆಂದು ನೇಕಾರರು ಬೀದಿಗೆ ಬಿದ್ದು ಹೋರಾಟ ನಡೆಸುತ್ತಿದ್ದಾರೆ.

ರಸ್ತೆ ಬಂದ್: ಬನಹಟ್ಟಿ–ಆಸಂಗಿ ರಸ್ತೆಯನ್ನು ಸಂಪೂರ್ಣ ಬಂದ್ ಮಾಡುವ ಮೂಲಕ ರಸ್ತೆ ಮೇಲೆಯೇ ಕುಳಿತು ಊಟ, ಉಪಹಾರ ಮಾಡುವ ಮೂಲಕ ಹೋರಾಟದ ಸ್ವರೂಪ ಬದಲಿಸಿರುವ ನೇಕಾರರು ಮುಂದಿನ ದಿನಗಳಲ್ಲಿ ಕುಡಚಿ–ಜಮಖಂಡಿ ರಾಜ್ಯ ಹೆದ್ದಾರಿ ತಡೆಯುವದಾಗಿ ಎಚ್ಚ–ರಿಕೆ ನೀಡಿದ್ದಾರೆ.

ಸುವರ್ಣ ಸೌಧ ಮುತ್ತಿಗೆ: ಬರುವ ಡಿ.10 ರಿಂದ ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುವ ಚಳಿಗಾಲ ಅಧಿವೇಶನಕ್ಕೆ ನೇಕಾರರು ಮುತ್ತಿಗೆ ಹಾಕುವಲ್ಲಿ ಸಿದ್ಧತೆ ನಡೆಸಿದ್ದೇವೆ. ಬೇಡಿಕೆ ಈಡೇರುವವರೆಗೂ ಪ್ರತಿಭಟನೆ ಕೈಬಿಡುವ ಪ್ರಶ್ನೆಯೇ ಇಲ್ಲವೆಂದು ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿ ಸರ್ಕಾರವನ್ನು ಎಚ್ಚರಿಸಿದ್ದಾರೆ.

ಬಾರದ ಪ್ರತಿನಿಧಿ: 8 ದಿನಗಳು ಕಳೆದರೂ ಯಾವೊಬ್ಬ ಜನಪ್ರತಿನಿಧಿ ಅಥವಾ ಅಧಿಕಾರಿಗಳು ನೇಕಾರರ ಸಮಸ್ಯೆ ಆಲಿಸಲು ಬಂದಿಲ್ಲ. ಜವಳಿ ಸಚಿವರು ಈ ಕುರಿತಾದ ಮಾಹಿತಿ ದೊರೆತರೂ ನಮಗೇನು ಸಂಬಂಧವಿಲ್ಲವೆಂಬ ವರ್ತನೆಯನ್ನು ಖಂಡಿಸುತ್ತೇವೆಂದು ಹೋರಾಟಗಾರರು ಬೇಸರ ಹೊರಹಾಕಿದರು. ಕೂಗಳತೆಯಲ್ಲಿಯೇ ತೇರದಾಳ ಶಾಸಕ ಸಿದ್ದು ಸವದಿಯವರ ನಿವಾಸವಿದ್ದು, ದಿನಂಪ್ರತಿ ಇದೇ ರಸ್ತೆಯಲ್ಲಿಯೇ ಅವರ ಸಂಚಾರವಿದ್ದು, ಯಾವದೇ ರೀತಿ ಸಮಸ್ಯೆ ಆಲಿಸದಿರುವದು ನಾಚಿಗೇಡಿನ ಸಂಗತಿಯೆಂದು ಶಿವಲಿಂಗ ಟಿರಕಿ ಜನಪ್ರತಿನಿಧಿಗಳ ಕ್ರಮವನ್ನು ವಿರೋಧಿಸಿದರು.

> 'ಯಾವದೇ ಕಾರಣಕ್ಕೂ ಪ್ರತಿಭಟನೆ ಹಿಂಪಡೆಯುವದಿಲ್ಲ. ಕೈಮಗ್ಗ ನೇಕಾರರ ಸಮಸ್ಯೆ ಈಡೇರಿಸದಿದ್ದಲ್ಲಿ ಹೋರಾಟದ ಸ್ವರೂಪ ಬದಲಿಸಾಗುವದು'.
> **–ಶಿವಲಿಂಗ ಟಿರಕಿ, ರಾಜ್ಯಾಧ್ಯಕ್ಷ, ನೇಕಾರ ಸೇವಾ ಸಂಘ.**

*****

# ಇಂದು ಶಾಲಾಕ್ಯ ದರ್ಪಣ ರಾಷ್ಟ್ರೀಯ ಕಾರ್ಯಾಗಾರ




ಬಾಗಲಕೋಟೆ: ಬಿ.ವಿ.ವಿ.ಸಂಘದ ಬಿ.ವಿ.ವಿ.ಎಸ್ ಆಯುರ್ವೇದ ಮೆಡಿಕಲ್ ಕಾಲೇಜಿನ ಶಾಲಾಕ್ಯ ತಂತ್ರ ವಿಭಾಗದಿಂದ ಇಂದು ಸಂಘದ ನೂತನ ಸಭಾಭವನದಲ್ಲಿ ಶಾಲಾಕ್ಯ ದರ್ಪಣ 2024 ರ ಪ್ರಾಯೋಗಿಕ ಅಂಶಗಳ ಕುರಿತು ರಾಷ್ಟ್ರೀಯ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರವನ್ನು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಉದ್ಘಾಟಿಸುವರು, ಮುಖ್ಯ ಅತಿಗಳಾಗಿ ಪುಣೆಯ ಸುದರ್ಶನ ಕಣ್ಣಿನ ಆಸ್ಪತ್ರೆಯ ನಿರ್ದೇಶಕರಾದ ಡಾ.ಸುರೇಶ ವಾಘ, ಕೊಪ್ಪಳ ಎಸ್.ಜೆ.ಜಿ ಆಯುರ್ವೇಧ ವೈಧ್ಯಕೀಯ ಮಹಾವಿದ್ಯಾಲಯದ ಶಾಲಾಕ್ಯಾ ವಿಭಾಗದ ಮುಖ್ಯಸ್ಥರಾದ ಡಾ.ವೀರಯ್ಯ ಹಿರೇಮಠ ಆಗಮಿಸಿವರು,

ಕೋಯಂಬುತ್ತಿರನ ಆಯುರ್ವೇಧಿಕ ಕಾಲೇಜಿನ ಪ್ರಾಧ್ಯಪಕರಾದ ಡಾ.ಪುಂಡರಿಕ್ಷ ರಾವ್, ವಿದ್ವಾಂನ ಆರ್.ವಿ.ಗೊಗತೆಯ ಕಾಲೇಜಿನ ಪ್ರಾಧ್ಯಾಪಕ ಡಾ. ಚಂದ್ರಕುಮಾರ ದೇಶಮುಖ, ಮುಡುಬಿದರೆಯ ಡಾ.ಸೈಪುದ್ದೀನ ಗುರಕ್ಕಲ್ ಅವರುಗಳು ಗೋಷ್ಠಿಯ ವಿಶೇಷ ಉಪನ್ಯಾಸ ನೀಡುವರು.

ಸುಮಾರು 30ಜನ ಉಪನ್ಯಾಸಕರು, 350 ಜನ ವಿಶೇಷ ಅಹ್ವಾನಿತರು, ಮತ್ತು 25 ಕಾಲೇಜುಗಳು ಆಗಮಿಸುತ್ತಿದ್ದು 60ಕ್ಕೂ ಹೆಚ್ಚು ಪ್ರಬಂದಗಳು ಮಂಡನೆಯಾಗಲಿವೆ.

ಕಾರ್ಯಕ್ರಮದಲ್ಲಿ ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿಗಳಾದ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿ ಕಾಯಾಧ್ಯಕ್ಷರಾದ ಮಲ್ಲಿಕಾರ್ಜುನ ಸಾಸನೂರ, ಪ್ರಭಾರಿ ಪ್ರಾಚಾರ್ಯ ಡಾ.ಎಂ.ಎಸ್.ಹಿರೇಮಠ, ಕಾರ್ಯಕ್ರಮ ಸಂಂ-ಯೋಜಕಿ ಡಾ.ಪಿ.ಎಸ್.ಪೋಲಿಸ ಪಾಟೀಲ, ಸಂಂ-ಯೋಜನಾ ಸದಸ್ಯರಾದ ಡಾ. ವಿ.ಜಿ.ಹಿರೇಮಠ ಉಪಸ್ಥಿತರಿರುವರು.

# ನಾಡಿ ಪರಿಕ್ಷೇ ಕಾರ್ಯಾಗಾರ



ಬಾಗಲಕೋಟೆ: ನಾಡಿ ಪರಿಕ್ಷೇ ಜನಪ್ರೀಯೆ ರೋಗ ನೀರ್ಣಯ ಸಾಧನವಾಗಿದ್ದು ಮರು ಸ್ಥಾಪಿಸುವ ಅವಶ್ಯಕತೆ ಇದೆ ಎಂದು ಡಾ.ಸಂಜಯ ಚಾಜೇಡ ಹೇಳಿದರು.

ಅವರು ಬಿ.ವಿ.ವಿ.ಸಂಘದ ಆಯುರ್ವೇಧಿಕ ಮಹಾವಿದ್ಯಾಲಯದಲ್ಲಿ ರೋಗನಿದಾನ ಹಾಗೂ ವಿಕೃತಿ ವಿಜ್ಞಾನ ವಿಭಾಗದಿಂದ ಹಮ್ಮಿಕೊಂಡ ಸ್ಪಂದನಾ 2024 ನಾಡಿ ಪರಿಕ್ಷೆ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ನಾಡಿನ ಪರೀಕ್ಷೆಗೆ ದೀರ್ಘ ಅನುಭವ ಮತ್ತು ಕೌಶಲ್ಯದ ಅಗತ್ಯವಿದೆ. ಅವು ಹಿಂದೆ ಜನಪ್ರಿಯ ರೋಗನಿರ್ಣಯ ಸಾಧನಗಳಾಗಿದ್ದವು ಆದರೆ ಇಂದು ನಿರ್ದಿಷ್ಟವಾಗಿ ಬಳಸಲಾಗುವುದಿಲ್ಲ, ಆದ-ರಿಂದ ಭವಿಷ್ಯದಲ್ಲಿ ಅವುಗಳನ್ನು ಬಳಸಬಹುದಾದ ಫಲಿತಾಂಶಗಳನ್ನು ಮರು-ಸ್ಥಾಪಿಸುವ ಅವಶ್ಯಕತೆಯಿದೆ. ಅತ್ಯಾಧುನಿಕ ಡಯಾಗ್ನೋಸ್ಟಿಕ್ ಪರೀಕ್ಷೆಗಳ ಸಹಾಯದಿಂದ ಸಹ ಗುರುತಿಸಲಾಗದ ಹಲವಾರು ಸಮಸ್ಯೆಗಳನ್ನು ನಾಡಿಮಿಡಿತವನ್ನು ಪರೀಕ್ಷಿಸುವ ಮೂಲಕ ನಿಖರವಾಗಿ ನಿರ್ಣಯಿಸಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸದ ಪಾಚಾರ್ಯ ಡಾ.ಎಮ್.ಎಸ್.ಹೀರೆಮಠ ಅವರು ನಾಡಿ ಪರೀಕ್ಷೆಯು ವ್ಯಕ್ತಿಯ ದೇಹ, ಮನಸ್ಸು, ಆತ್ಮ ಮತ್ತು ಆತ್ಮದ ಅಸ್ತಿತ್ವದಲ್ಲಿರುವ ಸ್ಥಿತಿಯನ್ನು ಪತ್ತೆಹಚ್ಚುವ ಪ್ರಾಚೀನ ಕಲೆ ಮತ್ತು ವಿಜ್ಞಾನವಾಗಿದೆ. ಇದನ್ನು ರೋಗನಿರ್ಣಯ, ಪೂರ್ವಸೂಚಕ ಸಾಧನವಾಗಿ ಬಳಸಲಾಗುತ್ತದೆ ಎಂದರು.

ವೇದಿಕೆ ಮೇಲೆ ಡಾ.ಪ್ರಕಾಶ ದೇಶಪಾಂಡೆ, ಡಾ.ಆರ್.ಆಯ್.ಜಂಬಗಿ,ಡಾ.ಗುರುರಾಜ ಕುಲಕರ್ಣಿ ಸೇರಿದಂತೆ ಅನೇಕರು ಇದ್ದರು.

### ವಸತಿ ನಿಲಯ ಮಕ್ಕಳ ಸಾಧನೆಗೆ ಸಿಬ್ಬಂದಿ ಪ್ರೇರಿತರಾಗಬೇಕು : ಸಚಿವ ತಂಗಡಗಿ

## ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಜವಾಬ್ದಾರಿ ಹೆಚ್ಚಿದೆ



ಬೈಲಹೊಂಗಲ- ತಾಲೂಕಿನ ಸಂಗೊಳ್ಳಿಯ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯ ಸಭಾಭವನದಲ್ಲಿ ಮಂಗಳವಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಬೆಳಗಾವಿ ವಿಭಾಗ ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಪ್ರಗತಿ ಪರೀಶೀಲನಾ ಸಭೆ ಜರುಗಿತು.

ರಾಜ್ಯದಲ್ಲಿ ಬಡ ವಿದ್ಯಾರ್ಥಿಗಳಿಗಾಗಿಯೇ ಸ್ಥಾಪಿಸಿದ ವಿವಿಧ ತೆರನಾದ ವಸತಿ ನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರ ಸಿಗಬೇಕೆಂದರೆ ಜಿಲ್ಲಾ ಮತ್ತು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅತೀ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಆಹಾರ ಸಾಮಗ್ರಿಗಳ ಡೋರ್ ಡಿಲೆವರಿ ಕಡೆಗೆ ಹೆಚ್ಚಿನ ಗಮನ ಮತ್ತು ಆದ್ಯತೆ ನೀಡಬೇಕು.

ಸ್ವತಹ: ನಾನು ಸಹ ಹಾಸ್ಟೇಲದಲ್ಲಿ ಇದ್ದು ಶಿಕ್ಷಣ ಪೂರೈಸಿದ್ದು ಅಲ್ಲಿನ ವಾತಾವರಣ ಖುದ್ದಾಗಿ ಅನುಭವಿಸಿದ್ದೇನೆ. ಆದರೆ ಪ್ರಸ್ತುತ ವಸತಿ ನಿಲಯಗಳ ಮತ್ತು ವಿದ್ಯಾರ್ಥಿಗಳ ಶ್ರೇಯೋಭಿವೃದ್ದಿಗಾಗಿ ರಾಜ್ಯ ಸರಕಾರ ಸಾಕಷ್ಟು ಅನುದಾನ, ಪ್ರೋತ್ಸಾಹ ನೀಡುತ್ತಿದ್ದು ಮಹತ್ವಾಕಾಂಕ್ಷೆಯ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಂಡು ಸದ್ಭಳಕೆಯಾಗಿ ಇಲಾಖೆಯ ಶ್ರಮ ಸಾರ್ಥಕವಾಗುವದರೊಂದಿಗೆ ರಾಜ್ಯದಲ್ಲಿ ಮಾದರಿಯಾಗಬೇಕು.

ವಸತಿ ನಿಲಯದಲ್ಲಿರುವ ಮಕ್ಕಳು ಅಲ್ಲಿನ ಸಿಬ್ಬಂದಿಗಳನ್ನು ವಿಶ್ವಾಸಕ್ಕಿಟ್ಟುಕೊಂಡು ವ್ಯಾಸಂಗ ಮಾಡುತ್ತಿರುತ್ತಾರೆ. ಅಂಥಹ ಮುಗ್ಧ ಮಕ್ಕಳಿಗೆ ಯಾವತ್ತೂ ದ್ರೋಹ ಮಾಡಬೇಡಿ. ಜೊತೆಗೆ ಆಡಳಿತ ಕೂಡಾ ಪಾರದರ್ಶಕವಾಗಿರಬೇಕು. ವಸತಿ ನಿಲಯದ ವ್ಯವಸ್ಥೆಯಲ್ಲಾಗಲೀ, ಕಚೇರಿಯಲ್ಲಾಗಲೀ ರಾಜ-ಕೀಯ ಪ್ರೇರಿತವಾಗಿ ಕಾರ್ಯನಿರ್ವಹಿಸಿದರೆ ಅಂಥ-ವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲಾಗುದೆಂದರು. ಯಾವದೇ ವ್ಯವಸ್ಥೆಯ ಜೊತೆ ಹೊಂದಾಣಿಕೆ ಮಾಡಿಕೊಳ್ಳದೇ ಕರ್ತವ್ಯ ನಿರ್ವಹಿಸಬೇಕೆಂದರು.

ಸರಕಾರ ಬಡ ಮಕ್ಕಳ ಸೇವೆ ಮಾಡುವ ಅವಕಾಶವನ್ನು ನೀವು ಪಡೆದಿದ್ದು ಆ ಕಾರ್ಯವನ್ನು ಭಗವಂತನ ಸೇವೆ ಅಂತಾ ನಿರ್ವಹಿಸಿ ವಿದ್ಯಾರ್ಥಿಗಳ ಸಾಧನೆಗೆ ಪ್ರೇರಣೆಯಾಗಬೇಕು ಎಂದು ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ಇಲಾಖೆಯ ಅಧಿಕಾ-ರಿಗಳು ಆಕಸ್ಮಾತ ಬೇಟಿ ಕೊಟ್ಟಾಗ ತಾವೂ ಕರ್ತವ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳಲ್ಲಿ ಅವ್ಯವಸ್ಥೆ ಕಂಡು ಬಂದರೆ ನಿರ್ದಾಕ್ಷಿಣ್ಯವಾಗಿ ಸೇವೆಯಿಂದ ಅಮಾನತು ಮಾಡಲಾಗುವದೆಂದು ಖಡಕ್ ಎಚ್ಚ-ರಿಕೆ ನೀಡಿದರು. ಪ್ರಸಕ್ತ ಸಾಲಿನಲ್ಲಿ ಓದುತ್ತಿರುವ ಪಿಯುಸಿ ಮತ್ತು ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷೆ ಫಲಿತಾಂಶ ಗುಣಮಟ್ಟವಾಗಲು ನಿವೆಲ್ಲ ಪರೀಶ್ರಮಿಸಬೇಕು.

ಇಲಾಖೆಯಿಂದ ಭವಿಷ್ಯದಲ್ಲಿ ಮಹತ್ವದ ಯೋಜನೆಗಳನ್ನು ರೂಪಿಸುವ ಯೋಚನೆ ಇದ್ದು ಪಾರದರ್ಶಕ, ಪ್ರಾಮಾಣಿಕ, ಮಾದರಿಯಾಗಿ ಕಾರ್ಯನಿರ್ವಹಿಸುವಂತಹ ಅಧಿಕಾರಿ/ನೌಕರ-ರಿಗೆ ಡಿ.ದೇವರಾಜ ಅರಸ್ ಎಂಬ ಸಾಧಕರ ಹೆಸ-ರಿನ ಪ್ರಶಸ್ತಿ ಪುರಸ್ಕಾರ ಮಾಡಲಾಗುವದೆಂದು ಸಭೆಯಲ್ಲಿ ತಿಳಿಸಿದರು. ಈಗಾಗಲೇ ನಮ್ಮ ಸರಕಾರದ ಅವಧಿಯಲ್ಲಿ ಸುಮಾರು 9000 ಸಾವಿರ ಬಡ ರೈತರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಬೋರವೆಲ್‌ಗಳನ್ನು ಕೊರೆಸಿದ್ದು ಮುಂಬರುವ ದಿನಗಳಲ್ಲಿ ಇನ್ನೂಳಿದ ಬೋರವೆಲ್‌ಗಳನ್ನು ಕೊರೆಸಲಾಗುವದು. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮತ್ತಷ್ಟು ವಸತಿ ಶಾಲೆಗಳಿಗೆ ಆಧ್ಯತೆ ನೀಡಲಾಗುವದೆಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಸಂಜಯ ಶೆಟ್ಟೆಣ್ಣವರ, ಆಯುಕ್ತರಾದ ಕೆ.ಶ್ರೀನಿವಾಸ, ಇಲಾಖೆಯ ಜಂಟಿ ನಿರ್ದೇಶಕ (ವಸತಿ)ಬಿ.ಎನ್.ಪ್ರದೀಪ್, ಅಲೆಮಾರಿ ಕೋಶದ ಜಂಟಿ ನಿರ್ದೇಶಕ ಜಿ.ಜಗದೀಶ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾವುಲ್ ಶಿಂದೆ, ಹಿಂದುಳಿದ ವರ್ಗಗಳ ಜಿಲ್ಲಾ ಕಲ್ಯಾಣಾಧಿಕಾರಿ ಹರ್ಷ ಎಸ್, ಡಿ.ದೇವರಾಜ ಅರಸ್ ಅಭಿವೃದ್ದಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಎಸ್.ಎನ್.ಬಾಣಸಿ ಉಪಸ್ಥಿತರಿದ್ದರು. ಬೆಳಗಾವಿ ವಿಭಾಗ ಮಟ್ಟದ ವಿವಿಧ ಜಿಲ್ಲೆಯ ಇಲಾಖೆಯ ಜಿಲ್ಲಾ ಕಲ್ಯಾಣಾಧಿಕಾ-ರಿಗಳು, ತಾಲೂಕಾ ಕಲ್ಯಾಣಾಧಿಕಾರಿಗಳು, ಸಿಬ್ಬಂದಿ ಪಾಲ್ಗೊಂಡಿದ್ದರು.

# ಸಿರಿಧಾನ್ಯ ನಡಿಗೆ ಮೂಲಕ ಕೊಪ್ಪಳದಲ್ಲಿ ಪಾರಂಪರಿಕ ಆಹಾರ ಪದ್ಧತಿಗಳ ವಿಶೇಷ ಅರಿವು

ಕೊಪ್ಪಳ : ಕೃಷಿ ಇಲಾಖೆ ವತಿಯಿಂದ ಬುಧವಾರ ಕೊಪ್ಪಳ ನಗರದಲ್ಲಿ ಸಿರಿಧಾನ್ಯ ನಡಿಗೆ ಮೂಲಕ ಕೊಪ್ಪಳದಲ್ಲಿ ಪಾರಂಪ-ರಿಕ ಆಹಾರ ಪದ್ಧತಿಗಳ ವಿಶೇಷ ಅರಿವು ಮೂಡಿಸಲಾಯಿತು.

2024-25ನೇ ಸಾಲಿನ ಸಿರಿಧಾನ್ಯ ನಡಿಗೆ ಕಾರ್ಯಕ್ರಮಕ್ಕೆ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿಗಳು ಶ್ರೀ ಗವಿಮಠ ಆವರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ, ಸಹಾಯಕ ಕೃಷಿ ನಿರ್ದೇಶಕ ಜೀವನಸಾಬ ಸೇರಿದಂತೆ ಕೃಷಿ ಹಾಗೂ ವಿವಿಧ ಇಲಾಖೆಗಳ ಅಧಿಕಾ-ರಿಗಳು, ಸಿಬ್ಬಂದಿ, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಇನ್ನಿತರರು ಇದ್ದರು.

ಪಾರಂಪರಿಕ ಆಹಾರ ಪದ್ಧತಿಗಳ




ವಿಶೇಷ ಅರಿವು: ನಗರದ ಶ್ರೀ ಗವಿಮಠ ಆವರಣದಿಂದ ಆರಂಭವಾದ ಸಿರಿಧಾನ್ಯ ನಡಿಗೆಯು ಗಡಿಯಾರ ಕಂಬ ಮತ್ತು ಜವಾಹರ ರಸ್ತೆ ಮಾರ್ಗವಾಗಿ ನಗರದ ಅಶೋಕ ಸರ್ಕಲ್ ವರೆಗೆ ನಡೆಯಿತು. ಸಿರಿಧಾನ್ಯಗಳು ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ಹೃದಯ ಆರೋಗ್ಯ, ಮಧುಮೇಹ ನಿಯಂತ್ರಣ ಮತ್ತು ತೂಕ ಸಮತೋಲನಕ್ಕೆ ಸಹಾಯ ಮಾಡುತ್ತವೆ. ಈ ಆಹಾರಗಳ ಉಪಯೋಗ ವಿವಿಧ ರೀತಿಯ ಸ್ಪರ್ಧೆಗಳು ನಮ್ಮ ಪಾರಂಪರಿಕ ಆಹಾರ ಪದ್ಧತಿಗಳನ್ನು ಜನಪ್ರಿಯಗೊಳಿಸಲು ಸಹಾಯ ಮಾಡುತ್ತವೆ. ಈ ಹಿನ್ನೆಲೆಯಲ್ಲಿ ಕಾರ್ಯಕ್ರಮದಲ್ಲಿ ನಮ್ಮ ನಡಿಗೆ ಸಿರಿಧಾನ್ಯಗಳ ಕಡೆಗೆ, ಸಿರಿಧಾನ್ಯ ಸಿಂಗಾರ ಆರೋಗ್ಯ ಬಂಗಾರ, ಸಿರಿಧಾನ್ಯಗಳ ತಾಕತ್ತು ಸಕಲ ಪೌಷ್ಠಿಕಾಂಶಗಳ ಸಂಪತ್ತು, ಸಿರಿಧಾನ್ಯ ಬೆಳೆ ಇರಲಿ ಪ್ರೋತ್ಸಾಹ ಧನ ತರಲಿ, ಬರಗಾರದಲ್ಲೂ ಬಂಗಾರ ಸಿರಿಧಾನ್ಯ, ಸಿರಿಧಾನ್ಯ ಬಳಸಿರಿ ಆರೋಗ್ಯದಲ್ಲಿ ಸಿರಿವಂತರಾಗಿ, ಸಜ್ಜೆ ತಿಂದವರು ಉತ್ಸಾಹದ ಕಹಳೆ ಊದುವರು, ರಾಗಿ ತಿಂದವರು ರೋಗದಿಂದ ಮುಕ್ತರಾಗುವರು' ಎಂಬ ಸಂದೇಶ ಫಲಕಗಳನ್ನು ಹಿಡಿದು ವಿಶೇಷ ಜಾಗೃತಿ ಮೂಡಿಸಲಾಯಿತು.

*********

# ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿ: ಡಾ.ಜಗನ್ನಾಥ ವಿ. ಚವಾಣ

ಬಾಗಲಕೋಟೆ: ದೇಶದ ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಸಮಾನ ಅವಕಾಶ ನೀಡಿದ್ದು, ಸಂವಿಧಾನದ ಕಾಯ್ದೆ, ನಿಯಮಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದು ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಜಗನ್ನಾಥ ವಿ. ಚವಾಣ ಹೇಳಿದರು.



ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಚುನಾವಣಾ ಸಾಕ್ಷರತಾ ಘಟಕ ಮತ್ತು ಎನ್ ಎಸ್ ಎಸ್ ಘಟಕಗಳ ಸಹಯೋಗದಲ್ಲಿ ಜರುಗಿದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರಜಾಪ್ರಭುತ್ವದ ಹಿತವನ್ನು ಪ್ರತಿಯೊಬ್ಬರು ಕಾಪಾಡಬೇಕು. ಸರ್ವ ಧರ್ಮದವರು ಒಂದೇ ಎಂಬ ಭಾವನೆ ಮೂಡಬೇಕು. ಸಾಮಾಜಿಕ ಧರ್ಮ ಹಿನ್ನೆಲೆಗಳು ಬೇರೆ ಇದ್ದರೂ ಪ್ರತಿಯೊಬ್ಬರಿಗೂ ಮುಕ್ತ ಅವಕಾಶ ಸಿಗಬೇಕು ಎಂಬ ಡಾ.ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಸಂವಿಧಾನ ರಚಿಸಲಾಗಿದೆ. ವಿಶ್ವಕ್ಕೆ ಭಾರತ ಸಂವಿಧಾನ ಮಾದರಿ ಎಂದು ಬಣ್ಣಿಸಿದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀಮತಿ. ಸಂಗೀತಾ ಪವಾರ ಮಾತನಾಡಿ ನಮ್ಮ ದೇಶದ ಸಂವಿಧಾನ ಪವಿತ್ರವಾಗಿದ್ದು. ಎಲ್ಲರಿಗೂ ಎಲ್ಲ ರೀತಿಯ ಹಕ್ಕುಗಳು ದೊರಕಲಿದೆ. ಸಂವಿಧಾನಕ್ಕೆ ಪ್ರತಿಯೊಬ್ಬರೂ ಗೌರವ ನೀಡಬೇಕಿದೆ. ಸಂವಿಧಾನದ ಬಗ್ಗೆ ತಿಳಿದುಕೊಳ್ಳಲು ವಿದ್ಯಾರ್ಥಿಗಳು ಅಧ್ಯಯನಶೀಲರಾಗಿ ಇದರ ಮಹತ್ವ ಅರಿಯಬೇಕಿದೆ ಎಂದರು.

ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಎಂ.ನಂಜುಂಡಸ್ವಾಮಿ ಮಾತನಾಡಿ ಸಂವಿಧಾನದ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ತಿಳಿ ಹೇಳಿದರು. ಆಯ್.ಕ್ಯೂ.ಎ.ಸಿ ಸಂಯೋಜಕರಾದ ಶ್ರೀಮತಿ ಗಿರಿಜಾ ಎಂ. ನಾವದಗಿ ಮಾತನಾಡಿ ಭಾರತ ಸಂವಿಧಾನದ ಪುಸ್ತಕವನ್ನು ಓದಿ ಅದರ ಜ್ಞಾನವನ್ನು ಪಡೆಯಿರಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎನ್. ಎಸ್.ಎಸ್ ಘಟಕದ ಅಧಿಕಾ-ರಿಗಳಾದ ಡಾ. ಎಂ.ಎಂ. ಹುದ್ದಾರ, ಪಿ ಎಸ, ಮಠದ, ಚುನಾವಣಾ ಸಾಕ್ಷರತಾ ಘಟಕದ ಅಧಿಕಾರಿಯಾದ ಶ್ರೀ ಎಂ.ಎಚ್.ಜನ್ನಪ್ಪಗೋಳ, ಕ್ರೀಡಾ ವಿಭಾಗದ ನಿರ್ದೇಶಕರಾದ ಡಾ. ಎಸ್.ಎಸ್.ಕೋಟ್ಯಾಳ ಉಪಸ್ಥಿತ-ರಿದ್ದರು. ಕುಮಾರಿ ದೇವಮ್ಮ ಪೂಜಾರಿ ಪ್ರಾರ್ಥಿಸಿದರು,ಪೂಜಾ ಕೋಟಿ ಸ್ವಾಗತಿಸಿದರು, ಸುಹಾಸ ಬಡಿಗೇರ ಸಂವಿಧಾನದ ಪ್ರತಿಜ್ಞಾವಿಧಿ ಬೋಧಿಸಿದರು, ಸ್ವಾತಿ ಗೌಳಿ ವಂದಿಸಿದರು.

********

## ನುಡಿದಂತೆ ನಡೆದ ಶರಣರ ತತ್ವಗಳ ಜೀವನದಲ್ಲಿ ಅಳವಡಿಕೆ ಮಾಡಿಕೊಳ್ಳಿ- ಪ್ರದೀಪ ಗುರೂಜಿ

**ರಾಮದುರ್ಗ:** ಮಹಾತ್ಮರು, ಯೋಗಿಗಳು ನುಡಿದಂತೆ ನಡೆದು ಮನುಕುಲಕ್ಕೆ ಆದ-ರ್ಶಪ್ರಾಯರಾಗಿದ್ದಾರೆ. ಅವರ ಆದ-ರ್ಶ ಜೀವನದ ತತ್ವಗಳನ್ನು ನಾಗ-ರಿಕ ಸಮಾಜ ಅನುಸರಿಸಿದಲ್ಲಿ ಮಾತ್ರ ಸಮಾಜದಲ್ಲಿ ಶಾಂತಿ, ನೆಮ್ಮದಿ ಸಾಧ್ಯವಿದೆ ಎಂದು ಬಾಗಲಕೋಟದ ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದರು.




ತಾಲೂಕಿನ ಹಲಗತ್ತಿ ಗ್ರಾಮದಲ್ಲಿ ಹೇಮ ವೇಮ ಸೇವಾ ಸಮಿತಿಯ ಆಶ್ರಯದಲ್ಲಿ ಬೆನಕಟ್ಟಿಯ ಹೇಮ ವೇಮನ ಸದ್ಬೋಧನ ಪೀಠ ಹಮ್ಮಿಕೊಂಡಿದ್ದ ಮನೆ ಮನದಲ್ಲಿ ವೇಮನ 174 ನೇ ಮಾಸಿಕ ತತ್ವ ಚಿಂತನ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ವೇಮನರ ವಚನ ಚಿಂತನ ಕುರಿತು ಅವರು ಮಾತನಾಡಿದರು.

ಆಡುವ ಮಾತು, ಕೃತಿ ಒಂದಾದಲ್ಲಿ ಮಾತ್ರ ಮಾನವನ ಬದುಕು ಸುಂದರವಾಗಲಿದೆ. ನಡೆ-ನುಡಿಯಲ್ಲಿ ಸಾಮ್ಯತೆ ಇದ್ದಾಗಲೇ ಅಂದು ಶರಣರು ಬದುಕಿದ್ದರಿಂದಲೇ ಪೂಜ್ಯತರಾಗಿದ್ದರು. ಹೇಮರಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರು ತಮ್ಮ ಆದರ್ಶ ಬದುಕಿನಿಂದಾಗಿ ವೈರಾಗ್ಯ, ಭಕ್ತಿ, ಜ್ಞಾನದ ಸುಸಂದೇಶಗಳನ್ನು ನೀಡಿದ್ದಾರೆ ಎಂದು ತಿಳಿಸಿದರು.

ಮಾನವ ಜೀವನ ಪವಿತ್ರವಾಗಿದ್ದು, ಪರೋಪಕಾರ, ದಾನ-ಧರ್ಮದ ಗುಣಗಳನ್ನು ಬೆಳೆಸಿಕೊಳ್ಳಕೊಂಡು, ಅಹಂಕಾರ, ಮಮಕಾರ ತೊರೆದು ಬದುಕಬೇಕು. ದಾನ, ಯಜ್ಞ, ಜಪ-ತಪಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ಹೇಳಿದ ಅವರು, ಕೊಡುವ ದಾನ ಫಲಾಪೇಕ್ಷೆ ಇಲ್ಲದೆ ಮಾಡಿದಲ್ಲಿ ಅದುವೇ ಶ್ರೇಷ್ಠ ದಾನವಾಗುತ್ತದೆ ಎಂದು ಹೇಳಿದರು.

ನಿವೃತ್ತ ಪ್ರಾಧ್ಯಾಪಕ ವೆಂಕಟೇಶ ಹುಣಸೀಕಟ್ಟಿ ಮಾತನಾಡಿ, ಮನುಷ್ಯ ಸೇವಾ ತತ್ಪರನಾಗಿ ಒಳ್ಳೆಯ ಕೆಲಸಗಳನ್ನು ಮಾಡಬೇಕು. ಗುರುವಿನ ಮಾರ್ಗದರ್ಶನ ಪಡೆದು ಪರಿವರ್ತಿತನಾಗಿ ಆದ-ಧ್ಯಾತ್ಮ ಚಿಂತನೆಯನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ತಿಮ್ಮಾಪೂರ ಶಿವಾನಂದ ಮಠದ ಶ್ರೀ ಬಸವರಾಜ ಸ್ವಾಮೀಜಿ ಮಾತನಾಡಿ, ಮನುಷ್ಯ ಬದುಕಿನಲ್ಲಿ ಸಹನೆ ಕಳೆದುಕೊಂಡು ಅಹಂಕಾರಿಯಾಗಿದ್ದಾನೆ. ಹಣದ ವ್ಯಾಮೋಹಕ್ಕೆ ಸಿಲುಕಿ ಸುಂದರ ಬದುಕನ್ನು ಹಾಳುಮಾಡಿಕೊಳ್ಳುತ್ತಿದ್ದಾನೆ. ಅಹಂಕಾರ ವ್ಯಾಮೋಹ ತೊರೆದು ದಾನ, ಧರ್ಮ ಮಾಡಿ ಜೀವನ ಪಾವನಗೊಳಿಸಿಕೊಳ್ಳಬೇಕು ಎಂದು ಹೇಳಿದರು.

ಹೇಮ ವೇಮ ಸೇವಾ ಸಮಿತಿ ಅಧ್ಯಕ್ಷ ಪ್ರವೀಣ ನಂದೆಪ್ಪನವರ ಅಧ್ಯಕ್ಷತೆ ವಹಿಸಿದ್ದರು. ಬೆನಕಟ್ಟಿಯ ಹೇಮರಡ್ಡಿ ಮಲ್ಲಮ್ಮ ಭಜನಾ ತಂಡದವರು ವೇಮನರ ವಚನ ಗಾಯಣ ಮಾಡಿದರು. ರಮೇಶ ಅಣ್ಣಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆ.ಬಿ.ರಂಗನಗೌಡರ ಸ್ವಾಗತಿಸಿದರು.

### ಕೃಷಿ ಚಟುವಟಿಕೆಗಳ ಉದ್ದೇಶಕ್ಕಾಗಿ 7.5 ಟಿಎಂಸಿ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ : ಶಾಸಕ ಬಾಲಚಂದ್ರ ಜಾರಕಿಹೊಳಿ



ಗೋಕಾಕ: ಹಿಡಕಲ್ ಜಲಾಶಯದಿಂದ ಘಟಪ್ರಭಾ ಎಡದಂಡೆ, ಬಲದಂಡೆ ಹಾಗೂ ಸಿಬಿಸಿ ಕಾಲುವೆಗಳಿಗೆ ದಿ.28 ರಿಂದ 15ದಿನಗಳವರೆಗೆ ಕೃಷಿ ಚಟುವಟಿಕೆಗಳ ಉದ್ದೇಶಕ್ಕಾಗಿ 7.5 ಟಿಎಂಸಿ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಅರಭಾವಿ ಶಾಸಕ ಬಾಲಚಂದ್ರ ಹಾಗೂ ಬೆಮ್ಯುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಬುಧವಾರದಂದು ಮಾಧ್ಯಮಗಳಿಗೆ ಈ ಹೇಳಿಕೆಯನ್ನು ಬಿಡುಗಡೆ ಮಾಡಿರುವ ಅವರು, ಕೃಷಿ ಬಳಕೆಗಾಗಿ ಮಾತ್ರ ನೀರನ್ನು ಬಿಡುಗಡೆ ಮಾಡಲು ಉದ್ದೇಶಿಸಿರುವುದಾಗಿ ಹೇಳಿದರು.

ಘಟಪ್ರಭಾ ಬಲದಂಡೆ ಕಾಲುವೆಗೆ 2100 ಕ್ಯೂಸೆಕ್ಸ್, ಘಟಪ್ರಭಾ ಎಡದಂಡೆ ಕಾಲುವೆಗೆ 2400 ಕ್ಯೂಸೆಕ್ಸ್, ಸಿಬಿಸಿ ಕಾಲುವೆಗೆ 500 ಕ್ಯೂಸೆಕ್ಸ್‌ನಂತೆ ಒಟ್ಟು 15ದಿನಗಳವರೆಗೆ ನೀರನ್ನು ಹರಿಸಲಾಗುತ್ತಿದೆ. ಒಟ್ಟಾರೆ 7.50 ಟಿಎಂಸಿ ನೀರನ್ನು ಹಿಡಕಲ್ ಜಲಾಶಯದಿಂದ ಮೂರು ಕಾಲುವೆಗಳಿಗೆ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದವರು ಹೇಳಿದ್ದಾರೆ.

ಗೋಕಾಕ, ಮೂಡಲಗಿ, ರಾಯಬಾಗ, ಚಿಕ್ಕೋಡಿ, ಹುಕ್ಕೇರಿ ಮತ್ತು ಮುಧೋಳ, ತಾಲೂಕಿನ ರೈತ ಸಮುದಾಯದವರಿಗೆ ಕೃಷಿ ಉದ್ದೇಶಗಳಿಗೆ ಹಿಡಕಲ್ ಜಲಾಶಯದಿಂದ ನೀರನ್ನು ಬಿಡುಗಡೆ ಮಾಡುವಂತೆ ಲೋಕೋಪಯೋಗಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರಿಗೆ ಮನವಿ ಮಾಡಿಕೊಳ್ಳಲಾಗಿತ್ತು. ಈ ಸಂಬಂಧ ಇದೇ ದಿ.30 ರಂದು ಅಧಿಕಾರಿಗಳ ಸಭೆಯನ್ನು ಸಚಿವರು ಕರೆದಿದ್ದಾರೆ. ನಮ್ಮ ಮನವಿಯ ಮೇರೆಗೆ ಸಚಿವ ಸತೀಶ ಜಾರಕಿಹೊಳಿಯವರು ಸಭೆಗೂ ಮುನ್ನವೇ ಬರುವ ಗುರುವಾರದಂದು ಬೆಳಿಗ್ಗೆ ಹಿಡಕಲ್ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುವಂತೆ ಅಧಿಕಾರಿಗಳು ಸೂಚನೆಯನ್ನು ನೀಡಿದ್ದು, ಅದಕ್ಕಾಗಿ ಸಮಸ್ತ ಗೋಕಾಕ-ಮೂಡಲಗಿ ತಾಲ್ಲೂಕಿನ ರೈತರ ಪರವಾಗಿ ಸಚಿವರಿಗೆ ಕೃತಜ್ಞತೆಯನ್ನು ಅರ್ಪಿಸುವುದಾಗಿ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ತಿಳಿಸಿದ್ದಾರೆ.

ಈಗಾಗಲೇ ಹಿಡಕಲ್ ಜಲಾಶಯದಲ್ಲಿ ಇಂದಿನ ಮಾಹಿತಿಯಂತೆ 48.79 ಟಿಎಂಸಿ ನೀರಿನ ಉಪಯುಕ್ತ ಸಂಗ್ರಹವಿದ್ದು, ದಿನವೊಂದಕ್ಕೆ 0.5 ಟಿಎಂಸಿ ಯಂತೆ ಒಟ್ಟು 15 ದಿನಗಳವರೆಗೆ 7.50 ಟಿಎಂಸಿ ನೀರನ್ನು ರೈತರ ಕೃಷಿ ಚಟುವಟಿಕೆಗಳ ಬಳಕೆಗಾಗಿ ನೀರನ್ನು ಗುರುವಾರದಿಂದಲೇ ಬಿಡಲು ಸಚಿವ ಸತೀಶ್ ಜಾರಕಿಹೊಳಿ ಅವರು ಸೂಕ್ತ ಕ್ರಮಗಳನ್ನು ಕೈಗೊಂಡು ಈ ಸಂಬಂಧ ಅಧಿಕಾರಿಗಳಿಗೆ ಸೂಚಿಸಿದ್ದಾರೆಂದು ಅವರು ಹೇಳಿದ್ದಾರೆ.

### ಡಿ.15 ರಂದು ತಾಲೂಕು ಮಟ್ಟದ ಕೃಷಿಕ ಸಮಾಜದ ಚುನಾವಣೆ : ಎಂ.ಎಂ.ನದಾಫ್



ಗೋಕಾಕ: ತಾಲೂಕಿನ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ 5 ವರ್ಷದ ಅವಧಿಗೆ ಕಾರ್ಯಕಾರಿ ಸಮಿತಿ ರಚನೆ ಹಾಗೂ ಪದಾಧಿಕಾರಿಗಳ ಆಯ್ಕೆಗಾಗಿ ಡಿಸೆಂಬರ್ 15 ರಂದು ತಾಲೂಕು ಮಟ್ಟದ ಕೃಷಿಕ ಸಮಾಜದ ಚುನಾವಣೆ ನಡೆಯಲಿದೆ. ಆಜೀವ ಸದಸ್ಯರ ಪಟ್ಟಿ ಸಹಾಯಕ ಕೃಷಿ ನಿರ್ದೇಶಕರ ಗೋಕಾಕ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ನವೆಂಬರ್ 30 ರಿಂದ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಲಿದೆ . ಡಿಸೆಂಬರ್ 15 ರ ಬೆಳಿಗ್ಗೆ 8 ರಿಂದ 3 ಗಂಟೆ ವರೆಗೆ ಚುನಾವಣೆ ನಡೆಯಲಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಎಂ.ಎಂ.ನದಾಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಲೇಜು ಜೀವನ ಭವಿಷ್ಯ ರೂಪಿಸಿಕೊಳ್ಳುವ ಪ್ರಮುಖ ಘಟ್ಟ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ವಿಜಯಪುರ: ಪ್ರತಿಯೊಬ್ಬ ವಿದ್ಯಾರ್ಥಿಗಳು ತಂದೆ-ತಾಯಿಯ ಕನಸನ್ನು ನನಸು ಮಾಡಬೇಕು. ಇದಕ್ಕೆ ಕಠಿಣ ಶ್ರಮದ ಅಗತ್ಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.



ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವತಿಯಿಂದ ನಡೆದ ಅಂತರ ಮಹಿಳಾ ಮಹಾವಿದ್ಯಾಲಯಗಳ ಯುವ ಜನೋತ್ಸವ 'ಶಕ್ತಿ ಸಂಭ್ರಮ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಚಿವರು, ಕನ್ನಡದ ಪ್ರಪ್ರಥಮ ಮಹಿಳಾ ಕವಿಯತ್ರಿಯಾದ ಅಕ್ಕಮಹಾದೇವಿ ಅವರು ನಮ್ಮೆಲ್ಲರ ಆದ-ರ್ಶವಾಗಿದ್ದಾರೆ ಎಂದರು.

ನಾನೊಬ್ಬಳು ತಾಯಿಯಾಗಿ, ರೈತನ ಮಗಳಾಗಿ, ಹಲವು ಏಳು ಬೀಳುಗಳ ನಡುವೆ ಇಂದು ಕರ್ನಾಟಕದ ಮಂತ್ರಿಯಾಗಿರುವೆ. ಪುರುಷರಿಗೆ 100 ಮೀಟರ್ ಓಡಿದರೂ ಗೋಲ್ಡ್ ಮೆಡಲ್ ಸಿಗುತ್ತದೆ. ಆದರೆ, ಸಾವಿರ ಮೀಟರ್ ಓಡಿದರೂ ಮಹಿಳೆಯ-ರಿಗೆ ಮೆಡಲ್ ಕೊಡಲು ಹಿಂದೆ ಮುಂದೆ ನೋಡಲಾಗುತ್ತದೆ ಎಂದು ಸಚಿವರು ಹೇಳಿದರು. ಹೆಣ್ಣು ಮಕ್ಕಳಲ್ಲಿ ಪರಸ್ಪರ ಸಹಕಾರ ಇರಬೇಕು. ಇಂದು ಹೆಣ್ಣು ಮಕ್ಕಳು ತೊಟ್ಟಿಲಿಗೆ ಸೀಮಿತವಿಲ್ಲ. ಇಂದು ಹೆಣ್ಣು ಹುಟ್ಟಿದರೂ ಸಂಭ್ರಮ ಪಡುವ ಸಂದರ್ಭದಲ್ಲಿ ನಾವಿದ್ದೇವೆ. ಸುಂದರ ಸಮಾಜ, ಸಂಸ್ಕೃತಿ ದೇಶದಲ್ಲಿ ನಾವಿದ್ದೇವೆ ಎಂದು ಸಚಿವರು ಹೇಳಿದರು.

ಕಷ್ಟ ಎಲ್ಲರಿಗೂ ಇರುತ್ತದೆ. ಆದ-ರೆ ಗುರಿ ತಲುಪುವುದು ಮುಖ್ಯ, ಗುರಿ ಇಲ್ಲದ ಜೀವನ ಬೋರಗಲ್ಲ ಮೇಲೆ ಮಳೆ ಸುರಿದಂತೆ. ಪ್ರಾಮಾಣಿಕವಾದ ಗುರಿ ಇರಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಪ್ರತಿಯೊಬ್ಬರು ತಂದೆ ತಾಯಿ ಕನಸುಗಳನ್ನು ಈಡೇರಿಸಬೇಕು. ನಾನೂ ಕೂಡ ಹಿಂದುಳಿದ ಪ್ರದೇಶದಿಂದ ಬಂದಿದ್ದೇನೆ. ಕೆಂಪು ಬಸ್ಸಿನಲ್ಲಿ ಓಡಾಡಿದ್ದೇನೆ. ಇಂದಿಗೂ ಅದೇ ಛಲ ನನ್ನಲ್ಲಿದೆ ಎಂದರು.

ಇರುವೆಗಳಿಗೂ ಸ್ವಾಭಿಮಾನ ಇರುತ್ತದೆ. ಮುಂದಾಲೋಚನೆ ಇರುತ್ತದೆ. ಮನುಷ್ಯರಾದ ನಮಗೆ ಮುಂದಿನ 80 ವರ್ಷಕ್ಕೆ ಜೀವನ ರೂಪಿಸುವ ಪರಿಕಲ್ಪನೆ ಬೇಕಲ್ಲವೇ. ವಿದ್ಯಾರ್ಥಿ ಜೀವನ ಗೋಲ್ಡನ್ ಟೈಮ್ ಇದ್ದಂತೆ. ಜೀವನ ವಿಕಸನ ಮಾಡಿಕೊಳ್ಳಲು ಇದು ಪ್ರಮುಖ ಘಟ್ಟ. ದೇಶ ಎತ್ತರಕ್ಕೆ ಬೆಳೆಯುತ್ತಿದೆ, ಇಂದಿನ ಸ್ಪರ್ಧಾತ್ಮಕ ಯುಗಕ್ಕೆ ಎಲ್ಲರೂ ಸಜ್ಜಾಗಬೇಕು ಎಂದು ಕರೆ ನೀಡಿದರು.

ಮುಂದೆ ಹುಟ್ಟುವ ನಿಮ್ಮ ಮಕ್ಕಳಿಗೆ ನೀವೇ ಆದರ್ಶವಾಗಿರಿ, ಅರುಣಿಮಾ ಸಿನ್ಹಾ, ಸುಪ್ರಿಯಾ ರಾಯ್ ಅವರಂಥ ಮಹಿಳೆಯರು ಜೀವನದ ಪ್ರತಿಯೊಂದು ಹಂತದಲ್ಲೂ ಸ್ಫೂರ್ತಿಯಾಗಲಿ ಎಂದರು.

ಮಹಿಳೆ ಎಂದರೆ ಸಾಧನೆ, ಜೀವನದಲ್ಲಿ ಸಾಧನೆ ಬಹಳ ಮುಖ್ಯ. ಮಹಿಳೆ ಇಲ್ಲದೆ ಮನೆ ಉಳಿಸಿಕೊಳ್ಳಲು ಸಾಧ್ಯವಿಲ್ಲ. ರಾಜಕೀಯದ ಕೂಡ. ಮಹಿಳಾ ಮೀಸಲಾತಿಯನ್ನು ನಾವೇ ಮಾಡಿದ್ದು, ಆಗ ಬಹುಮತ ಕೊರತೆಯಿಂದ ಲೋಕಸಭೆಯಲ್ಲಿ ಪಾಸ್ ಆಗಲಿಲ್ಲ. ಈಗ ಮಹಿಳಾ ಮೀಸಲಾತಿಯನ್ನು ಜಾ-ರಿಗೊಳಿಸಿದ ನರೇಂದ್ರ ಮೋದಿ ಅವರನ್ನು ಅಭಿನಂದಿಸುತ್ತೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೋ.ಬಿ.ಕೆ.ತುಳಸಿಮಾಲ,

ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ತೊರವಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಪದ್ಮಾಬಾಯಿ ನಡಗಡ್ಡಿ, ಮಹಿಳಾ ವಿವಿ ಕುಲಸಚಿವ ಶಂಕರಗೌಡ ಸೋಮನಾಳ, ಪ್ರೊ.ಶಾಂತಾದೇವಿ, ಸಿಂಡಿಕೇಟ್ ಮತ್ತು ಅಕಾಡೆಮಿ ಕೌನ್ಸಿಲ್ ಸದಸ್ಯರು, ಭೋದಕ ಹಾಗೂ ಭೋದಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಚುನಾವಣೆಯಲ್ಲಿ ಸೋತಾಗ ಇವಿಎಂ ತಿರುಚಲಾಗುತ್ತದೆ ಎನ್ನುತ್ತೀರಿ ಗೆದ್ದಾಗ ಏನೂ ಹೇಳುವುದಿಲ್ಲ ಎಂದ ವಿಭಾಗೀಯ ಪೀಠ

ಧಾರವಾಡ : ಮತಯಂತ್ರಗಳ (ಇವಿಎಂ) ಬದಲು ಬ್ಯಾಲೆಟ್ ಪೇಪರ್ ಮತದಾನ ವ್ಯವಸ್ಥೆಯನ್ನು ಮತ್ತೆ ಜಾರಿಗೊಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಇಂದು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಬ್ಯಾಲೆಟ್ ಪೇಪರ್ ಬದಲು ಇವಿಎಂ ಜಾರಿಗೊಳಿಸಿದ ಕ್ರಮ ಪ್ರಶ್ನಿಸಿ ಡಾ.ಕೆ.ಎ.ಪೌಲ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ವಿಕ್ರಂ ನಾಥ್ ಮತ್ತು ನ್ಯಾಯಮೂರ್ತಿ ಪಿ.ಬಿ.ವರಾಳೆ ಅವರಿದ್ದ ವಿಭಾಗೀಯ ಪೀಠ ವಜಾಗೊಳಿಸಿದೆ. ಇದರಿಂದಾಗಿ ಚುನಾವಣೆಗಳಲ್ಲಿ ಇವಿಎಂಗಳ ಬಳಕೆಯ ಹಾದಿ ಮತ್ತಷ್ಟು ಸುಗಮವಾಗಿದೆ.

ಈ ಹಿಂದೆ ಆಂದ್ರದಲ್ಲಿನ ರಾಜಕೀಯ ನಾಯಕರ ಹೇಳಿಕೆಗಳನ್ನು ಗಮನಿಸಿದಾಗ ರಾಜಕೀಯ ನಾಯಕರಾದ ಚಂದ್ರಬಾಬು ನಾಯ್ಡು ಸೋತಾಗ ಮತ್ತು ಜಗನ್ ಮೋಹನ್ ರೆಡ್ಡಿ ಇತ್ತೀಚಿನ ಚುನಾವಣೆಗಳಲ್ಲಿ ಸೋತಾಗ ಅವರೂ ಸಹ ಒಬ್ಬರಿಗೊಬ್ಬರು ಇವಿಎಂ ಗಳನ್ನು ತಿರುಚಬಹುದು ಎಂಬ ಆರೋಪ–ಪ್ರತ್ಯರೋಪಗಳ ಸ್ಮರಿಸಿದ ನ್ಯಾಯಾದೀಶರು ಅರ್ಜಿದಾರರ ವಾದವನ್ನು ತಳ್ಳಿಹಾಕಿದ ವಿಭಾಗೀಯ ಪೀಠ, ಚುನಾವಣೆಯಲ್ಲಿ ಗೆದ್ದರೆ ಇವಿಎಂಗಳನ್ನು ತಿರುಚಿಲ್ಲ, ಸೋತಾಗ ಇವಿಎಂಗಳನ್ನು ತಿರುಚಲಾಗುತ್ತದೆ ಎಂದು ಹೇಳಲಾಗುತ್ತದೆ. ಹೀಗಾಗಿ ಇಂಥ ವಾದ ಮಂಡಿಸಲು ಇದು ಸೂಕ್ತ ಜಾಗ ಅಲ್ಲ ಎಂದು ವಿಭಾಗೀಯ ಪೀಠ ಇದೇ ವೇಳೆ ಅಭಿಪ್ರಾಯಪಟ್ಟಿತು.

ಅರ್ಜಿದಾರರು, ಇವಿಎಂ ಬದಲು ಬ್ಯಾಲೆಟ್ ಪೇಪರ್ ಮತದಾನ ವ್ಯವಸ್ಥೆಯನ್ನು ಪುನಃ ಸ್ಥಾಪಿಸಬೇಕು ಎಂಬ ಕೋರಿಕೆಯೊಂದಿಗೆ, ಚುನಾವಣೆಯ ಸಮಯದಲ್ಲಿ ಹಣ, ಮದ್ಯ ಸೇರಿದಂತೆ ಆಮಿಷಗಳನ್ನು ಒಡ್ಡುವುದು ಸಾಬೀತಾದಲ್ಲಿ ಅಭ್ಯರ್ಥಿಗಳನ್ನು ಕನಿಷ್ಠ 5 ವರ್ಷ ಚುನಾವಣಾ ಸ್ಪರ್ಧೆಯಿಂದ ನಿಷೇಧಿಸುವಂತೆ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಬೇಕು. ಚುನಾವಣೆಯಲ್ಲಿ ಪಾಲ್ಗೊಳ್ಳುವಂತೆ ಮತದಾರರಿಗೆ ಶಿಕ್ಷಣ ಕಾರ್ಯಕ್ರಮ ಆಯೋಜಿಸಬೇಕು. ರಾಜಕೀಯ ಪಕ್ಷಗಳ ನಿಧಿಯನ್ನು ಪರಿಶೀಲಿಸಲು ತನಿಖಾ ವ್ಯವಸ್ಥೆ ರೂಪಿಸಬೇಕು. ಚುನಾವಣಾ ಸಂಬಂಧಿ ಹಿಂಸಾಚಾರಗಳನ್ನು ತಡೆಗಟ್ಟಲು ನೀತಿ ರೂಪಿಸಬೇಕು ಎಂದು ಮನವಿ ಮಾಡಿದ್ದರು.

ಈ ಎಲ್ಲಾ ಕೋರಿಕೆಗಳನ್ನು ತಳ್ಳಿಹಾಕಿದ ವಿಭಾಗೀಯ ಪೀಠ, ರಾಜಕೀಯ ಪಕ್ಷಗಳಿಗೆ ಈ ವ್ಯವಸ್ಥೆಯಿಂದ ಯಾವುದೇ ತೊಂದರೆ ಇಲ್ಲ, ನಿಮಗೆ ಸಮಸ್ಯೆ ಇದೆ ಎಂದು ಅಭಿಪ್ರಾಯಪಟ್ಟಿತಲ್ಲದೆ, ಈ ಎಲ್ಲಾ ಕೋರಿಕೆಗಳನ್ನು ತಳ್ಳಿಹಾಕಿದ ವಿಭಾಗೀಯ ಪೀಠ, ನಾವು ಇದನ್ನು ತಳ್ಳಿಹಾಕುತ್ತಿದ್ದೇವೆ. ನೀವು ಇದನ್ನೆಲ್ಲ ವಾದಿಸುವ ಸ್ಥಳ ಇದು ಅಲ್ಲ ಎಂದು ಹೇಳಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಳಿಸಿ ಆದೇಶಿಸಿತು.

# ಕರ್ಕೀಹಳ್ಳಿ ಗ್ರಾಮದಲ್ಲಿ ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮ




ಕೊಪ್ಪಳ : ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಸ್ಪಂದನ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಕೊಪ್ಪಳ ತಾಲೂಕು ಕರ್ಕಿಹಳ್ಳಿ ಗ್ರಾಮದಲ್ಲಿ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ಬುಧವಾರ "ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿದ ಸದಸ್ಯ ಕಾರ್ಯದರ್ಶಿಗಳಾದ ಮಾಂತೇಶ್ ಎಸ್ ದರಗದ್ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಹೆಣ್ಣು ಮಕ್ಕಳಿಗೆ 18 ವರ್ಷ ತುಂಬವ ಪೂರ್ವದಲ್ಲಿ ಮದುವೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಬಾಲ್ಯವಿವಾಹದಿಂದ ಮಕ್ಕಳ ಹಕ್ಕುಗಳಿಗೆ ಧಕ್ಕೆ ಉಂಟಾಗುತ್ತದೆ. ಓದುವ ಮತ್ತು ಆಟ ಆಡುವ ವಯಸ್ಸಿನಲ್ಲಿ ಮಕ್ಕಳು ಬಾಲ್ಯವಿವಾಹದಿಂದ ಜವಾಬ್ದಾರಿ ಅನುಭವಿಸಬೇಕಾಗುತ್ತದೆ. ಗಂಡ, ಅತ್ತೆ, ಮಾವ, ಹೀಗೆ ಮನೆಯವರಿಗೆ ನೋಡಿಕೊಳ್ಳುವ ಜವಾಬ್ದಾರಿ ಎದುರಿಸುವ ಶಕ್ತಿ ಮಕ್ಕಳ ಹತ್ತಿರ ಇರುವುದಿಲ್ಲ. ಮದುವೆ ಮಾಡಲು ಕಡ್ಡಾಯವಾಗಿ ಹೆಣ್ಣು ಮಕ್ಕಳಿಗೆ 18 ವರ್ಷ ಮತ್ತು ಗಂಡು ಮಕ್ಕಳಿಗೆ 21 ವರ್ಷ ಪೂರ್ಣಗೊಂಡಿರಬೇಕು ಎಂದರು.

ಬಾಲ್ಯವಿವಾಹ ಕಠಿಣ ಶಿಕ್ಷೆಗಳಿದ್ದರೂ ಸಹ ಅಕ್ಷರಸ್ಥರು ಮತ್ತು ಅನಕ್ಷರಸ್ಥರು ಬಾಲ್ಯ ವಿವಾಹ ಮಾಡಲು ಮುಂದಾಗುತ್ತಾರೆ, ಬಾಲ್ಯ ವಿವಾಹ ಮಾಡಿಕೊಂಡವರಿಗೆ ಶಿಕ್ಷೆ ತಪ್ಪಿದ್ದಲ್ಲ. ಬಾಲ್ಯ ವಿವಾಹದಲ್ಲಿ ಭಾಗವಹಿಸಿದವರೂ ಸಹ ಅಪರಾಧಿಗಳಾಗಿದ್ದು, ಅವರಿಗೂ ಕಾನೂನಿನಲ್ಲಿ ಶಿಕ್ಷೆ ನೀಡಲು ಅವಕಾಶವಿದೆ. ಯಾರೂ ಸಹ ಬಾಲ್ಯವಿವಾಹಗಳಲ್ಲಿ ಪಾಲ್ಗೊಳ್ಳಬಾರದು ಮತ್ತು ನಿಮ್ಮ ಸುತ್ತಲಲ್ಲಿ ಬಾಲ್ಯವಿವಾಹಗಳು ನಡೆಯುತ್ತಿದ್ದರೆ, ಮಕ್ಕಳ ಸಹಾಯವಾಣಿಗೆ ಕರೆ ಮಾಡಿ ಮಹಿತಿಯನ್ನು ನೀಳಿಸಬಹುದಾಗಿದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಇಂದಿರಾಗಾಂಧಿ ವಸತಿ ಶಾಲೆಯ ಪ್ರಾಂಶುಪಾಲರಾದ ಕುಸುಮ ಕುಮಾರಿ, ವಸತಿ ಶಾಲೆಯ ಶಿಕ್ಷಕಿ ಶೈಲಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರವಿ ಹಾಗೂ ಪ್ರತಿಭಾ ಸೇರಿದಂತೆ ಸ್ಪಂದನ ಸಂಸ್ಥೆಯ ಪ್ರತಿನಿಧಿಗಳು, ವಸತಿ ಶಾಲೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಚೂರು–ಪಾರು

### ೨೦೨೪ ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆಗಾಗಿ ಅರ್ಜಿ ಆಹ್ವಾನ

ಧಾರವಾಡ : 2024 ರ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಣೆಗೊಂಡ ಸಾಹಿತ್ಯ, ಕಲೆ, ವಿಜ್ಞಾನ, ವೃತ್ತಿ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆದಾಯ ಉತ್ಪಾದನಾ ಯೋಜನೆ, ಸ್ಪರ್ಧಾತ್ಮಕ, ಪಠ್ಯ ಪುಸ್ತಕ, ಸಾಂಧರ್ಬಿಕ ಮತ್ತು ಪರಾಮರ್ಶನ ಕೃತಿಗಳು ಹಾಗೂ ಮಕ್ಕಳ ಸಾಹಿತ್ಯ, ನವಸಾಕ್ಷರರ ಕೃತಿಗಳು ಇತ್ಯಾದಿ ವಿಷಯಗಳ ಕನ್ನಡ, ಆಂಗ್ಲ ಮತ್ತು ಭಾರತೀಯ ಇತರೆ ಭಾಷೆಯ ಗ್ರಂಥಗಳ ಆಯ್ಕೆಗೆ ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳಿಂದ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಆಯ್ಕೆಗಾಗಿ ಸ್ವೀಕರಿಸಲು ಅರ್ಜಿ ಆಹ್ವಾನಿಸಲಾಗಿದೆ.

2024ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರಬೇಕು. ಮರು ಮುದ್ರಣದಲ್ಲಿ 10 ವರ್ಷಗಳ ಅಂತರವಿರಬೇಕು. ಆಯ್ಕೆಗೆ ಒಪ್ಪಿಸಿದ ಯಾವುದೇ ಭಾಷೆಯ ಪುಸ್ತಕಗಳನ್ನು ಹಿಂತಿರುಗಿಸಲಾಗುವುದಿಲ್ಲ.

ಆಸಕ್ತರು 2024 ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ಬೆಂಗಳೂರಿನ ಕಬ್ಬನ್ ಉದ್ಯಾನವನದ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಜನವರಿ 1, 2025 ರ ಸಂಜೆ 5:30 ರ ರೊಳಗಾಗಿ ನೋಂದಣಿ ಮಾಡಿಸಬಹುದು.

ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಅಂತಿಮ ದಿನಾಂಕದ ನಂತರ ನೋಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ ಸೈಟ್ www.dpl.karnataka.gov.in ಗೆ ಭೇಟಿ ನೀಡಬಹುದು ಅಥವಾ ದೂರವಾಣಿ 080–22864990, 22867358 ಗೆ ಸಂಪರ್ಕಿಸಬಹುದು ಎಂದು ನಗರ ಗ್ರಂಥಾಲಯದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲೆಕ್ಕ ಪರಿಶೋಧಕರ ನೇಮಕಾತಿ ಮಾಹಿತಿ ಸಲ್ಲಿಕೆಗೆ ಸೂಚನೆ

ಗದಗ : ಸಹಕಾರ ಸಂಘಗಳ ನಿಯಮಗಳು 1960 ನಿಯಮ 29–3 ( 8) ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8–ಬಿ ( 8) ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು, ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕ ಪರಿಶೋಧನಾ ಫರ್ಮನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 7 ದಿನಗಳೊಳಗಾಗಿ ಲೆಕ್ಕ ಪರಿಶೋಧಕರಿಗೆ , ಲೆಕ್ಕ ಪರಿಶೋಧನಾ ಫರ್ಮಗಳಿಗೆ ಮತ್ತು ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ.

ಇದುವರೆಗೆ ಸದರಿ ಮಾಹಿತಿಯನ್ನು ಸಲ್ಲಿಸದ ಸಹಕಾರ ಸಂಘಗಳು ಈ ಪ್ರಕಟಣೆಯು ಪ್ರಕಟಣೆಯಾದ 7 ದಿನಗಳೊಳಗಾಗಿ ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕ ಪರಿಶೋಧಕರನ್ನು/ ಲೆಕ್ಕ ಪರಿಶೋಧನಾ ಫರ್ಮ ನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಸಂಘದ ಮುಖ್ಯ ಕಾರ್ಯನಿರ್ವಹಣಾದಿಕಾರಿಗಳು ಹಾಗೂ ಅಧ್ಯಕ್ಷರ ರುಜುವಿನೊಂದಿಗೆ ಹಾಗೂ ವಾರ್ಷಿಕ ಮಹಾಸಭೆಯ ನಡುವಳಿ ಪ್ರತಿಯೊಂದಿಗೆ ಉಪನಿರ್ದೇಶಕರು ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆ ಜಿಲ್ಲಾ ಆಡಳಿತ ಭವನ ಕೊಠಡಿ ಸಂಖ್ಯೆ 210 ಗದಗ ಜಿಲ್ಲೆ, ಗದಗ ಇವರ ಕಚೇರಿಗೆ ಸಲ್ಲಿಸಲು ಪ್ರಕಟಣೆ ತಿಳಿಸಿದೆ.

### ಜಿಲ್ಲಾ ಪಂಚಾಯತಿಯಲ್ಲಿ ಸಂವಿಧಾನ ದಿನಾಚರಣೆ

ಕಾರವಾರ – ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 75ನೇ ಸಂವಿಧಾನ ದಿನಾಚರಣೆಯ ಪ್ರಯುಕ್ತ ಮಂಗಳವಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಗೌರವ ಸಮರ್ಪಿಸಿದರು.

ಬಳಿಕ ಮಾತನಾಡಿದ ಅವರು ಭಾರತೀಯ ಸಂವಿಧಾನದ ವಿಶೇಷತೆ, ಪ್ರಾಮುಖ್ಯತೆ, ಪ್ರಜೆಗಳಿಗಿರುವ ಹಕ್ಕು ಮತ್ತು ಕರ್ತವ್ಯಗಳು ಹಾಗೂ ಸಂವಿಧಾನ ರೂಪಿಸಲು ಶ್ರಮವಹಿಸಿದ ಮಹನೀಯರ ಕುರಿತು ಮಾಹಿತಿ ನೀಡಿದರು.

ಆಡಳಿತ ಶಾಖೆಯ ಉಪ ಕಾರ್ಯದರ್ಶಿ ನಾಗೇಶ್ ರಾಯ್ಕರ್ ಅವರು ಸಂವಿಧಾನದ ಪೀಠಿಕೆ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಆನಂದಸಾ ಹಬೀಬ್, ಎನ್.ಐ.ಸಿ.ಯ ಶ್ರೀಕಾಂತ್ ಜೋಷಿ, ಲೆಕ್ಕಾಧಿಕಾರಿ ಪರಶುರಾಮ, ಸಹಾಯಕ ಕಾರ್ಯದರ್ಶಿ(ಆಡಳಿತ) ಸುನೀಲ್ ನಾಯ್ಕ್ ಸೇರಿದಂತೆ ಜಿಲ್ಲಾ ಪಂಚಾಯತಿಯ ವಿವಿಧ ಶಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಇಂದು ನಿರುಪಯುಕ್ತ ಸಾಮಗ್ರಿಗಳ ಬಹಿರಂಗ ಹರಾಜು ಪ್ರಕ್ರಿಯೆ

ಧಾರವಾಡ : ಉತ್ತರ ಕನ್ನಡ ಜಿಲ್ಲಾ ಗೃಹಕ್ಷಕದಳ ಕಛೇರಿಯಲ್ಲಿನ ನಿರುಪಯುಕ್ತ ಸಾಮಗ್ರಿಗಳನ್ನು ಮೌಲ್ಯ ಮಾಪನ ಮಾಡಿಸಿ, ನವೆಂಬರ 29, 2024 ರಂದು ಬೆಳಿಗ್ಗೆ 10 ಗಂಟೆಗೆ ಧಾರವಾಡ ಪೊಲೀಸ್ ಹೆಡ್ ಕ್ವಾರ್ಟರಸ್ ಜಿಲ್ಲಾ ಗೃಹರಕ್ಷಕದಳ ಕಛೇರಿ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಈ ಹರಾಜು ಪ್ರಕ್ರಿಯೆಯಲ್ಲಿ ಸ್ಥಳೀಯ ಬಿಡ್ಡುದಾರರು, ಅಗತ್ಯ ದಾಖಲಾತಿಗಳೊಂದಿಗೆ ಭಾಗವಹಿಸಬಹುದು ಎಂದು ಗೃಹರಕ್ಷಕದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದೆ.

# ಮೌಲ್ಯಾಧಾರಿತ ಶಿಕ್ಷಣದಿಂದ ಸಮಾಜದಲ್ಲಿ ಸಹಬಾಳ್ವೆ ಸಾಧ್ಯ: ನ್ಯಾ. ಸಿ.ಚಂದ್ರಶೇಖರ



ಕೊಪ್ಪಳ : ಪ್ರತಿಯೊಬ್ಬರೂ ಉತ್ತಮ ಶಿಕ್ಷಣ ಪಡೆಯುವುದರ ಜೊತೆಗೆ ಮೌಲ್ಯಾಧಾರಿತ ಶಿಕ್ಷಣ ಪಡೆದಾಗ ಮಾತ್ರ ಸಮಾಜದಲ್ಲಿ ಸಹಬಾಳ್ವೆಯಿಂದ ಬಾಳಲು ಸಾಧ್ಯವಾಗಲಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಸಿ.ಚಂದ್ರಶೇಖರ ಹೇಳಿದರು.

ಕೊಪ್ಪಳ ಜಿಲ್ಲೆಯ ಯಲಬುರ್ಗಾದ ಸ್ನಾತಕೋತ್ತರ ಕೇಂದ್ರದಲ್ಲಿ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯಲಬುರ್ಗಾ ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲ್ಲೂಕು ವಕೀಲರ ಸಂಘ, ಯಲಬುರ್ಗಾ ಸ್ನಾತಕೋತ್ತರ ಕೇಂದ್ರ, ಕೊಪ್ಪಳ ವಿಶ್ವ ವಿದ್ಯಾಲಯದ ವತಿಯಿಂದ ಸಂವಿಧಾನ ದಿನಾಚರಣೆ ಅಂಗವಾಗಿ ಮಂಗಳವಾರ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದ ಸಂವಿಧಾನದಲ್ಲಿರುವ ಕಾನೂನುಗಳನ್ನು ತಿಳಿದುಕೊಳ್ಳುವುದರ ಜೊತೆಗೆ ಕಡ್ಡಾಯವಾಗಿ ಪಾಲಿಸಬೇಕು. ಕಾನೂನಿನ ನೆರವು ಮತ್ತು ಅರಿವು ಮೂಡಿಸುವುದು ಕಾನೂನು ಸೇವೆಗಳ ಪ್ರಾಧಿಕಾರದ ಧ್ಯೇಯೋದ್ದೇಶ ವಾಗಿದ್ದು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು, ಮಹಿಳೆ, ಮಗು ಹಾಗೂ ವಾರ್ಷಿಕ ಆದಾಯ 1 ಲಕ್ಷಕ್ಕಿಂತ ಕಡಿಮೆ ಇದ್ದರೇ ಯಾವ ಜಾತಿಯಾದರೂ ಕೂಡ ಕಾನೂನು ಸೇವೆಗಳ ಪ್ರಾಧಿಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು ಎಂದರು.

ದೇಶದಲ್ಲಿ ಸಂವಿಧಾನ ಎಲ್ಲರಿಗೂ ಒಂದೇ ಆಗಿದ್ದು, ಪ್ರತಿಯೊಬ್ಬರೂ ಸಂವಿಧಾನ ಅಡಿಯಲ್ಲಿ ಸಮಾನತೆ, ಸಹಬಾಳ್ವೆದಿಂದ ಬದುಕಬೇಕು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಜಿಲ್ಲೆಯ ಪ್ರತಿ ತಾಲ್ಲೂಕಿನ ಒಂದೊಂದು ಗ್ರಾಮವನ್ನು ದತ್ತು ಪಡೆಯುವ ಮೂಲಕ ಜನರ ಏಳಿಗೆಗಾಗಿ ಕಾರ್ಯಕ್ರಮ ಆಯೋಜಿಸುವುದಲ್ಲದೇ ವಿವಿಧ ಇಲಾಖೆಗಳ ಯೋಜನೆಗಳನ್ನು ಅನುಷ್ಠಾನ ಗೊಳಿಸುವ ಮೂಲಕ ಸೇತುವೆಯಾಗಿ ಕೆಲಸ ಮಾಡಲಾಗುತ್ತಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಸಮಾಜದಲ್ಲಿ ಸೂಜಿಯಂತೆ ಸಂಬಂಧವನ್ನು ಜೋಡಣೆಯನ್ನು ಮಾಡಲಾಗುತ್ತದೆ ಎಂದರು.

ಸಹಾಯಕ ಪ್ರಾಧ್ಯಾಪಕ ಬಸವರಾಜ ಇಳಿಗನೂರ ಮಾತನಾಡಿ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲೂ ಸಹೋದರತೆ ಮೂಡಿಸುವುದಕ್ಕೆ ರಾಷ್ಟ್ರಕ್ಕೆ ಸಂವಿಧಾನ ಅರ್ಪಣೆಗೊಂಡಿರುತ್ತದೆ. ಇದರಿಂದ ದೇಶದ ಎಲ್ಲ ಪ್ರಜೆಗಳಿಗೆ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯವನ್ನು, ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು ಉಪಾಸನೆಯ ಸ್ವಾತಂತ್ರ್ಯವನ್ನು ಸ್ಥಾನ–ಮಾನ ಮತ್ತು ಅವಕಾಶಗಳ ಸಮಾನತೆಯ ಅವಕಾಶ ಲಭಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವ ಪ್ರೊ. ಕೆ.ವಿ.ಪ್ರಸಾದ್ ಮಾತನಾಡಿ, ಸಂವಿಧಾನದ ಮೂಲಕ ಲಭಿಸಿರುವ ಪ್ರಜಾಪ್ರಭುತ್ವ ವ್ಯಕ್ತಿ, ಪಕ್ಷ, ಧರ್ಮ, ಜಾತಿ ಎಲ್ಲವನ್ನೂ ಮೀರಿದ ಮೌಲ್ಯವಾಗಿದೆ. ಸಂವಿಧಾನದ ಮಹತ್ವದ ಬಗ್ಗೆ ಎಲ್ಲರಿಗೂ ಅರಿವು ಮೂಡಿಸುವುದು, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವದರ ಜತೆಗೆ ಅವರ ಸಾಧನೆಯ ಬಗ್ಗೆ ತಿಳಿಸಿ ಕೊಡುವುದು ಈ ದಿನದ ವಿಶೇಷತೆಯಾಗಿದೆ ಎಂದರು.

ಯಲಬುರ್ಗಾದ ವಕೀಲರ ಸಂಘದ ಅಧ್ಯಕ್ಷರಾದ ಪ್ರಕಾಶ್ ಎಸ್.ಬೇಲೇರಿ ಮಾತನಾಡಿದರು. ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವ ಪ್ರೊ. ಕೆ.ವಿ.ಪ್ರಸಾದ್ ಅವರು ಸಂವಿಧಾನದ ಪೀಠಿಕೆ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಾಹಾಂತೇಶ ಎಸ್ ದರಗದ, ಸ್ನಾತ್ತಕೋತ್ತರ ಕೇಂದ್ರದ ನಿರ್ದೇಶಕ ಡಾ.ಚಲವಾದಿ ಚನ್ನಬಸಪ್ಪ, ಸಹಾಯಕ ಸರ್ಕಾರಿ ಅಭಿಯೋಜಕ ರವಿ ಹುಣಸಿಮರದ, ಅಪರ ಸರ್ಕಾರಿ ವಕೀಲರಾದ ಮಲ್ಲನಗೌಡ ಪಾಟೀಲ, ವಕೀಲರ ಸಂಘದ ಕಾರ್ಯದರ್ಶಿ ಈರಣ್ಣ ಕೋಳೂರು, ಸಹಾಯಕ ಪ್ರಾಧ್ಯಾಪಕರಾದ ಡಾ.ಅಶ್ವಿನ್ ಕುಮಾರ್, ಡಾ.ಸಾದುಸೂರ್ಯಕಾಂತ, ಡಾ.ಸರಸ್ವತಿ ಹಾಗೂ ವಿವಿಧ ವಿಭಾಗಗಳ ಉಪನ್ಯಾಸಕರು, ವಕೀಲರು, ವಿದ್ಯಾರ್ಥಿಗಳು ಇದ್ದರು. ಉಪನ್ಯಾಸಕ ಡಾ.ನಾಗಪ್ಪ ಹೂವಿನಭಾವಿ ನಿರೂಪಿಸಿದರು. ವಿದ್ಯಾರ್ಥಿನಿ ಸುವರ್ಣಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಡಾ.ಸಾಧು ಸೂರ್ಯಕಾಂತ ಸ್ವಾಗತಿಸಿದರು. ಡಾ.ಸರಸ್ವತಿ ವಂದಿಸಿದರು.

# ಹಿರೇಸಿಂದೋಗಿಯಲ್ಲಿ ಎನ್.ಎಸ್.ವಿ ಪಾಕ್ಷಿಕ ಕಾರ್ಯಕ್ರಮ: ಜನಜಾಗೃತಿ ಜಾಥಾ




ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ಹಿರೇಸಿಂದೋಗಿ ಸಮುದಾಯ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಸಮುದಾಯ ಆರೋಗ್ಯ ಕೇಂದ್ರದಲ್ಲಿ "ಪುರುಷ ಸಂತಾನ ನಿರೋಧ ಶಸ್ತ್ರಚಿಕಿತ್ಸೆ ಎನ್.ಎಸ್.ವಿ ಪಾಕ್ಷಿಕ ಹಾಗೂ ಜನಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಎಂ.ಹೆಚ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿ, "ಇಂದಿನಿಂದಲೇ ನಿರ್ಧರಿಸೋಣ, ಕುಟುಂಬ ಯೋಜನೆಗಳ ಬಗ್ಗೆ ದಂಪತಿಗಳು ಕೂಡಿ ಚರ್ಚಿಸೋಣ" ಎಂಬುದು ಘೋಷವಾಕ್ಯವಾಗಿದ್ದು, ಪ್ರತಿ ವರ್ಷದಂತೆ ನವಂಬರ್ 21 ರಿಂದ ಡಿಸೆಂಬರ್ 05 ರವರೆಗೆ ಎನ್.ಎಸ್.ವಿ ಪಾಕ್ಷಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದ ಉದ್ದೇಶ ಸಂತಾನ ನಿರೋಧ ಶಸ್ತ್ರಚಿಕಿತ್ಸೆಯಲ್ಲಿ ಪುರುಷರ ಸಹಭಾಗಿತ್ವದ ಬಗ್ಗೆ ಅರಿವು ಮೂಡಿಸಿ ಸೇವೆ ನೀಡುವುದಾಗಿದೆ. ತಾಯಿಮರಣ ಮತ್ತು ಶಿಶುಮರಣ ತಡೆಗಟ್ಟಲು, ಜನಸಂಖ್ಯಾ ನಿಯಂತ್ರಣವನ್ನು ಸಾಧಿಸಲು ಪುರುಷರ ಸಂತಾನ ನಿರೋಧ ಶಸ್ತ್ರಚಿಕಿತ್ಸೆಯ ಅವಶ್ಯಕತೆಯು ಇರುತ್ತದೆ. ಇದು ಸರಳ ಹಾಗೂ ಸುರಕ್ಷಿತ ವಿಧಾನವಾಗಿದೆ. ಗಾಯ ಇಲ್ಲದ, ಹೊಲಿಗೆ ಇಲ್ಲದ, ಚಿಕಿತ್ಸಾ ವಿಧಾನ ಕೇವಲ 05 ರಿಂದ 10 ನಿಮಿಷಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾಡಲಾಗುವುದು. ಈ ಶಸ್ತ್ರಚಿಕಿತ್ಸೆಯ ನಂತರ ಸಾಧರಣವಾಗಿ ಎಲ್ಲಾ ಕೆಲಸ–ಕಾರ್ಯಗಳನ್ನು ಮಾಡಬಹುದು.

ಯಾವುದೇ ರೀತಿಯ ಅಡ್ಡ ಪರಿಣಾಮಗಳು ಉಂಟಾಗುವುದಿಲ್ಲ. ಈ ಶಸ್ತ್ರಚಿಕಿತ್ಸೆ ನಂತರ 03 ತಿಂಗಳವರೆಗೆ ಲೈಂಗಿಕ ಕ್ರಿಯೆಯಲ್ಲಿ ತೊಡಗುವಾಗ ಕಡ್ಡಾಯವಾಗಿ ನಿರೋಧ್ ಬಳಸಬೇಕು ಅಥವಾ ಹೆಣ್ಣುಮಕ್ಕಳು ಇತರೆ ತಾತ್ಕಾಲಿಕ ಕುಟುಂಬ ಕಲ್ಯಾಣ ವಿಧಾನಗಳನ್ನು ಬಳಸಬೇಕು. ಪ್ರತಿ ಕುಟುಂಬಕ್ಕೆ ಹೆಣ್ಣಾಗಲಿ ಗಂಡಾಗಲಿ ಒಂದು ಅಥವಾ ಎರಡೇ ಮಕ್ಕಳು ಸಾಕು. ಚಿಕ್ಕ ಕುಟುಂಬ ಚೊಕ್ಕ ಕುಟುಂಬ. ಚಿಕ್ಕ ಕುಟುಂಬ ಸುಖಿ ಕುಟುಂಬ. ಎನ್.ಎಸ್.ವಿ ಮಾಡಿಸಿಕೊಂಡು ಉತ್ತಮ ಜೀವನ ನಡೆಸಬಹುದು. ಜನಸಂಖ್ಯೆ ಹೆಚ್ಚಳದಿಂದ ಕುಟುಂಬಕ್ಕೆ ಮತ್ತು ನಮ್ಮ ದೇಶದಲ್ಲಿ ಬಹಳಷ್ಟು ಸಮಸ್ಯೆಗಳು ಉಂಟಾಗುತ್ತವೆ ಎಂದರು.

ಕೊಪ್ಪಳ ತಾಲೂಕಾ ಆರೋಗ್ಯಾಧಿಕಾರಿ ಡಾ.ರಾಮಾಂಜನೇಯ ಮಾತನಾಡಿ, ಒಂದು ಮಗುವಿನಿಂದ ಇನ್ನೊಂದು ಮಗುವಿಗೆ ಕನಿಷ್ಠ 03 ವರ್ಷ ಅಂತರ ಕಾಪಾಡಲು ಕುಟುಂಬ ಕಲ್ಯಾಣ ಯೋಜನೆಯ ತಾತ್ಕಾಲಿಕ ವಿಧಾನಗಳಾದ ಗರ್ಭನಿರೋಧಕ ಮಾತ್ರೆಗಳು, ಪಿಪಿಐಯುಸಿಡಿ, ಅಂತರ ಚುಚ್ಚುಮದ್ದು, ಪುರುಷರು ಬಳಸುವ ನಿರೋಧ್ ಮುಂತಾದ ತಾತ್ಕಾಲಿಕ ವಿಧಾನಗಳಿವೆ. ಶಾಶ್ವತ ವಿಧಾನಗಳಾದ ಮಹಿಳಾ ಸಂತಾನ ನಿರೋಧ ಶಸ್ತ್ರಚಿಕಿತ್ಸೆ ಹಾಗೂ ಪುರುಷ ಸಂತಾನ ನಿರೋಧ ಶಸ್ತ್ರಚಿಕಿತ್ಸೆ ಸಹ ಮಾಡಿಸಿಕೊಳ್ಳಬಹುದು ಎಂದು ಹೇಳಿದರು.

ಜನಜಾಗೃತಿ ಜಾಥಾ ಕಾರ್ಯಕ್ರಮವನ್ನು ಗ್ರಾಮದ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ, ಘೋಷಣೆ ಕೂಗುತ್ತಾ, ಸಾರ್ವಜನಿಕರಿಗೆ ಅರಿವು ಮೂಡಿಸಿ, ಕರಪತ್ರ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ರಮೇಶ ಮೂಲಿಮನಿ, ಅರವಳಿಕೆ ತಜ್ಞ ಡಾ.ಪ್ರತಾಪ್ ಶೆಟ್ಟಿ, ಆಯುಷ್ ವೈದ್ಯಾಧಿಕಾರಿ ಡಾ.ದೀಪಾ ಬಗಾರೆ, ಮೇಲ್ವಿಚಾರಕರಾದ ವಂದನಾ, ಮಹೇಶ್ವರ ಕೋಟೆ, ರೈಹಿಮತ್‌ಬಿ ಬೇಗಂ ಸೇರಿದಂತೆ ಆಶಾಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು, ತಾಯಂದಿರು, ಸಿಬ್ಬಂದಿಗಳು ಹಾಗೂ ಗ್ರಾಮದ ನಾಗರಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ ಅವರು ಕಾರ್ಯಕ್ರಮಕ್ಕೆ ಸ್ವಾಗತಿಸಿ, ನಿರೂಪಿಸಿದರು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸುಧಾ ಅವರು ವಂದನಾರ್ಪಣೆ ನೆರವೇರಿಸಿದರು.

# ಮಕ್ಕಳ ಹಕ್ಕುಗಳ ಮಕ್ಕಳ ಪರವಾದ ಕಾನೂನುಗಳು ದತ್ತು ಕಾರ್ಯಕ್ರಮ: ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ




ಕೊಪ್ಪಳ : ಗಂಗಾವತಿ ತಾಲೂಕಿನ ಶ್ರೀ ಸಿರಿಗೇರಿ ಡಿ. ವೆಂಕೋಬ ಶೆಟ್ಟಿ ಮೆಮೋರಿಯಲ್ ನರ್ಸಿಂಗ್ ಕಾಲೇಜನಲ್ಲಿ, ವಿದ್ಯಾಭ್ಯಾಸ ಮಾಡುತ್ತಿರುವ ನರ್ಸಿಂಗ್ ವಿದ್ಯಾರ್ಥಿಗಳಿಗೆ ಮಕ್ಕಳ ಹಕ್ಕುಗಳು ಮತ್ತು ಮಕ್ಕಳ ಪರವಾದ ಕಾನೂನುಗಳು ಹಾಗೂ ದತ್ತು ಕಾರ್ಯಕ್ರಮದ ಕುರಿತು ಮಂಗಳವಾರ ಜಾಗೃತಿ ಮೂಡಿಸಲಾಯಿತು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ ರಾಮತ್ನಾಳ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಭಾರತ ದೇಶವು ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಸಹಿ ಮಾಡಿರುತ್ತದೆ. ಮಕ್ಕಳಸ್ನೇಹಿ ವಾತಾವರಣವನ್ನು ನಿರ್ಮಿಸಲು ಹಾಗೂ ಭಾರತ ಸಂವಿಧಾನವು "ಮಹಿಳೆ ಮತ್ತು ಮಕ್ಕಳಿಗೆ ವಿಶೇಷ ಅವಕಾಶಗಳನ್ನು ಕಲ್ಪಿಸಲು" ನೀಡಿರುವ ಅವಕಾಶಗಳನ್ವಯ, ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012, ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಮತ್ತು ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 ಇನ್ನೂ ಮುಂತಾದ ಕಾಯ್ದೆಗಳನ್ನು ಜಾರಿಗೊಳಿಸಿದೆ. ಈ ಎಲ್ಲಾ ಕಾಯ್ದೆಗಳನ್ವಯ 18 ವರ್ಷದೊಳಗಿನ ಯಾವುದೇ ಮಕ್ಕಳಿಗೆ ದೈಹಿಕ, ಮಾನಸಿಕ, ಶಾಬ್ಧಿಕವಾಗಿ ಲೈಂಗಿಕ ಹಲ್ಲೆ, ಹಿಂಸೆ ಮತ್ತು ಕಿರುಕುಳವನ್ನು ನೀಡುವುದನ್ನು ನಿಷೇಧಿಸಿದೆ. ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ಈ ಕಾಯ್ದೆಯು ಎಷ್ಟು ತೀವ್ರವಾಗಿದೆ ಎಂದರೆ, ಪೊಲೀಸ್ ವಿಚಾರಣೆಯನ್ನು 60 ದಿನದೊಳಗಾಗಿ ಮುಕ್ತಾಯಗೊಳ್ಳಬೇಕು, ನ್ಯಾಯಾಲಯ ವಿಚಾರಣೆಯು ಗರಿಷ್ಠ 01 ವರ್ಷದೊಳಗೆ ಮುಕ್ತಾಯಗೊಳ್ಳಬೇಕು. ಲೈಂಗಿಕ ಅಪರಾಧಗಳನ್ನು ಎಸಗಿದ ಅಪರಾಧಿಗಳಿಗೆ ಮರಣ ದಂಡನೆಯನ್ನು ನೀಡಬಹುದಾಗಿದೆ ಎಂದರು.

ಸರ್ವೋಚ್ಚ ನ್ಯಾಯಾಲಯವು "ಅಪ್ರಾಪ್ತ ವಯಸ್ಸಿನ ಪತ್ನಿಯೊಂದಿಗಿನ ಲೈಂಗಿಕ ಸಂಪರ್ಕವು ಸಹ ಅಪರಾಧ" ಎಂದು ಆದೇಶಿಸಿದ್ದು, ಬಾಲ್ಯವಿವಾಹ ಪ್ರಕರಣಗಳಲ್ಲಿ ಬಾಲಕಿಯೊಂದಿಗೆ ವಯಸ್ಕ ಪುರುಷ ಲೈಂಗಿಕ ಚಟುವಟಿಕೆಗಳಲ್ಲಿ ಭಾಗಿಯಾದಲ್ಲಿ, ಅದು ಸಹ ಅಪರಾಧವಾಗಿದ್ದು, ಈ ಅಪರಾಧಕ್ಕೆ ಕನಿಷ್ಠ 20ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ ಎಂದು ವಿವರಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳನ್ನು ಅಕ್ರಮವಾಗಿ ಮಾರಾಟ ಮಾಡಿದತಂಹ ಪ್ರಕರಣ, ಮಗವನ್ನು ಬದಲಾಯಿಸಿ ನೀಡಿದ ಬಗ್ಗೆ ದೂರುಗಳು ಕೇಳಿಬಂದಿವೆ. ಈ ರೀತಿ ನಡೆಯದೇ ಇರಲಿ ಎನ್ನುವ ಉದ್ದೇಶದಿಂದ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ವಿದ್ಯಾರ್ಥಿಗಳು ನಿಮ್ಮ ಭವಿಷ್ಯದ ವೃತ್ತಿ ಜೀವನದಲ್ಲಿ ಈ ಎಲ್ಲಾ ಕಾಯ್ದೆ ಮತ್ತು ಕಾನೂನುಗಳನ್ನು ತಿಳಿದುಕೊಂಡು ತಮ್ಮ ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳುವುದರೊಂದಿಗೆ ಸಮುದಾಯದಲ್ಲಿ ಜಾಗೃತಿಯನ್ನು ಮೂಡಿಸುವ ಮೂಲಕ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣ ಮಾಡಲು ಸಹಕರಿಸಬೇಕೆಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತ ರವಿಕುಮಾರ ಪವಾರ ಅವರು ಮಕ್ಕಳ ನ್ಯಾಯ (ಮಕ್ಕಳ ರಕ್ಷಣೆ ಮತ್ತು ಪೋಷಣೆ) ಕಾಯ್ದೆ–2015, ತಿದ್ದುಪಡಿ 2021ರ ಬಗ್ಗೆ, ಔಟ್ ರೀಚವರ್ಕರ್ ಪ್ರತಿಭಾ ಅವರು ಬಾಲ್ಯವಿವಾಹ ನಿಷೇಧ ಕಾಯ್ದೆ–2006 ತಿದ್ದುಪಡಿ–2016ರ ಕುರಿತು ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಪ್ರಶಾಂತ ರಡ್ಡಿ ಅವರು ದತ್ತು ಅಧಿನಿಯಮ–2022, ಹಾಗೂ ಕಾನೂನು ಬದ್ದ ದತ್ತು ಪ್ರಕ್ರಿಯೆ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಸಿರಿಗೇರಿ ಡಿ. ವೆಂಕೋಬ ಶೆಟ್ಟಿ ಮೆಮೋರಿಯಲ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಬಸವರಾಜ ಮೇಟಿ, ಗಂಗಾವತಿ ಸಂಚಾರಿ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕಿ ಶಾರದಮ್ಮ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಯಶ್ರೀ, ಗ್ರೇಡ್–2 ತಹಶೀಲ್ದಾರ ವಿಶ್ವನಾಥ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮತ್ತು ಕಾಲೇಜಿನ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಶಿಸ್ತು ಪಾಲಿಸಿ ಮುಂದೆ ಯೋಧರಾಗಿ: ಕಮಾಂಡಿಗ್ ಆಫೀಸರ್ ಜಸ್ದೀಪ್ ಸಿಂಗ್




ಹುಬ್ಬಳ್ಳಿ: ಎನ್ ಸಿ ಸಿ ಎಂಬುದು ಕಬ್ಬಿಣದ ಕಡಲೆ ಅಲ್ಲ ಈಜಬೇಕು ಈಜಿ ಜಯಿಸಬೇಕು ಅಂದಾಗ ಮಾತ್ರ ಭಾರತಕ್ಕೆ ಒಬ್ಬ ಯುವ ಯೋಧ ಹುಟ್ಟಿಕೊಳ್ಳುತ್ತಾನೆ ಎಂದು 28 ಕರ್ನಾಟಕ ಬಟಾಲಿಯನ್‌ನ ಕಮಾಂಡಿಗ್ ಆಫಿಸರ್ ಜಸ್ದೀಪ್ ಸಿಂಗ್ ಹೇಳಿದರು.

ನಗರದ ಕನಕದಾಸ ಶಿಕ್ಷಣ ಸಮಿತಿ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿದ್ಯಾನಗರ ಹುಬ್ಬಳ್ಳಿಯ 4/2/28 ಕೊಯ್ ನ ಡಾ. ಬಿಎಫ್ ದಂಡಿನ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಳಳಲಾದ 76ನೇ ಎನ್.ಸಿ.ಸಿ ದಿನಾಚರಣೆಯ ಅಂಗವಾಗಿ ಅವರು ಕೆಡೆಟ್ಸ್‌ಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಎಲ್ಲ ವಿದ್ಯಾರ್ಥಿಗಳು ಎನ್‌ಸಿಸಿ ಮುಗಿದ ನಂತರ ಪ್ರತಿಯೊಬ್ಬರು ಸೇನೆಯನ್ನು ಸೇರಬೇಕು ಮತ್ತು ಪ್ರತಿಯೊಬ್ಬ ಕೆಡೆಟ್ಸ್‌ಗಳು ಆರೋಗ್ಯದ ಕಡೆ ಹರಚ್ಚು ಗಮನ ಹರಿಸಬೇಕು ಎಂದು ಹೇಳಿದರು.

ಎನ್.ಸಿ.ಸಿಯ ಧ್ಯೇಯೋದ್ದೇಶಗಳನ್ನು ಪಾಲನೆ ಮಾಡುತ್ತ ಅಧ್ಯಯನದ ಕಡೆಗೂ ಹೆಚ್ಚು ಗಮನ ಹರಿಸಬೇಕು ಮತ್ತು ವಿದ್ಯಾರ್ಥಿಯಾಗಿದ್ದಾಗಲೆ ಸಾಧನೆ ಮಾಡುವ ಛಲವನ್ನು ಹೊಂದಿರಬೇಕು ಎಂದು ಹೇಳಿದರು.

ವಿದ್ಯಾರ್ಥಿಯಾಗಿದ್ದಾಗ ನಾನು ಎನ್‌ಸಿಸಿ ಎಂದರೆ ಹಿಂಜರಿಯುತ್ತಿದ್ದೆ ಆದರೆ ಇಂದು ಎನ್‌ಸಿಸಿಎ 28 ಬಟಾಲಿಯನ್‌ನ ಕಮಾಂಡಿಂಗ್ ಆಫಿಸರ್ ಆಗಿ ನಿಮ್ಮ ಮುಂದಿರುವೆ ಎಂದರೆ ಅದಕ್ಕೆ ಕಾರಣ ನಾನು ಕೆಡೆಟ್ ಆದಾಗ ನನ್ನಲ್ಲಿದ್ದ ಆತ್ಮಸ್ಥೈರ್ಯ ಕಾರಣ ಎಂದು ಹೇಳಿ ಕೆಡೆಟ್ಸ್‌ಗಳನ್ನು ಹುರುದುಂಬಿಸಿದರು.

ಕಾರ್ಯಕ್ರಮದಲ್ಲಿ ಕೆಎಸ್‌ಎಸ್ ನ 4/2/28 ಬಟಾಲಿಯನ್ ನ ಎಎನ್‌ಒ ಲೆ. ಡಾ. ಗಿರೀಶ ಚಿಲ್ಲಣ್ಣನವರ ಮತ್ತು ಕೆಡೆಟ್ಸ್‌ಗಳ ಸಾಧನೆಯ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಬಾಕ್ಸ್ ಐಟಂ

ಬೆಳಿಗ್ಗೆ ಕೆಡೆಟ್ಸ್‌ಗಳಿಂದ ಎನ್‌ಸಿಸಿ ದಿನಾಚರಣೆ ಮತ್ತು ಸಂವಿಧಾನ ದಿನಾಚರಣೆ ಅಂಗವಾಗಿ ಕೆ.ಎಸ್.ಎಸ್ ನ 4/2/28 ಬಟಾಲಿಯನ್ ನಿಂದ ಉಣಕಲ್ ಚಂದ್ರ ಮೌಳೇಶ್ವರ್ ದೇವಸ್ಥಾನದ ವರೆಗೆ ಜಾಗೃತಿ ಪಥಸಂಚಲನ ಮಾಡಿ, ಪುರಾತನ ಕಾಲದ ಐತಿಹಾಸಿಕ ಪ್ರಸಿದ್ಧ ಚಂದ್ರ ಮೌಳೇಶ್ವರ್ ದೇವಸ್ಥಾನವನ್ನು ವೀಕ್ಷಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಸೇನಾ ಮೆಡಲ್ ಪಡೆದ ಸುಬೇದಾರ ಜಾಬಿರ್‌ಖಾನ, ಪಿಯು ಕಾಲೇಜಿನ ಪ್ರಾಚಾರ್ಯ ಪ್ರೊ. ಸಂದೀಪ ಬೂದಿಹಾಳ, ಮತ್ತು ಪದವಿ ಪ್ರಾಚಾರ್ಯ ಡಾ. ಬಿ.ಜಿ ಮಡ್ಲಿ, ಎ.ಎನ್.ಒ ಲೆ. ಡಾ. ಗಿರೀಶ ಚಿಲ್ಲಣ್ಣನವರ ಸೇರಿದಂತೆ ನೂರಾರು ಕೆಡೆಟ್ಸ್‌ಗಳು ಉಪಸ್ಥಿತರಿದ್ದರು. ಪ್ರೊ. ಬಿ.ಜಿ. ಮಡ್ಲಿ ಸ್ವಾಗತಿಸಿದರು, ನಿಮಿಷಾ ಬೈಕೇರಿ ನಿರೂಪಿಸಿದರು.

## 22.56 ಕೋಟಿ ರೂ.ಗಳ ಕಾಮಗಾರಿಗೆ ಚಾಲನೆ

# 6 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಿ : ಜೆ.ಟಿ.ಪಾಟೀಲ

ಬಾಗಲಕೋಟೆ: : ಆನದಿನ್ನಿ ಏತ ನೀರಾವರಿ ಯೋಜನೆಯ 2ನೇ ಹಂತದ 22.56 ಕೋಟಿ ರೂ.ಗಳ ವೆಚ್ಚದ ಕಾಮಗಾರಿಯನ್ನು 6 ತಿಂಗಳಲ್ಲಿ ಪೂರ್ಣಗೊಳಿಸಬೇಕೆಂದು ಬೀಳಗಿ ಶಾಸಕರು ಆಗಿರುವ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಹೇಳಿದರು.

ಆನದಿನ್ನಿ ಗ್ರಾಮದ ಹತ್ತಿರ ಮಂಗಳವಾರ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಹಮ್ಮಿಕೊಂಡ ಏತ ನೀರಾವರಿ ಯೋಜನೆ-2ನೇ ಹಂತದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿ ಮಾತನಾಡಿದ ಅವರು ಯಡಹಳ್ಳಿ, ಆನದಿನ್ನಿ, ಬನ್ನಿದಿನ್ನಿ, ಗದ್ದನಕೇರಿ, ಕೇಸನೂರು ಗ್ರಾಮಗಳ ರೈತರಿಗೆ ಅನುಕೂಲವಾಗುವ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಅಂತರ್ಜಲ ಹೆಚ್ಚಿಸುವ ಉದ್ದೇಶ ಇದಾಗಿದೆ. ಒಟ್ಟು 840 ಹೆಕ್ಟೇರ್ ಪ್ರದೇಶ ನೀರಾವರಿಯಾಗಲಿದ್ದು, ಈ ಭೂಮಿ ಆಲಮಟ್ಟಿ ಹಿನ್ನೀರಿಗೆ 524 ಮೀ ಎತ್ತರಿಸಿದರೂ ಮುಳುಗಡೆಯಾಗದ ಜಮೀನು ಆಗಿದೆ ಎಂದರು.

ಕಾರ್ಯಕ್ರಮದಲ್ಲಿ ಯಡಹಳ್ಳಿ ಗ್ರಾಮ ಪಂಚಾಯತ ಅಧ್ಯಕ್ಷೆ ಮಾಲಾ ಸಂಗಪ್ಪ ನಾಲತ್ವಾಡ, ಕಾರ್ಯಪಾಲಕ ಅಭಿಯಂತರ ಎಸ್.ಎಸ್.ಕೊಳ್ಳಿ, ಸಹಾಯಕ ಅಭಿಯಂತರ ಪ್ರಕಾಶ ನಾಯಕ, ಶಾಖಾಧಿಕಾರಿ ಸತೀಶ ಕವಟಕರ, ಗುತ್ತಿಗೆದಾರ ವಿಶ್ವನಾಥ ಕಲ್ಯಾಣಿ, ಅಪ್ಪಾಸಾಹೇಬಗೌಡ ಪಾಟೀಲ, ಜಿ.ಪಂ ಮಾಜಿ ಅಧ್ಯಕ್ಷ ಆರ್.ಆರ್.ತುಂಬರಮಟ್ಟಿ, ಗ್ರಾ.ಪಂ ಮಾಜಿ ಸದಸ್ಯ ಭರಮಪ್ಪ ಕೋಟಿ, ಮಲ್ಲಪ್ಪ ದೊರೆಗೋಳ, ಗದ್ದನಕೇರಿಯ ಸಿದ್ದಣ್ಣ ಛಬ್ಬಿ, ಚಂದ್ರು ಕುರಿ, ಪರಶುರಾಮ ವಾಲಿಕಾರ ಪ್ರಭು ನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.



# ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ಉತ್ಸಾಹ ತೋರಿದ ಯುವ ಮತದಾರರು

ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯ ಅವಧಿಯಲ್ಲಿ ಜಿಲ್ಲೆಯಲ್ಲಿ ನಡೆದ ವಿಶೇಷ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ, ಜಿಲ್ಲೆಯ ಯುವ ಜನತೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆ ಮಾಡಿಕೊಳ್ಳಲು ಹೆಚ್ಚಿನ ಉತ್ಸಾಹ ತೋರಿದ್ದು, ವಿಶೇಷ ನೋಂದಣಿ ಅಭಿಯಾನದ ಅವಧಿಯಲ್ಲಿ 2796 ಮತದಾರರು ಮತದಾರರ ಪಟ್ಟಿಗೆ ಹೊಸದಾಗಿ ಸೇರ್ಪಡೆಗೆ ಅರ್ಜಿ ಸಲ್ಲಿಸಿದ್ದಾರೆ.

ಮತದಾರರ ಪಟ್ಟಿಯ ಪರಿಷ್ಕರಣೆಯ ಅರ್ಹತಾ ದಿನವಾದ ಜನವರಿ 1 2025 ಕ್ಕೆ ಸಂಬಂಧಿಸಿದಂತೆ ಉತ್ತರ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯ ಅವಧಿಯಲ್ಲಿ , ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ, ತೆಗೆದು ಹಾಕುವಿಕೆ, ತಿದ್ದುಪಡಿ ಮಾಡುವ ಕುರಿತಂತೆ ಜಿಲ್ಲೆಯಾದ್ಯಂತ ನವೆಂಬರ್ 9 ಮತ್ತು 10 ಹಾಗೂ 23 ಮತ್ತು 24 ರಂದು ವಿಶೇಷ ನೋಂದಣಿ ಅಭಿಯಾನ ಕಾರ್ಯಕ್ರಮವನ್ನು ಆಯೋಜಸಿದ್ದು ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಸಂಬಂಧಪಟ್ಟ ಮತಗಟ್ಟೆ ಅಧಿಕಾರಿಗಳು ಹಾಜರಿದ್ದು ಸಾರ್ವಜನಿಕರಿಂದ ನಮೂನೆ 6, ನಮೂನೆ 7 ಮತ್ತು ನಮೂನೆ 8 ರಲ್ಲಿ ಅರ್ಜಿಗಳನ್ನು ಸ್ವೀಕರಿಸಿದ್ದಾರೆ.

ವಿಶೇಷ ನೋಂದಣಿ ಅಭಿಯಾನದ ಅವಧಿಯಲ್ಲಿ ಹಳಿಯಾಳ ವಿಧಾನ ಸಭಾ ಕ್ಷೇತ್ರದಲ್ಲಿ 422 ಹೊಸ ಮತದಾರರು ಸೇರ್ಪಡೆಗೆ ಅರ್ಜಿ ನೀಡಿದ್ದು, 258 ಮಂದಿ ತಿದ್ದುಪಡಿಗಾಗಿ ಅರ್ಜಿ ಸಲ್ಲಿಸಿದ್ದಾರೆ. ಕಾರವಾರದಲ್ಲಿ 333 ಹೊಸ ಸೇರ್ಪಡೆಗೆ, ತಿದ್ದುಪಡಿಗಾಗಿ 332, ಕುಮಟಾದಲ್ಲಿ 263 ಹೊಸ ಸೇರ್ಪಡೆಗೆ, ತಿದ್ದುಪಡಿಗಾಗಿ 223 ,ಭಟ್ಕಳದಲ್ಲಿ 254 ಹೊಸ ಸೇರ್ಪಡೆಗೆ, ತಿದ್ದುಪಡಿಗಾಗಿ 250, ಶಿರಸಿಯಲ್ಲಿ 476 ಹೊಸ ಸೇರ್ಪಡೆಗೆ, ತಿದ್ದುಪಡಿಗಾಗಿ 327, ಯಲ್ಲಾಪುರದಲ್ಲಿ 1048 ಹೊಸ ಸೇರ್ಪಡೆಗೆ, ತಿದ್ದುಪಡಿಗಾಗಿ 865 ಅರ್ಜಿಗಳನ್ನು ಸ್ವೀಕರಿಸಲಾಗಿದೆ.

ವಿಶೇಷ ನೋಂದಣಿ ಅಭಿಯಾನದ ಈ ಅವಧಿಯಲ್ಲಿ ಜಿಲ್ಲೆಯಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಒಟ್ಟು 2796 ಮಂದಿ ನಮೂನೆ 6 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಿದ್ದು, 2027 ಮಂದಿ ಮತದಾರರ ಪಟ್ಟಿಯಲ್ಲಿ ಅಗತ್ಯ ತಿದ್ದುಪಡಿಗಳನ್ನು ಮಾಡಲು ನಮೂನೆ 8 ರಲ್ಲಿ ಅರ್ಜಿ ಸಲ್ಲಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2025 ಅರ್ಹತಾ ದಿನಾಂಕ. 1-1-2025 ಕ್ಕೆ ಸಂಬಂಧಿಸಿದಂತೆ, ದಿನಾಂಕ-20-8-2024 ರಿಂದ 15-12-2024 ರವರೆಗೆ ಮತದಾರರ ಪಟ್ಟಿ ಪರಿಷ್ಕರಣೆ ಪ್ರಾರಂಭವಾಗಿದ್ದು, ಯುವ ಮತದಾರರು ಹಾಗೂ ಸಾರ್ವಜನಿಕರು ಹೊಸದಾಗಿ ಹೆಸರು ಸೇರ್ಪಡೆಗಾಗಿ, ಹೆಸರು ಕಡಿಮೆಗೊಳಿಸಲು, ವರ್ಗಾವಣೆ, ಹೆಸರಿನಲ್ಲಿ ತಿದ್ದುಪಡಿಗಾಗಿ ಸೂಕ್ತ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಮತಗಟ್ಟೆ ಅಧಿಕಾರಿ (ಬಿಎಲ್‌ಓ) ರವರಿಗೆ ಅಥವಾ ಗಿಊಂ (voter help-line mobile app) ಮೂಲಕವೂ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು : ಕೆ. ಲಕ್ಷ್ಮೀಪ್ರಿಯಾ, ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ

# ಭ್ರೂಣ ಹತ್ಯೆ ದೊಡ್ಡ ಅಪರಾಧ : ಅಪರ ಜಿಲ್ಲಾಧಿಕಾರಿ

ಕಾರವಾರ - ಒಂದು ಜೀವವು ಜಗತ್ತಿಗೆ ಕಾಲಿಡುವ ಪೂರ್ವದಲ್ಲೇ ಹತ್ಯೆ ಮಾಡುವುದು ದೊಡ್ಡ ಅಪರಾಧವಾಗಿದ್ದು, ಸಮಾಜದಲ್ಲಿನ ಗಂಡು ಹೆಣ್ಣು ತಾರತಮ್ಯವನ್ನು ತಡೆಗಟ್ಟಲು ಅನುಷ್ಠಾನ ಅಧಿಕಾರಿಗಳು ತಮ್ಮ ಜವಾಬ್ದಾರಿಯ ಗಂಭೀರತೆಯನ್ನು ಅರ್ಥಮಾಡಿಕೊಂಡು ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಾಜೀದ್ ಅಹಮದ್ ಮುಲ್ಲಾ ಹೇಳಿದರು.



ಅವರು ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಪ್ರಸವ ಪೂರ್ವ ಲಿಂಗ ಪರೀಕ್ಷೆ ಪ್ರತಿಬಂಧಕ ಕಾಯ್ದೆ (PCPNDT ACT) ಕುರಿತ ಒಂದು ದಿನದ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪ್ರಸವ ಪೂರ್ವ ಲಿಂಗ ಪರೀಕ್ಷೆ ಪ್ರತಿಬಂಧಕ ಕಾಯ್ದೆ ಜಾರಿಗೆ ಬಂದು 30 ವರ್ಷ ಗತಿಸಿದರೂ ಅಮಾನವೀಯ ಹಾಗೂ ಅಪರಾಧ ಕೃತ್ಯಗಳು ಇನ್ನೂ ಮುಂದುವರೆದಿರುವುದು ವಿಷಾಧನೀಯವಾಗಿದೆ. ಶಿಶು ಹತ್ಯೆಯ ಗಂಭೀರತೆಯನ್ನು ಅರ್ಥ ಮಾಡಿಕೊಂಡು ಅನುಷ್ಠಾನ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಹಾಗೂ ನಿಯಮಿತವಾಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ವೈದ್ಯರು ತಮ್ಮ ವೃತ್ತಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುವುದರ ಜೊತೆಗೆ ಪೋಷಕರಿಗೆ ಪ್ರಸವ ಪೂರ್ವ ಲಿಂಗ ಪತ್ತೆ ಹಚ್ಚುವುದು ಶಿಕ್ಷಾರ್ಹ ಅಪರಾಧ ಎಂಬುದನ್ನು ಮನದಟ್ಟು ಮಾಡಬೇಕು ಹಾಗೂ ಜಿಲ್ಲೆಯಲ್ಲಿ ಭ್ರೂಣ ಹತ್ಯೆಯಂತಹ ಘಟನೆಗಳು ನಡೆಯದಂತೆ ಮಾನವೀಯತೆ ನೆಲೆಯಲ್ಲಿ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ. ಎಂ ಮಾತನಾಡಿ, ಮಹಿಳೆ ಯಾವುದರಲ್ಲೂ ಕಡಿಮೆಯಿಲ್ಲ. ಇಂದು ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ತನ್ನದೇಯಾದ ಛಾಪು ಮೂಡಿಸಿದ್ದಾಳೆ. ಹೆಣ್ಣು ಯಾವತ್ತು ಹೊರೆಯಲ್ಲ ಎಂದು ತಿಳಿದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ. ಹೆಣ್ಣು ಸಮಾಜದಲ್ಲಿ ಸುರಕ್ಷಿತವಾಗಿ ಬದುಕಲು ವಾತಾವರಣ ಕಲ್ಪಿಸುವುದು ಅವಶ್ಯಕವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ (ಆಡಳಿತ) ನಾಗೇಶ ರಾಯ್ಕರ ಮಾತನಾಡಿ ಸಮಾಜದಲ್ಲಿ ಇತ್ತಿಚಿನ ದಿನಗಳಲ್ಲಿ ನಡೆಯುತ್ತಿರುವ ಘಟನೆಗಳು ಹೆಚ್ಚು ಕಳವಳಕಾರಿಯಾಗಿದ್ದು, ಈ ರೀತಿಯ ಘಟನೆಗಳು ಮರಕಳಿಸದಂತೆ ಎಚ್ಚರವಹಿಸಬೇಕಾಗಿದ್ದು ನಮ್ಮ ಕರ್ತವ್ಯವಾಗಿದೆ ಎಂದರು.

ಕಾರ್ಯಾಗಾರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ವಿರೂಪಾಕ್ಷಗೌಡ ಪಾಟೀಲ್, ಡಿವೈಎಸ್ಪಿ ಎಸ್. ವಿ ಗಿರೀಶ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಅನ್ನಪೂರ್ಣ ವಸ್ತ್ರದ, ಆರ್‌ಸಿಎಚ್ ಅಧಿಕಾರಿ ಡಾ. ನಟರಾಜ, ಮಕ್ಕಳ ರಕ್ಷಣಾಧಿಕಾರಿ ಸೋನಲ್ ಐಗಳ , ನಿವೃತ್ತ ಸಮಾಜಶಾಸ್ತ್ರ ಉಪನ್ಯಾಸಕ ಡಿ.ಆರ್. ನಾಯ್ಕ, ವಿವಿಧ ಇಲಾಖೆಯ ಅನುಷ್ಠಾನ ಅಧಿಕಾರಿಗಳು ಆಶಾ ಕಾರ್ಯಕರ್ತರು ಮತ್ತಿತರರು ಇದ್ದರು.

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ ಅವರಿಂದ ಲಕ್ಕುಂಡಿ ಗ್ರಾಮಕ್ಕೆ ಭೇಟಿ



ಗದಗ : ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ ಅವರು ಬುಧವಾರ ಜಿಲ್ಲೆಯ ಲಕ್ಕುಂಡಿ ಗ್ರಾಮಕ್ಕೆ ಭೇಟಿ ನೀಡಿದರು.

ಅಲ್ಲಿ ಲಕ್ಕುಂಡಿ0ಯು ಪಾರಂಪರಿಕ, ಗತಕಾಲದ,ಐತಿಹಾಸಿಕ ವೈಭವನ್ನು ಪುನರಸ್ಥಾಪಿಸುವ ಉದ್ದೇಶದಿಂದ ಲಕ್ಕುಂಡಿ ಗ್ರಾಮದಲ್ಲಿ ಸ್ಮಾರಕಗಳ ಸುಂದರ ಶಿಲ್ಪ ಕಾಲಕೃತಿಗಳ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾ0ರ್ಯದಲ್ಲಿ ಸಂಗ್ರಹಣೆ ಮಾಡಲಾದ ಪ್ರಾಚ್ಯಾವಶೇಷಗಳನ್ನು ವೀಕ್ಷಣೆ ಮಾಡಿದರು.

ಪ್ರಾಚ್ಯಾವಶೇಷಗಳನ್ನು ಒಂದೆಡೆ ಕ್ರೂಢೀಕರಿಸಿ ಆ ಪ್ರದೇಶದ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ಕ್ರಮ ವಹಿಸಬೇಕು.. ಲಕ್ಕುಂಡಿ0ಯು ಪೂರ್ಣ ವೈಭವವನ್ನು ಮರಳಿ ತಂದು ಜಾಗತಿಕ ಮನ್ನಣೆ ತರುವ ಪ್ರಯತ್ನವಾಗಬೇಕೆಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ತಹಶೀಲ್ದಾರರಾದ ಶ್ರೀನಿವಾಸಮೂರ್ತಿ ಕುಲಕರ್ಣಿ, ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಅಯುಕ್ತರಾದ ಡಾ. ಶರಣು ಗೋಗೇರಿ, ಲಕ್ಕುಂಡಿ ಪಾರಂಪರಿಕ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಸದಸ್ಯರಾದ ಸಿದ್ಧಲಿಂಗೇಶ್ವರ ಪಾಟೀಲ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ್ವರ ವಿಭೂತಿ, ಅ.ದ.ಕಟ್ಟಿಮನಿ ಮತ್ತಿತರರು ಇದ್ದರು.

## ಜಿಲ್ಲೆಯನ್ನು ಮಾದರಿ ಸೋಲಾರ್ ಜಿಲ್ಲೆಯಾಗಿ ಮಾಡಿ :ಅಪರ ಜಿಲ್ಲಾಧಿಕಾರಿ



ಕಾರವಾರ - ಜಿಲ್ಲೆಯಎಲ್ಲಾ ಸರಕಾರಿಕಚೇರಿ ಕಟ್ಟಡಗಳ ಮೇಲ್ಛಾವಣಿ ಮೇಲೆ ಸೋಲಾರ್ ಘಟಕಗಳನ್ನು ಸ್ಥಾಪಿಸುವ ಮೂಲಕ ಜಿಲ್ಲೆಯನ್ನು ರಾಜ್ಯದಲ್ಲಿಯೇ ಮಾದರಿ ಸೋಲಾರ್ ಜಿಲ್ಲೆಯಾಗಿ ಮಾಡುವ ನಿಟ್ಟಿನಲ್ಲಿ-ಎಲ್ಲಾಇಲಾಖೆಯ ಅಧಿಕಾರಿಗಳು ತಕ್ಷಣದಿಂದ ಲೇಕಾರ್ಯೋನ್ಮುಖರಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಸಾಜೀದ್ ಅಹಮದ್ ಮುಲ್ಲಾ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಂಪ್ರದಾಯಿಕ ವಿದ್ಯುತ್ ಮೂಲಗಳು ಕಾಲಕ್ರಮೇಣ ನಶಿಸಲಿದ್ದು , ಸೂರ್ಯ ಶಕ್ತಿಯಿಂದ ದೊರೆಯುವ ವಿದ್ಯುತ್ ಗೆ ಯಾವುದೇ ಮೊತ್ತವನ್ನು ಪಾವತಿಸಬೇಕಾಗಿಲ್ಲಆದ್ದರಿಂದ ವಿದ್ಯುತ್ ಸ್ವಾವಲಂಬನೆ ಸಾಧಿಸುವಉದ್ದೇಶದಿಂದಜಿಲ್ಲೆಯ ಸರಕಾರಿ ಕಚೇರಿಗಳು ಸಾರ್ವಜನಿಕರಿಗೆ ಮಾದರಿಯಾಗಿತಮ್ಮ ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸಿಕೊಳ್ಳುವ ಕುರಿತಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಜಿಲ್ಲೆಯಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್, ಕಂದಾಯ ಇಲಾಖೆ, ಪೊಲೀಸ್ ಇಲಾಖೆ , ಶಾಲೆಗಳು, ಅಂಗನವಾಡಿಗಳು, ಪ್ರಾಥಮಿಕಆರೋಗ್ಯ ಕೇಂದ್ರಗಳು ಸೇರಿದಂತೆಎಲ್ಲಾ ಕಟ್ಟಡಗಳ ಮತ್ತು ಮೇಲ್ಛಾವಣಿಯ ಸ್ಥಿತಿಗತಿ ಕುರಿತಂತೆ ಸಂಬಂದಪಟ್ಟ ಅಧಿಕಾರಿಗಳು 15 ದಿನದಲ್ಲಿ ಸಮಗ್ರ ವರದಿ ನೀಡುವಂತೆ ತಿಳಿಸಿದ ಅಪರ ಜಿಲ್ಲಾಧಿಕಾರಿಗಳು ಈ ವರದಿಗಳನ್ನು ಪರಿಶೀಲಿಸಿ ಈ ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸುವ ಕುರಿತಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿಖರ ಮಾಹಿತಿ ಸಿದ್ದಪಡಿಸುವಂತೆ ಸೂಚನೆ ನೀಡಿದರು.

ಎಲ್ಲಾ ತಾಲೂಕುಗಳ ತಹಸೀಲ್ದಾರರು, ತಾ.ಪಂ. ಕಾರ್ಯನಿರ್ವಹಣಾಧಿಕಾರಿಗಳು , ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಮತ್ತು ಹೆಸ್ಕಾಂ ಇಲಾಖೆಯ ಅಧಿಕಾರಿಗಳು ತಾಲೂಕು ಮಟ್ಟದಲ್ಲಿ ಮಾಹಿತಿಯನ್ನುಕ್ರೂಢೀಕರಿಸುವಂತೆ ತಿಳಿಸಿದರು.

ಜಿಲ್ಲೆಯಎಲ್ಲಾ ಸರಕಾರಿ ಕಟ್ಟಡಗಳ ಸಮಗ್ರ ಮಾಹಿತಿ ಸಿದ್ದಗೊಂಡ ನಂತರ ಹೆಸ್ಕಾಂ ಇಲಾಖೆವತಿಯಿಂದಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸುವ ಬಗ್ಗೆ ಸಂಬಂದ ಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಸೋಲಾರ್ ಅಳವಡಿಸಲು ಮುಂದಿನ ಕ್ರಮ ಕೈಗೊಳ್ಳುವಂತೆ ತಿಳಿಸಿದ ಅವರು, ಈ ಕಾರ್ಯದಲ್ಲಿಎಲ್ಲಾ ಅಧಿಕಾರಿಗಳು ಅಗತ್ಯ ಸಹಕಾರ ನೀಡುವ ಮೂಲಕ ಜಿಲ್ಲೆಯನ್ನು ಮಾದರಿ ಸೋಲಾರ್‌ಜಿಲ್ಲೆಯನ್ನಾಗಿರೂಪಿಸಬೇಕು ಎಂದರು.

ಸೋಲಾರ್ ವಿದ್ಯುತ್‌ಯೋಜನೆಗೆ ಸಂಬಂದಿಸಿದಂತೆ ಜಿಲ್ಲೆಯರೈತರ ಕೃಷಿ ಪಂಪ್ ಸೆಟ್ ಗಳಿಗೆ ಸೋಲಾರ್ ಅಳವಡಿಕೆ ಯೋಜನೆ, ಮಾದರಿ ಸೌರಗ್ರಾಮಯೋಜನೆ, ಪ್ರತಿ ಮನೆಗಳ ಮೇಲೆ ಸೋಲಾರ್ ಅಳವಡಿಸುವ ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ ಗಳ ಕುರಿತಂತೆ ಸಾರ್ವಜನಿಕರಿಗೆ ಹೆಚ್ಚಿನಜಾಗೃತಿ ಮೂಡಿಸುವಂತೆಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ್ ಹಾಲಮ್ಮನವರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಸ್ಟೆಲ್ಲಾ ವರ್ಗಿಸ್, ಹೆಸ್ಕಾಂ ನ ಅಧೀಕ್ಷ ಕಇಂಜಿನಿಯರ್ ದೀಪಕ್‌ಕಾಮತ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೇ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಿರ್ವಹಿಸಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ

ಗದಗ : ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೇ ಜಿಲ್ಲೆಯ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಿರ್ವಹಿಸಬೇಕು. ಪರಿಷ್ಕರಣಾ ಕಾರ್ಯವನ್ನು ಪಾರದರ್ಶಕವಾಗಿ, ವ್ಯವಸ್ಥಿತವಾಗಿ ಜರುಗಿಸಿ ಅಂತಿಮ ಮತದಾರರ ಪಟ್ಟಿಯನ್ನು ತಯಾರಿಕೆಗೆ ಕ್ರಮ ವಹಿಸಲು ಜಿಲ್ಲಾ ಉಸ್ತುವಾರಿ ಕಾಯದರ್ಶಿ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ರಮಣದೀಪ ಚೌಧರಿ ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪರಿಶೀಲನೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸ್ವೀಕೃತವಾದಂತಹ ಅರ್ಜಿಗಳಲ್ಲಿನ ಮರಣ ಹೊಂದಿದವರ, ಹೆಸರುಗಳ ತಿದ್ದುಪಡಿ, ವರ್ಗಾವಣೆಗೆ ಸಂಬಂಧಿಸಿದಂತೆ ಸಂಬಂಧಿತ ಅಧಿಕಾರಿಗಳು ಪರಿಶೀಲನೆ ನಡೆಸಿ ಅನುಮೋದನೆ ನೀಡಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಕುರಿತಂತೆ ಸಾರ್ವಜನಿಕರಿಂದ ಸ್ವೀಕೃತವಾದ ಅರ್ಜಿಗಳನ್ನು ವಿಳಂಬಕ್ಕೆ ಆಸ್ಪದ ನೀಡದೇ ಜಾಗರೂಕತೆಯಿಂದ ವಿಲೇವಾರಿ ಮಾಡಲು ತಿಳಿಸಿದರು.

ಮತದಾರರ ಪಟ್ಟಿಯಿಂದ ಕೈ ಬಿಡುವ ಸಂದರ್ಭದಲ್ಲಿ ಸಂಬಂಧಿಸಿದ ಅಧಿಕಾರಿಗಳು ಖುದ್ದಾಗಿ ಪರಿಶೀಲಿಸಿ ಕ್ರಮ ಜರುಗಿಸಬೇಕು. ಜಿಲ್ಲೆಯಲ್ಲಿ ಯುವ ಮತದಾರರನ್ನು ಹೆಚ್ಚಿನ ಸಂಖ್ಯೆಯಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸುವ ಕಾರ್ಯವಾಗಬೇಕು. ಜಿಲ್ಲೆಯಲ್ಲಿನ ವಿಕಲಚೇತನ ಮತದಾರರು, ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಫಾರ್ಮ ನಂ. 6, ಫಾರ್ಮ ನಂ. 7, ಜಿಲ್ಲೆಯಲ್ಲಿನ ಮತಗಟ್ಟೆಗಳ ವಿವರ ಪಡೆದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಪರಿಷ್ಕರಣಾ ಕಾರ್ಯದಲ್ಲಿ ಜವಾಬ್ದಾರಿಯಿಂದ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಬಿ.ಎಲ್.ಓಗಳ ಸಭೆ ಜರುಗಿಸಬೇಕೆಂದರು.

ಮತದಾರರ ಪಟ್ಟಿಯಿಂದ ವಿವಿಧ ಕಾರಣಗಳಿಂದ ಹೆಸರುಗಳನ್ನು ತೆಗೆದು ಹಾಕುವ ಪ್ರಕ್ರಿಯೆ ಕುರಿತು ಸಂಬಂಧಿತ ಅಧಿಕಾರಿಗಳು ಪುನರ್ ಪರಿಶೀಲನೆ ಕೈಗೊಂಡು ಪರಿಷ್ಕರಣೆ ಕಾರ್ಯದಲ್ಲಿ ಯಾವುದೇ ಲೋಪದೋಷಗಳಿಲ್ಲದಂತೆ ವ್ಯವಸ್ಥಿತವಾಗಿ ಜರುಗಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ನಿರ್ದೇಶನ ನೀಡಿದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಮಾತನಾಡಿ ವಿವಿಧ ಕಾರಣಗಳಿಂದ ವಲಸೆ ಹೋಗಿರುವ , ನಿಧನ ಹೊಂದಿರುವ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕುವ ಪ್ರಕ್ರಿಯೆಯಲ್ಲಿ ಸಂಬಂಧಿತ ಅಧಿಕಾರಿಗಳು ಹೆಚ್ಚಿನ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕು. ಈಗಾಗಲೇ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಮನೆ ಮನೆ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದೆ. ಜಿಲ್ಲೆಯಲ್ಲಿ 29-10-2024 ರವರೆಗೆ ಕರಡು ಮತದಾರರ ಪಟ್ಟಿಯ ಪ್ರಕಾರ 2,98,283 ಮತದಾರರಿದ್ದಾರೆ. ಆ ಪೈಕಿ 4,47,418 ಪುರುಷ ಮತದಾರರು, 4,50,865 ಮಹಿಳಾ ಮತದಾರರಿರುತ್ತಾರೆ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು ಫಾರ್ಮ ನಂ.6, ಫಾರ್ಮ ನಂ. 7, ಫಾರ್ಮ ನಂ. 8 ಕುರಿತು ಮಾಹಿತಿ ನೀಡಿದರು. ಕರಡು ಮತದಾರರ ಯಾದಿಗಳನ್ನು ಈಗಾಗಲೇ ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ www.ceokarnataka.kar.nic.in ನೇದ್ದರಲ್ಲಿ ಪ್ರಕಟಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಮಾನವೀಯ ಅಂತಃಕರಣದ ಪ್ರತೀಕವಾಗಿದ್ದರು ಡಾ.ಎಂ.ಎಂ. ಕಲಬುರ್ಗಿ: ನಾಡೋಜ ಗೊ. ರು. ಚನ್ನಬಸಪ್ಪ

ಧಾರವಾಡ : ಕಲಬುರ್ಗಿ ಅವರ ಶ್ರೇಷ್ಠತೆ ಇರುವುದು ಕೇವಲ ಅವರು ಹಿರಿಯ ಸಂಶೋಧಕರು ಆಗಿದ್ದರು ಎಂಬುವುದಕ್ಕಲ್ಲ; ಅವರು ಸೃಜನಶೀಲ ಬರಹಗಾರರಾಗಿದ್ದರು ಎಂಬ ಕಾರಣಕ್ಕೂ ಅಲ್ಲ; ಅದಕ್ಕಿಂತ ಅವರಲ್ಲಿದ್ದ ಮಾನವೀಯ ಅಂಥಃಕರಣ ಎಂಬುದು ಅವರ ಶ್ರೇಷ್ಠತೆಯನ್ನು ಎತ್ತಿ ತೋರಿಸುತ್ತದೆ. ನಾವು ಮಾಡುವಂತಹ ಕೆಲಸದಲ್ಲಿ ನಿಷ್ಠೆ ಇಲ್ಲದಿದ್ದರೆ ನಮ್ಮ ಬದುಕು ಶೃತಿ ಕೆಟ್ಟ ಸಂಗೀತವಾಗುತ್ತದೆ ಎಂದು ಹೇಳುತ್ತಿದ್ದರು. ಸಂಗೀತ ಮತ್ತು ಅಧ್ಯಯನದಲ್ಲಿ ಯಾವುದೇ ರೀತಿಯ ಅಡೆತಡೆಗಳು ಬರದಂತೆ ಎಚ್ಚರ ವಹಿಸಿದ ವ್ಯಕ್ತಿ ನಮ್ಮ ಕಲಬುರ್ಗಿಯವರು ಎಂದು ನಾಡೋಜ ಗೊ.ರು.ಚನ್ನಬಸಪ್ಪ ಅವರು ಹೇಳಿದರು.



ಅವರು ಇಂದು ಡಾ.ಎಂ.ಎಂ.ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ವತಿಯಿಂದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾದ ಡಾ.ಎಂ.ಎಂ.ಕಲಬುರ್ಗಿ ಅವರ 86 ನೇ ಜನ್ಮ ದಿನಾಚರಣೆ, ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮತ್ತು ಗ್ರಂಥ ಬಿಡುಗಡೆ ಕಾರ್ಯಕ್ರಮದ ಅಂಗವಾಗಿ ಡಾ.ಎಂ.ಎಂ.ಕಲಬುರ್ಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಕಲಬುರ್ಗಿ ಅವರು ಯಾವುದೇ ಕೊರತೆ, ಹಸಿವು, ನಿದ್ದೆಗಳ ಹಂಗಿಲ್ಲದೆ ಕೆಲಸ ಮಾಡುವ ವ್ಯಕ್ತಿ ಆಗಿದ್ದರು. ಸಾಮಾನ್ಯವಾಗಿ ನಾವು ಸಮಗ್ರ ಎಂಬ ಪದವನ್ನು ಬಳಸುತ್ತೇವೆ. ಸಮಗ್ರ ಅಂದರೆ ಪೂರ್ಣವಾಗಿದ್ದು, ಒಟ್ಟಾಗಿರುವುದು ಎಂಬ ಅರ್ಥ ಇದೆ. ಲೋಕವ್ಯವಹಾರದಲ್ಲಿ ಸಮಗ್ರ ನೋಟ, ಸಮಗ್ರ ವರದಿ, ಸಮಗ್ರ ವ್ಯಕ್ತಿತ್ವ ಎಂಬ ಇಂತಹ ಪದಗಳನ್ನು ಬಳಸುತ್ತೇವೆ. ವ್ಯಕ್ತಿಗತವಾಗಿ ಅನ್ವಯಿಸುವುದಾದರೆ ಅದು ನಮ್ಮ ನೆಚ್ಚಿನ ಸಾಹಿತಿಗಳಾದ ಡಾ.ಎಂ.ಎಂ ಕಲಬುರ್ಗಿ ಅವರಿಗೆ ಅನ್ವಯಿಸುತ್ತದೆ ಎಂದರು.

ಗ್ರಂಥ ಬಿಡುಗಡೆ ಮಾಡಿ ಮಾತನಾಡಿದ ಅವರು ಕಲಬುರ್ಗಿ ಅವರ ಸಮಗ್ರ ಲೇಖನಗಳು ಪ್ರಕಟವಾಗಬೇಕು. ಸರಕಾರ ಕಲಬುರ್ಗಿ ಟ್ರಸ್ಟ್ ಸ್ಥಾಪಿಸಿದೆ, ಅವರ ಮನಸ್ಸಿನಲ್ಲಿ ಏನು ಇತ್ತೋ ಅದೆಲ್ಲಾ ಇಂದು ನೆರವೇರುತ್ತಿದೆ. ಕಲಬುರ್ಗಿ ಅವರು ತಮ್ಮ ಸಾಧನೆ, ಅವರು ನಡೆದು ಬಂದ ಬದುಕು, ಇದಾವುದರ ಬಗ್ಗೆಯೂ ಸಹ ಬರೆಯಲಿಲ್ಲ. ಅವರು ಸಂಶೋಧನೆ ಸ್ತರಗಳ ಬಗ್ಗೆ ಬರೆದರು. ಮುಂದೆ ಬರುವಂತಹ ವಿದ್ಯಾರ್ಥಿಲೋಕಕ್ಕೆ ತಿಳುವಳಿಕೆ ಉಂಟಾಗಬೇಕು. ಸಂಶೋಧನೆ ಅಂದರೆ ಏನು?, ಸಂಶೋಧನೆಯ ಬಗ್ಗೆ ಯಾಕೆ ಆಸಕ್ತಿಯನ್ನು ಹೊಂದಬೇಕು, ಸಂಶೋಧನೆಯ ಸ್ವರೂಪ ಯಾವುದು ಎಂಬುದನ್ನು ತಿಳಿಸಿಕೊಡುವುದು ಪ್ರಾಮಾಣಿಕ ಪ್ರಯತ್ನವನ್ನು ಅವರು ಮಾಡಿದರು.

ಡಾ.ಎಂ.ಎಂ.ಕಲಬುರ್ಗಿ ವಚನ ಸಂಗೀತ ಪ್ರಶಸ್ತಿ ಪುರಸ್ಕೃತ ಡಾ. ಶರಣಬಸಪ್ಪ ಮೇಡೆದಾರ ಅವರು ಮಾತನಾಡಿ, ಡಾ.ಎಂ.ಎಂ.ಕಲಬುರ್ಗಿ ಹೆಸರಿನ ಪ್ರಶಸ್ತಿ ಪಡೆದಿರುವುದಾಗಿ ತುಂಬಾ ಸಂತಸವಾಗುತ್ತಿದೆ. ಮುಂದಿನ ದಿನಗಳಲ್ಲಿ ಇನ್ನು ಹೆಚ್ಚು ಹೆಚ್ಚು ಶರಣರ ವಚನಗಳು ಮತ್ತು ಸಾಹಿತ್ಯವನ್ನು ಉತ್ತಮವಾಗಿ ನಿಮ್ಮ ಮುಂದೆ ಹಾಡುತ್ತೇನೆ. ಸಾಹಿತ್ಯವನ್ನು ವಿದ್ಯಾರ್ಥಿಗಳಿಗೆ ಸ್ವತಃ ನಾನೇ ಬರೆದು ಕಲಿಸುತ್ತೇನೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ. ಎಚ್. ಚನ್ನೂರ, ಡಾ. ಎಂ.ಎಂ.ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ಅಧ್ಯಕ್ಷ ವೀರಣ್ಣ ರಾಜೂರ, ಉಮಾದೇವಿ ಎಂ. ಕಲಬುರ್ಗಿ ಉಪಸ್ಥಿತರಿದ್ದರು.

ಡಾ. ಎಂ ಎಂ ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಸದಸ್ಯ ಶಶಿಧರ ತೊಡಕರ ಅವರು ಅತಿಥಿ ಪರಿಚಯ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ಡಾ.ಈರಣ್ಣ ಇಂಜಗನೇರಿ ಅವರು ಕಾರ್ಯಕ್ರಮ ನಿರೂಪಿಸಿದರು. ಡಾ. ಎಂ. ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ಸದಸ್ಯ ಡಾ. ಬಾಳಣ್ಣ ಶೀಗಿಹಳ್ಳಿ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಹಿರಿಯರು, ಗಣ್ಯವ್ಯಕ್ತಿಗಳು, ವಿಧ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ದೇಶದ ನಾಗರಿಕಗೆ ಸಂವಿಧಾನವೇ ದೊಡ್ಡ ಬಲ



ರಬಕವಿ–ಬನಹಟ್ಟಿ, : ಭಾರತೀಯ ನಾಗರಿಕರಿಗೆ ಸಂವಿಧಾನವೇ ದೊಡ್ಡ ಬಲವಾಗಿದೆ. ನಮ್ಮೆಲ್ಲರನ್ನು ರಕ್ಷಿಸುವಂತಹ ಬಹುದೊಡ್ಡ ಕಾನೂನು ಅಂ–ದರೆ ಸಂವಿಧಾನ ನಮ್ಮ ರಾಷ್ಟ್ರ ಧ್ವಜ, ಗೀತೆ, ಮತ್ತು ಸಂವಿಧಾನವನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದು ಬನಹಟ್ಟಿಯ ಕಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶೆ ಶುಷ್ಮ ಟಿ.ಸಿ. ತಿಳಿಸಿದರು.

ಅವರು ಮಂಗಳವಾರ ಇಲ್ಲಿನ ತಮ್ಮಣ್ಣಪ್ಪ ಚಿಕ್ಕೋಡಿ ಕಾಲೇಜಿನಲ್ಲಿ ಬನಹಟ್ಟಿ ಕಾನೂನು ಸೇವಾ ಸಮಿತಿಯವರು ಹಮ್ಮಿಕೊಂಡ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದೇಶದ ಏಕತೆ ಹಾಗೂ ಅಖಂಡತೆಯನ್ನು ಎತ್ತಿ ಹಿಡಿಯುವ ಜೊತೆಗೆ ಆದ–ರ್ಶ ಮತ್ತು ಸಾರ್ವಭೌತವನ್ನು , ಧ್ಯೇಯಗಳನ್ನು ಗೌರವಿಸಬೇಕು. ದೇಶದ ರಕ್ಷಣೆಗಾಗಿ ಸದಾ ಸಿದ್ಧರಾಗಿರಬೇಕು ಎಂದು ಶುಷ್ಮ ಟಿ.ಸಿ. ತಿಳಿಸಿದರು.

ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕ ಮನೋಹರ ಶಿರಹಟ್ಟಿ ಮಾತನಾಡಿ, ದೇಶದ ಕಟ್ಟ ಕಡೆಯ ವ್ಯಕ್ತಿಗೂ ಸಂವಿಧಾನದ ಮೂಲ ಸೌಲಭ್ಯಗಳು ದೊರೆಯಬೇಕು. ಸಂವಿಧಾನ ಮೂಲಕ ಪ್ರತಿಯೊಬ್ಬರು ತಮ್ಮ ವ್ಯಕ್ತಿತ್ವವನ್ನು ನಿರ್ಮಾಣ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಕೀಲಅರ್ಜುನ ಜಿಡ್ಡಿಮನಿ, ಪ್ರಾಚಾರ್ಯ ಜಿ.ಆರ್. ಜುನ್ನಾಯ್ಕರ್ ಮಾತನಾಡಿದರು. ವೇದಿಕೆಯ ಮೇಲೆ ಸಹಾಯಕ ಸರ್ಕಾರಿ ಅಭಿಯೋಜಕಿ ಭವ್ಯ ಆರ್, ಹಿರಿಯ ವಕೀಲ ಎಂ.ಜಿ.ಕೆರೂರ, ವಕೀಲರ ಸಂಘದ ಅಧ್ಯಕ್ಷ ಶ್ರೀಕಾಂತ ಕುಲಕರ್ಣಿ, ಕಾರ್ಯದರ್ಶಿ ಎಸ್.ಜಿ. ಸಲಬನ್ನವರ, ರವಿ ಸಂಪಗಾಂವಿ, ವಿಜಯಲಕ್ಷ್ಮಿ ಕೌಲಾಪುರ, ಅಶ್ವಿನಿ ಹಾರೂಗೇರಿ, ಎಎಸ್ಐ ಬಾಬಾನಗರ ಇದ್ದರು. ಸ್ವಾತಿ ಕುರುಪೆ ಪ್ರಾರ್ಥಿಸಿದರು. ಪ್ರಕಾಶ ಕೆಂಗನಾಳ ಸ್ವಾಗತಿಸಿದರು. ವಿಶ್ವಜ ಕಾಡದೇವರ ನಿರೂಪಿಸಿದರು. ಸುನಂದಾ ಭಜಂತ್ರಿ ವಂದಿಸಿದರು.

ಗೀತಾ ಸಜ್ಜನ, ರೇಶ್ಮಾ ಗಜಾಕೋಶ, ಪಿ.ಜಿ.ಪಾಟೀಲ, ರವೀಂದ್ರ ಸಂಪಗಾವ, ಗೌಡಪ್ಪನವರ, ಗಾಯಕವಾಡ ಸೇರಿದಂತೆ ಅನೇಕರು ಇದ್ದರು.

# ತಂಬಾಕು ಉತ್ಪನ್ನ ಮಾರಾಟದ ಅಂಗಡಿಗಳ ಮೇಲೆ ದಾಳಿ




ಹಾವೇರಿ: : ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ತಂಬಾಕು ಮುಕ್ತ ಯುವ ಅಭಿಯಾನದ ಅಂಗವಾಗಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ರಾಣೇಬೆನ್ನೂರ ನಗರದ ವಿವಿಧ ಧೂಮಪಾನ ಅಡ್ಡಾಗಳು ಹಾಗೂ ಪಾನ್‌ಶಾಪ್‌ಗಳ ಅಂಗಡಿಗಳ ಮೇಲೆ ದಾಳಿ ನಡೆಸಿ ದಂಡ ವಸೂಲಿ ಮಾಡಿದೆ.

ಪರವಾನಿಗೆ ಪಡೆಯದೇ ತಂಬಾಕು ಮಾರಾಟ ಮಾಡುತ್ತಿದ್ದ ಅಂಗಡಿ ಮಾಲೀಕರಿಗೆ ಹಾಗೂ ಕಾಯ್ದೆ ವಿರುದ್ಧವಾಗಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವ, ನೇರ–ಪರೋಕ್ಷವಾಗಿ ತಂಬಾಕು ಜಾಹೀರಾತು ಪ್ರದರ್ಶನ, ಶಾಲಾ–ಕಾಲೇಜು ಆವರಣದ 100 ಮೀಟರ್ ಅಂತರದೊಳಗೆ ತಂಬಾಕು ಉತ್ಪನ್ನಗಳನ್ನು ಮಾರಾಟಮಾಡುತ್ತಿರುವ ಅಂಗಡಿ, ಬೇಕರಿ, ಹೋಟೆಲ್ ಮಾಲೀಕರಿಗೆ ನೋಟೀಸ್ ಜಾರಿ ಮಾಡಿ, ತಂಬಾಕು ನಿಯಂತ್ರಣ ಕಾಯ್ದೆ–2003ರ ಕಲಂ–6ಬಿ ಅಡಿಯಲ್ಲಿ 09 ಪ್ರಕರಣಗಳಿಂದ ದಂಡ ವಸೂಲಿ ಮಾಡಲಾಗಿದೆ. ಪರೋಕ್ಷವಾಗಿ ತಂಬಾಕು ಜಾಹೀರಾತು ಮಾಡುವ ಐದು ಫಲಕಗಳನ್ನು ತೆರವುಗೊಳಿಸಲಾಗಿದೆ.

ಈ ತನಿಖಾ ದಾಳಿ ತಂಡದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಡಾ.ಸಂತೋಷ ದಡ್ಡಿ, ಸಮಾಜ ಕಾರ್ಯಕರ್ತ ದಾದಾಪೀರ ಹುಲಿಕಟ್ಟಿ, ಆಹಾರ ಸುರಕ್ಷತಾ ಅಧಿಕಾರಿ ಎಸ್.ಸಿ.ಕೋರಿ, ಹಿರಿಯ ಆರೋಗ್ಯ ನಿರೀಕ್ಷಕ ನಾಗರಾಜ ಕುಡಪಲಿ ಇತರರು ಉಪಸ್ಥಿತರಿದ್ದರು.

# ಹಣಕಾಸಿನ ಹೂಡಿಕೆಯಿಂದ ದೇಶದ ಆರ್ಥಿಕ ಅಭಿವೃದ್ಧಿ



ರಬಕವಿ–ಬನಹಟ್ಟಿ : ಇಂದಿನ ದಿನಗಳಲ್ಲಿ ಹಣಕಾಸಿನ ಹೂಡಿಕೆಗಳಲ್ಲಿ ಜಾಗೃತಿ ಬಹಳಷ್ಟು ಮುಖ್ಯವಾಗಿದೆ. ನಮ್ಮ ದೇಶದ ಜನರು ಕೇವಲ ಸಾಂಪ್ರದಾಯಿಕ ಹಣಕಾಸಿನ ಹೂಡಿಕೆಯಲ್ಲಿ ಮಾತ್ರ ತೊಡಗಿದ್ದಾರೆ. ವಿದ್ಯಾವಂತರಲ್ಲಿಯೂ ಕೂಡಾ ಆದ–ುನಿಕ ಹಣಕಾಸಿನ ಹೂಡಿಕೆಯ ಜಾಗೃತಿ ಅಗತ್ಯವಾಗಿದೆ ಎಂದು ಜಮಖಂಡಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ ಎಸ್.ಪಿ. ಸಜ್ಜನ ತಿಳಿಸಿದರು.

ಇಲ್ಲಿನ ಎಸ್ ಟಿ ಸಿ ಕಾಲೇಜಿನಲ್ಲಿ ನಡೆದ ಲೈವ ಟ್ರೇಡಿಂಗ್ ಇನ್ ಸ್ಟಾಕ್ ಮಾರ್ಕೆಟ್ ಕುರಿತು ವಿಷೇಶ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಾಗತಿಕವಾಗಿ ಅಭಿವೃದ್ಧಿ ಹೊಂದುತ್ತಿರುವ ಕಂಪನಿಗಳಲ್ಲಿ ಹೂಡಿಕೆಯನ್ನು ಮಾಡಬೇಕು. ಸೂಕ್ತವಾದ ಕಂಪನಿಗಳಲ್ಲಿ ಹೂಡಿಕೆಯನ್ನು ಮಾಡುವುದರಿಂದ ದೇಶವು ಆರ್ಥಿಕವಾಗಿ ಅಭಿವೃದ್ಧಿ ಹೊಂದುತ್ತದೆ. ದೇಶದ ಆರ್ಥಿಕ ಅಭಿವೃದ್ಧಿಯಿಂದ ಉದ್ದಿಮೆಗಳು ಹೆಚ್ಚುತ್ತವೆ. ಇದರಿಂದ ಉದ್ಯೋಗಗಳು ಹೆಚ್ಚಾಗುತ್ತವೆ. ಉದ್ಯೋಗವಕಾಶಗಳ ಹೆಚ್ಚಳದಿಂದಾಗಿ ದೇಶದ ಜನರ ಜೀವನ ಮಟ್ಟ ಹೆಚ್ಚಾಗುತ್ತದೆ ಎಂದು ಎಸ್.ಪಿ. ಸಜ್ಜನ ತಿಳಿಸಿದರು.

ಪ್ರಾಚಾರ್ಯ ಜಿ.ಆರ್. ಜುನ್ನಾಯ್ಕರ್ ಮಾತನಾಡಿ, ಕಾಲೇಜುಗಳಲ್ಲಿ ನಡೆಯುವ ವಿಶೇಷ ಉಪನ್ಯಾಸಗಳ ಸದ್ಬಳಕೆಯನ್ನು ವಿದ್ಯಾರ್ಥಿಗಳು ಮಾಡಿಕೊಳ್ಳಬೇಕು. ವಿಶೇಷ ಉಪನ್ಯಾಸಗಳು ನಮ್ಮಲ್ಲಿಯ ಜ್ಞಾನವನ್ನು ಹೆಚ್ಚಿಸುತ್ತವೆ ಎಂದರು.

ವಾಣಿಜ್ಯ ವಿಭಾಗದ ಮುಖ್ಯಸ್ಥೆ ಗೀತಾ ಸಜ್ಜನ, ಐಕ್ಯೂಎಸ್ಸಿ ಸಂಯೋಜಕ ಪ್ರಕಾಶ ಕೆಂಗನಾಳ, ಸುವರ್ಣಾ ವರದಾಯಿ, ಶ್ವೇತಾ ಮಠದ, ವಿಶ್ವಜ ಕಾಡದೇವರ ಸೇರಿದಂತೆ ಅನೇಕರು ಇದ್ದರು.

****

# ಆತ್ಮ ವಿಶ್ವಾಸವೇ ಉತ್ತುಂಗಕ್ಕೇರಿಸುತ್ತದೆ-ಸಿ.ಆರ್.ಸಿ



ರಬಕವಿ–ಬನಹಟ್ಟಿ : ಸಾಕಷ್ಟು ವಿದ್ಯಾರ್ಥಿಗಳು ಪರೀಕ್ಷೆ ಎಂದರೆ ಹೆದರುತ್ತಾರೆ, ಹೆದರಿಕೆಯಿಂದ ಏಕಾಗ್ರತೆ ಹಾಳಾಗುವುದಲ್ಲದೆ ನೆನಪಿನ ಶಕ್ತಿ ಕುಗ್ಗುತ್ತದೆ ಇದಕ್ಕೆ ಪರಿಹಾರವೆಂದರೆ ರಿಜಿಸ್ಟ್ರೆಶನ್, ರಿಕಾರ್ಡಿಂಗ್ ಮತ್ತು ರಿಕಾಲ್ ಮುಖಾಂತರ ಕಲಿಕೆಯ ಪ್ರಕ್ರಿಯೆಯು ಪ್ರಾರಂಭವಾಗುತ್ತದೆ ಎಂದು ಪದ್ಮಶ್ರೀ ಪುರಸ್ಕೃತ ಡಾ. ಸಿ ಆರ್. ಚಂದ್ರಶೇಖರ ಹೇಳಿದರು.

ಯಲ್ಲಟ್ಟಿಯ ಕೊಣ್ಣೂರ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ 'ಪರೀಕ್ಷಾ ಭಯ ಬಿಡಿ ಯಶಸ್ಸನ್ನು ನಿಮ್ಮದಾಗಿಸಿಕೊಳ್ಳಿ'ಚಎಂಬ ಉಪನ್ಯಾಸದಲ್ಲಿ ಹೇಳಿದರು. ಅತಿಯಾದ ಭಾವೋದ್ವೇಗ, ನಾಟಕೀಯತೆ ಎಲ್ಲರ ಗಮನವನ್ನು ತನ್ನೆಡೆಗೆ ಸೆಳೆಯುವ ಪ್ರಯತ್ನ ಮಾಡಬೇಡಿ. ಶ್ರಮಪಡಲು ತಯಾರಿಲ್ಲದ ಮನಸ್ಸು, ವಿಫಲತೆ, ನಿರಾಶೆ ತೀವ್ರವಾಗಿ ಪರಿತಪ್ಪಿಸುವಂತೆ ಮಾಡುತ್ತದೆ. ಇದರಿಂದ ಹಿಸ್ಟಿಯಾನಿಕ್ ಪರಸನಾಲಿಟಿ ಡಿಸಾರ್ಡೆಕ್ ಎಂಬ ಉನ್ಮಾದ ವ್ಯಕ್ತಿತ್ವಕ್ಕೆ ಒಳಗಾಗುತ್ತಾರೆ. ಶಾಸ್ತ್ರಜ್ಞಾನಕ್ಕಿಂತಲು ಅಂತರೀಕ್ಷಣೆಯನ್ನು ಬೆಳಸಿಕೊಳ್ಳಿ ಎಂದರು.

ಕಷ್ಟ–ನಷ್ಟ, ಸೋಲು, ನಿರಾಶೆಯ ಸನ್ನಿವೇಶಗಳಲ್ಲಿ ನಕಾರಾತ್ಮಕ ಚಿಂತನೆಯನ್ನು ಬಿಟ್ಟು ಸಕಾರಾತ್ಮಕವಾಗಿ ಆಲೋಚಿಸಿ. ನಿಮ್ಮ ಅಗತ್ಯ ಆಕಾಂಕ್ಷೆ, ಸ್ವಾಭಿಮಾನ ಬೆಳೆಸಿಕೊಳ್ಳಿ. ನಕಾರಾತ್ಮಕ ಭಾವನೆಗಳು ದೈಹಿಕವಾಗಿ, ಮಾನಸಿಕವಾಗಿ ಆಯಾಸವನ್ನುಂಟು ಮಾಡುತ್ತದೆ. ಹಾಗಾಗಿ ಇವುಗಳಿಂದ ದೂರವಿರಬೇಕೆಂದು ಮಕ್ಕಳ ಸಾಹಿತಿ ಜಯವಂತ ಕಾಡದೇವರ ಹೇಳಿದರು.

ಸಮಾರಂಭದಲ್ಲಿ ಆಡಳಿತಾಧಿಕಾರಿ ಶೀತಲ್ ಕೊಣ್ಣೂರ, ಉಪಪ್ರಾಚಾರ್ಯ ಶಿವಾನಂದ ಕಂದಗಲ್, ಹಿರಿಯ ಸಾಹಿತಿ ಶಿವಾನಂದ ದಾಸ್ಯಾಳ ಸೇರಿದಂತೆ ಅನೇಕರಿದ್ದರು.

# ಅಷ್ಟಮ ನಂದೀಶ ಕ್ಷೇತ್ರದಲ್ಲಿ ಸಮಾಧಿಸ್ಥ ಶ್ರೀ 108 ಜ್ಞಾನೇಶ್ವರ ಮುನಿ ಮಹಾರಾಜರ ವಿನಯಾಂಜಲಿ ಕಾರ್ಯಕ್ರಮ



ಬೈಲಹೊಂಗಲ: ತಾಲೂಕಿನ ದೇವಲಾಪೂರ ಗ್ರಾಮದ ಅಷ್ಟಮ ನಂದೀಶ ಕ್ಷೇತ್ರದಲ್ಲಿ ಸಮಾಧಿಸ್ಥ ಶ್ರೀ 108 ಜ್ಞಾನೇಶ್ವರ ಮುನಿ ಮಹಾರಾಜರ ವಿನಯಾಂಜಲಿ ಕಾರ್ಯಕ್ರಮ ನೂರಾರು ಸದ್ಭಕ್ತರಿಂದ ಶಾಸ್ತ್ರೋಸ್ತ್ರವಾಗಿ ಜರುಗಿತು. ಗಂಧೋದಕದ ಮೂಲಕ ಅಸ್ತಿಯನ್ನು ಶುದ್ದಗೊಳಿಸಿ, ತಾಮ್ರದ ತಪೆಲಿಯಲ್ಲಿ ಸಂಗ್ರಹಿಸಿಕೊಂಡು ಪೂಜೆಗೈದು ಪಾದುಕೆ ಸ್ಥಾಪಿಸುವ ಸ್ಥಳದಲ್ಲಿ ಪ್ರತಿಷ್ಠಾಪಿಸಲಾಯಿತು. ಗರಗ ಗ್ರಾಮಸ್ಥರು ಜಯತೀರ್ಥ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಪಾದುಕೆ ಸ್ಥಾಪಿಸಲು ಅಸ್ತಿಯನ್ನು ಪಡೆದುಕೊಂಡರು.

ವಿನಯಾಂಜಲಿ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಪಟ್ಟಾಚಾರ್ಯ ಆಚ–ಾರ್ಯ ಶ್ರೀ 108 ವಿಮಲೇಶ್ವರ ಮುನಿ ಮಹಾರಾಜರು ಮಾತನಾಡಿ, ಜ್ಞಾನೇಶ್ವರ ಮುನಿ ಮಹಾರಾಜರು, ಯಮಸಲ್ಲೇಖನ ವೃತಧಾರಣೆಯನ್ನುಗೈದು ನ.20ರಂದು ಅತ್ಯುತ್ತಮ ಸಮಾಧಿಸ್ಥರಾದರು. ಮಹಾರಾಜರಿಗೆ ಅಂತಿಮ ಸಮೋಸ್ತು ಸಲ್ಲಿಸುವ ಕಾರ್ಯಕ್ರಮವನ್ನು ಶಾಸ್ತ್ರೋಸ್ತ್ರವಾಗಿ ನೆರವೇರಿಸಲಾಯಿತು ಎಂದರು.

ಅಪಾರ ಭಕ್ತ ಸಮೂಹ ಹೊಂದಿದ್ದ ಮುನಿಗಳು ದೇವಲಾಪೂರ ಗ್ರಾಮದಲ್ಲಿ ಅಷ್ಟಮ ನಂದೀಶ ಕ್ಷೇತ್ರ, ಜ್ಞಾನತೀರ್ಥ ವಿದ್ಯಾಪೀಠ ಶಿಕ್ಷಣ ಆರಂಭಿಸಿ 300 ಕ್ಕೂ ಹೆಚ್ಚು ಗ್ರಾಮೀಣ ವಿದ್ಯಾರ್ಥಿಗಳು ಶಿಕ್ಷಣ ನೀಡುವ ವ್ಯವಸ್ಥೆ ಕಲ್ಪಿಸಿದ್ದಾರೆ. ಶಿಕ್ಷಣ ಸಂಸ್ಥೆಯಲ್ಲಿ ಲೌಕಿಕ ಶಿಕ್ಷಣದೊಂದಿಗೆ ಧಾರ್ಮಿಕ, ಮೌಲ್ಯ ಶಿಕ್ಷಣ ನೀಡಿದ್ದಾರೆ. ಕುಲಭೂಷಣ ಅಲ್ಪಸಂಖ್ಯಾತರ ಕ್ರೆಡಿಟ್ ಸೊಸೈಟಿ ಸ್ಥಾಪಿಸಿ ಆರ್ಥಿಕ ಸಹಾಯ ಒದಗಿಸಲು ಶ್ರಮಿಸಿದ್ದಾರೆ. ಧಾರವಾಡ, ಬೆಳಗಾವಿ ಜಿಲ್ಲೆಯ ನೂರಕ್ಕೂ ಹೆಚ್ಚು ಗ್ರಾಮಗಳಲ್ಲಿ ಜಿನ ಮಂದಿರಗಳನ್ನು ನಿರ್ಮಿಸಲು ಶ್ರಮಿಸುವ ಜತೆಗೆ ಜನರ ಕಲ್ಯಾಣಕ್ಕೆ ನೆರವಾಗಿದ್ದಾರೆ. ಧಾರವಾಡ ಜಿಲ್ಲೆಯ ಗರಗ ಗ್ರಾಮದಲ್ಲಿ ಜಯಕೀರ್ತಿ ವಿದ್ಯಾಪೀಠ, ಸಹಕಾರಿ ಸಂಘ, ಜಿನ ಮಂದಿರಗಳನ್ನು ಸ್ಥಾಪಿಸಿದ್ದಾರೆ. ಪೂಜ್ಯರು 108 ಸಮೇದ ಶಿಖರಜಿಯ ಯಾತ್ರೆ, 5 ಬಾರಿ ಸಂಘದೊಂದಿಗೆ ಪಾದಯಾತ್ರೆ ಕೈಗೊಂಡಿದ್ದರು. ಜ್ಞಾನೇಶ್ವರ ಮುನಿ ಅವರು ಗರಗ ಗ್ರಾಮದ ಬಡ ಕುಟುಂಬದಲ್ಲಿ ಜನಿಸಿ, ಸ್ವ ಸಾಧನೆಯಿಂದ ತಹಶೀಲ್ದಾರ ಹುದ್ದೆಯ ಮೂಲಕ ಜನಸೇವೆ ಮಾಡಿದ್ದರು. ಅವರ ಸೇವೆ ಸದಾ ನಾಡಿಗೆ ಸ್ಫೂರ್ತಿಯಾಗಿದೆ ಎಂದರು.

ಆರಿಕಾ ಜಿನಿವಾನಿ ಮಾತಾಜೀ ಮಾತನಾಡಿ, ನಿವೃತ್ತಿ ನಂತರ ಮುನಿ ದೀಕ್ಷೆ ಪಡೆದು ಲೋಕ ಕಲ್ಯಾಣಕ್ಕಾಗಿ, ಧರ್ಮ ಜಾಗೃತಿಗಾಗಿ ತಮ್ಮ ಜೀವನವನ್ನೆ ಮುಡುಪಾಗಿಟ್ಟು ಸಮಾಜ ಸುಧಾರಣೆಯಲ್ಲಿ ಮುನಿಗಳು ಮಹತ್ವದ ಪಾತ್ರ ವಹಿಸಿದ್ದರು. ಅವರ ಸನ್ಮಾರ್ಗಗಳು ನಮಗೆಲ್ಲ ಆದ–ರ್ಶವಾಗಿವೆ. ಸಮಾಜದ ಶಾಂತಿಗಾಗಿ ಅವರ ಕೊಡುಗೆ ಅನನ್ಯವಾಗಿವೆ ಎಂದರು.

ಸಂತೋಷ ನಾಗನೂರ, ಉದಯ ಬೆಳಗಾವಿ, ಅಮೃತ ಕುಡಚಿ, ರಾಯಪ್ಪ ಲಗಮನ್ನವರ, ಪಾರ್ಶ್ವನಾಥ ಹಣ್ಣೀಕೇರಿ, ಸಂತೋಷ ಬೆಳಗಾವಿ, ಅನಂತ ಮರೆನ್ನವರ, ಅನೀಲ ಮೆಕಲಮರ್ಡಿ, ಜೀನಪ್ಪ ಮಲ್ಲಾಡಿ, ಅಶೋಕ ಗಾಡದ, ಅನೀಲ ಲಗಮನ್ನವರ, ವಿಜಯ ಬೆಳಗಾವಿ, ಭರಮುಗೌಡ ಪಾಟೀಲ, ರಾಜೇಂದ್ರ ಮುದಕನ್ನವರ ಹಾಗೂ ಗಣ್ಯರು ಮಾತನಾಡಿದರು. ಜಿಲ್ಲೆಯ ಜೈನ್ ಸಮಾಜ ಬಾಂಧವರು, ಮುಖಂಡರು, ಹಿರಿಯರು, ಗಣ್ಯಮಾನ್ಯರು, ದೇವಲಾಪೂರ ಗ್ರಾಮಸ್ಥರು, ನೂರಾರು ಭಕ್ತರು ಇದ್ದರು.

## ಇಂದಿನಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಪುನರ್ ಸಮೀಕ್ಷೆ

**ಹಾವೇರಿ:** ಭಾರತ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ಹಾವೇರಿ ಉಪ ವಿಭಾಗ ವ್ಯಾಪ್ತಿಯ ಹಾವೇರಿ, ರಾಣೇಬೆನ್ನೂರು, ಹಿರೇಕೆರೂರು, ರಟ್ಟಿಹಳ್ಳಿ ಹಾಗೂ ಬ್ಯಾಡಗಿ ತಾಲೂಕಿನಲ್ಲಿ ನ.30ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಪುನರ್ ಸಮೀಕ್ಷೆಕೈಗೊಳ್ಳಲಾಗಿದೆ ಎಂದು ಹಾವೇರಿ ಉಪವಿಭಾಗಾಧಿಕಾರಿ ಚೆನ್ನಪ್ಪ ಅವರು ತಿಳಿಸಿದ್ದಾರೆ.

ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಅಧಿನಿಯಮ–2013ರನ್ವಯ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ವೃತ್ತಿಯನ್ನು ನಿಷೇಧಿಸಲಾಗಿದೆ. ಅದಾಗ್ಯೂ ಅಧಿನಿಯಮದಲ್ಲಿ ನಿಷೇಧಿಸಿರುವ ವೃತ್ತಿಯಲ್ಲಿ ಯಾವುದೇ ವ್ಯಕ್ತಿಯು ಒಣ ಶೌಚಾಲಯಗಳಲ್ಲಿ ಮಲ ಸ್ವಚ್ಛತೆಯ ಕಾರ್ಯದಲ್ಲಿ ತೊಡಗಿದ್ದರೆ ಅಂತವರು ನೇರವಾಗಿ ಶೌಚಾಲಯಗಳಿಂದ ಹಾಗೂ ತೆರೆದ ಚರಂಡಿಗಳಿಂದ ಹ–ರಿದುಬಂದ ಮಲವನ್ನು ಕೈಯಿಂದ ಮುಟ್ಟಿ ಸ್ವಚ್ಚಗೊಳಿಸುವ ಕೆಲಸವನ್ನು ಮಾಡಿತ್ತಿದ್ದರೆ ಅಥವಾ ಒಂದೇ ಗುಂಡಿಯನ್ನು ಹೊಂದಿರುವ ಶೌಚಾಲಯಗಳನ್ನು ಕೈಯಿಂದ ಸ್ವಚ್ಚಗೊಳಿಸುವ ಚಟುವಟಿಕೆಗಳಲ್ಲಿ ತೊಡಗಿದ್ದರೆ ಅಂತವರು ಸಮೀಕ್ಷೆ ನಡೆಯುವ ದಿನಾಂಕಗಳಂದು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯತಿ, ನಗರ, ಪಟ್ಟಣ ಹಾಗೂ ಪುರಸಭೆಗಳ ವ್ಯಾಪ್ತಿಯಲ್ಲಿ ಯಾವುದೇ ವ್ಯಕ್ತಿಯು ಒಣ ಶೌಚಾಲಯಗಳಲ್ಲಿ ಮಲ ಸ್ವಚ್ಛತೆಯ ಕಾರ್ಯದಲ್ಲಿ ತೊಡಗಿದ್ದರೆ ಅಂತವರು ನೇರವಾಗಿ ಶೌಚಾಲಯಗಳಿಂದ ಹಾಗೂ ತೆರೆದ ಚರಂಡಿಗಳಿಂದ ಹ–ರಿದುಬಂದ ಮಲವನ್ನು ಕೈಯಿಂದ ಮುಟ್ಟಿ ಸ್ವಚ್ಚಗೊಳಿಸುವ ಕೆಲಸವನ್ನು ಮಾಡಿತ್ತಿದ್ದರೆ ಅಥವಾ ಒಂದೇ ಗುಂಡಿಯನ್ನು ಹೊಂದಿರುವ ಶೌಚಾಲಯಗಳನ್ನು ಕೈಯಿಂದ ಸ್ವಚ್ಚಗೊಳಿಸುವ ಚಟುವಟಿಕೆಗಳಲ್ಲಿ ತೊಡಗಿದ್ದರೆ, ಗ್ರಾಮ ಪಂಚಾಯತಿ ವ್ಯಾಪ್ತಿಯವರು ಸಂಬಂಧಿಸಿದ ತಾಲೂಕು ಪಂಚಾಯತ್ ಕಾರ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಗೆ ಹಾಗೂ ನಗರ, ಪಟ್ಟಣ ಹಾಗೂ ಪುರಸಭೆಗಳ ವ್ಯಾಪ್ತಿಯವರು ಸಂಬಂಧಿಸಿದ ನಗರಸಭೆ, ಪಟ್ಟಣ ಪಂಚಾಯತಿ ಹಾಗೂ ಪುರಸಭೆ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಹಾವೇರಿ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಹಾವೇರಿ, ರಾಣೇಬೆನ್ನೂರು, ಹಿರೇಕೆರೂರು, ರಟ್ಟಿಹಳ್ಳಿ ಹಾಗೂ ಬ್ಯಾಡಗಿ ತಾಲೂಕುಗಳಲ್ಲಿ 2018–19ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಸಮಿಕ್ಷೆಕೈಗೊಂಡು, ತಾಲೂಕುವಾರು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳನ್ನು ಈಗಾಗಲೇ ಗುರುತಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

ಬಾಗಲಕೋಟೆ: : ಜಿಲ್ಲಾ ಉದ್ಯೋಗ ವಿನಿಯಮ ಕಚೇರಿ ವತಿಯಿಂದ ನವೆಂಬರ 29 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಯಯ ಕಚೇರಿಯಲ್ಲಿ ಉದ್ಯೋಗಕ್ಕಾಗಿ ನೇರ ಸಂದರ್ಶನ ಆಯೋಜಿಸಲಾಗಿದೆ. ನೇರ ಸಂದರ್ಶನದಲ್ಲಿ ಹಲವಾರು ಖಾಸಗಿ ಕಂಪನಿಗಳು ಭಾಗವಹಿಸಿ ಹಲವಾರು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ನೇರ ಸಂದರ್ಶನದಲ್ಲಿ 19 ರಿಂದ 30 ವರ್ಷದೊಳಗಿನ ಎಸ್.ಎಸ್.ಎಲ್.ಸಿ, ಪಿಯುಸಿ ಹಾಗೂ ಯಾವುದೇ ಪದವೀಧರರು ಭಾಗವಹಿಸಬಹುದಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಬಯೋಡೆಟಾ ಮತ್ತು ಮೂಲ ಅಂಕಪಟ್ಟಿಗಳ ಝರಾಕ್ಸ ಪ್ರತಿಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಕಿರಣ ಮಂಡಿ

# ಕನ್ನಡ ಶಾಸ್ತ್ರೀಯ ಭಾಷೆ ಆಗಿದ್ದು -ಬಹುದೊಡ್ಡ ಇತಿಹಾಸ ಪರಂಪರೆ ಹೊಂದಿದೆ



ಬೈಲಹೊಂಗಲ: ಕನ್ನಡ ಶಾಸ್ತ್ರೀಯ ಭಾಷೆ ಆಗಿದ್ದು, ಬಹುದೊಡ್ಡ ಇತಿಹಾಸ ಪರಂಪರೆ ಹೊಂದಿದೆ ಎಂದು ಮಹಾರಾಷ್ಟ್ರದ ಗಣ್ಯರಾದ ಅಜಿಂಕ್ಯ ಅತುಲ ಸಾವೆ ಹಾಗೂ ಬಸವರಾಜ ಮಂಗರುಳೆ ಹೇಳಿದರು.

ಮಹಾರಾಷ್ಟ್ರದ ಔರಂಗಾಬಾದ್‌ದ ಛತ್ರಪತಿ ಸಂಭಾಜಿನಗರದ ಕರ್ನಾಟಕ ಸಂಘದ ಆಶ್ರಯದಲ್ಲಿ ಗೋವಿಂದಭಾಯಿ ಶ್ರಾಫ್ ಲಲಿತಕಲಾ ಅಕಾಡೆಮಿ ಸಭಾಭವನದಲ್ಲಿ ಇತ್ತೀಚೆಗೆ ಏರ್ಪಡಿಸಿದ್ಧ 69ನೇ ಕರ್ನಾಟಕ ರಾಜ್ಯೋತ್ಸವದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು. ನಾವೆಲ್ಲ ಕೆಲವರು ಮಹಾರಾಷ್ಟ್ರದಲ್ಲೆ ಹುಟ್ಟಿ ಬೆಳೆದಿದ್ದೇವೆ. ಕರ್ನಾಟಕದಿಂದಲೂ ಬಂದಿದ್ದೇವೆ. ನಮ್ಮ ಮನೆ ಮನಗಳಲ್ಲಿ ತಾಯಿಗೆ ಇರುವಷ್ಟೆ ಮಹತ್ವ ಕನ್ನಡ ಭಾಷೆಗೆ ಇದೆ. ಕನ್ನಡ ಉಳಿಸಿ ಬೆಳೆಸುವುದು ನಮ್ಮೆಲ್ಲರ ಧ್ಯೇಯ ಆಗಬೇಕೆಂದು ಕರೆ ನೀಡಿದರು. ಸ್ಪಷ್ಟ ಕನ್ನಡದಲ್ಲಿ ಭಾಷಣ ಮಾಡಿದ ಇಬ್ಬರನ್ನು ಸಂಘದಿಂದ ಅಭಿನಂದಿಸಲಾಯಿತು.

ಇದೇ ಸಂದರ್ಭದಲ್ಲಿ ಕಲಬುರಗಿಯ ಶರಣಮ್ಮಾ ಇನಾಮದಾರ (ಜಾನಪದ ಸಾಹಿತ್ಯ), ಚಿಂಚೋಳಿಯ ಶಾಮರಾವ್ ಕುಲಕರ್ಣಿ (ದಾಸ ಸಾಹಿತ್ಯ) ಇವರುಗಳ ಕನ್ನಡ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸಂಘದಿಂದ ರಾಜ್ಯೋತ್ಸವ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸಂಘದ ಉಪಾಧ್ಯಕ್ಷ ಸುಭಾಷ್ ಜಿ. ಅಮಾಣೆ, ಸಹಕಾರ್ಯದರ್ಶಿ ವಿಮಲಾ ಹಬ್ಬು ಅವರು ರಾಜ್ಯೋತ್ಸವ ಕಾರ್‍ಯಕ್ರಮ ಉದ್ಘಾಟಿಸಿದರು. ಪ್ರಹ್ಲಾದ ಕುಲಕರ್ಣಿ ಸ್ವಾಗತ ಗೀತೆ ಹಾಗೂ ಕನ್ನಡದ ಅನೇಕ ಗೀತೆಗಳನ್ನು ಹಾಡಿ, ಜನಮನ ರಂಜಿಸಿದರು. ಶಿವಾ ಉಗಲತ್, ರತನ ನಗರಕರ, ಶಶಿಕಾಂತ ಮರ್ಪಲ್ಲಿಕರ್, ಸಂಧ್ಯಾ ಅಡಸುಳೆ, ಡಾ.ಶಶಿಕಲಾ ಬುಯಿತೇ, ಸವಿತಾ ಸ್ವಾಮಿ, ಗೌರಿ ದೇಸಾಯಿ, ಜ್ಯೋತಿ ಕುರ್ಮುಡೆ, ವೇದಾ ಆಯ್ಲಿ, ಮಹಿ ಕುರುಮೂಡೆ ಸೇ–ರಿದಂತೆ ಅನೇಕ ಕಲಾವಿದರು ಕನ್ನಡದ ಗೀತೆ ಹಾಡಿ ನೃತ್ಯದಲ್ಲಿ ಪಾಲ್ಗೊಂಡು ಮನರಂಜಿಸಿದರು. ತನುಜಾ ಅಡಗಾವಕರ ನಿರೂಪಿಸಿದರು.

ಪ್ರಶಾಂತ ಕುಲಕರ್ಣಿ, ಶ್ರೀದೇವ ಆಯ್ಲಿ, ಬನಶಂಕರಿ ಹಿರೇಮಠ ಸೇರಿದಂತೆ ಕರ್ನಾಟಕ ಸಂಘದ ಸದಸ್ಯರು ಕಾರ್‍ಯಕ್ರಮದ ಯಶಸ್ವಿಗೆ ಶ್ರಮಿಸಿದರು.

## ಸಂವಿಧಾನ ಡಾ.ಬಿ.ಆರ್.ಅಂಬೇಡ್ಕರ ಅವರು ನಮಗೆ ನೀಡಿದ ವರದಾನ –ನ್ಯಾಯಾಧೀಶರಾದ ಕೆ.ಸಿ.ಸದಾನಂದಸ್ವಾಮಿ



**ಹಾವೇರಿ:** ಸಂವಿಧಾನವು ಡಾ.ಬಿ.ಆರ್. ಅಂಬೇಡ್ಕರ್ ಅವರು ನಮಗೆ ನೀಡಿದ ವರದಾನವಾಗಿದೆ. ಸಂವಿಧಾನ ಸಮಾಜದ ಎಲ್ಲ ವರ್ಗದವರನ್ನು ಸಮಾನ ರೀತಿಯಲ್ಲಿ ಕಾಣುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಸಿ.ಸದಾನಂದಸ್ವಾಮಿ ಅವರು ಹೇಳಿದರು.

ನಗರದ ಜಿಲ್ಲಾ ನ್ಯಾಯವಾದಿಗಳ ಸಂಘದ ಸಭಾಭವನದಲ್ಲಿ ಮಂಗಳವಾರ ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ ಹಾಗೂ ಅಭಿಯೋಜನಾ ಇಲಾಖೆ ಸಹಯೋಗದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ, ಸಂವಿಧಾನ ಪೀಠಿಕೆ ಬೋಧಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಸಂವಿಧಾನದಡಿ ಕಾರ್ಯನಿರ್ವವಹಿಸಿದರೆ ಸಮಾಜ ಉನ್ನತ ಮಟ್ಟಕ್ಕೆ ಹೋಗಲು ಸಾಧ್ಯ. ಕಾನೂನಿನ ನೆರವಿನ ಅವಶ್ಯಕತೆ ಇದ್ದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಂಪರ್ಕಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಹಿರಿಯ ನ್ಯಾಯವಾದಿ ವಿ.ಕೆ.ಕುಲಕರ್ಣಿ ಅವರು ಸಂವಿಧಾನ ದಿನಾಚರಣೆ ಕು–ರಿತು ಉಪನ್ಯಾಸ ನೀಡಿದರು. ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಚ್.ಜತ್ತಿ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ನ್ಯಾಯಾಧೀಶರಾದ ಜಿ.ಎಲ್.ಲಕ್ಷ್ಮೀನಾರಾಯಣ, ಎಂ.ಜಿ.ಶಿವಳ್ಳಿ, ನಿಂಗೌಡ ಪಾಟೀಲ, ಪ್ರಕಾಶ ವಿ., ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಬಿ.ಆರ್. ಮುತಾಲಿಕದೇಸಾಯಿ, ನ್ಯಾಯಾಧೀಶರಾದ ರವಿಪ್ರಕಾಶ ಟಿ.ಅವಿನ್, ಬಿಪಿನ್ ಎಚ್. ಎಂ., ಜಿಲ್ಲಾ ನ್ಯಾಯವಾದಿಗಳ ಸಂಘದ ಕಾರ್ಯದರ್ಶಿ ಪಿ.ಎಸ್.ಹೆಬ್ಬಾಳ ಹಾಗೂ ಸರ್ಕಾರಿ ಅಭಿಯೋಜಕ ಸಿದ್ಧಾರೂಢ ಗೆಜ್ಜಿಹಳ್ಳಿ ಅವರು ಉಪಸ್ಥಿತರಿದ್ದರು.

### ಕರ ವಸೂಲಾತಿಯಲ್ಲಿ ದಾಖಲೆ ನಿರ್ಮಾಣ: ವಿಶೇಷ ಆಂದೋಲನ

# ರಾಜ್ಯಕ್ಕೆ ತೃತೀಯ ಸ್ಥಾನ ಪಡೆದ ಬಾಗಲಕೋಟೆ ಜಿ.ಪಂ



ಬಾಗಲಕೋಟೆ: : ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ವಿಶೇಷ ಆಂದೋಲನ ಹಮ್ಮಿಕೊಳ್ಳುವ ಮೂಲಕ ಒಂದೇ ದಿನದಲ್ಲಿ 3.07 ಕೋಟಿ ರೂ.ಗಳ ಕರ ಸಂಗ್ರಹ ಮಾಡುವ ಮೂಲಕ ದಾಖಲೆ ನಿರ್ಮಿಸಿ, ವಸೂಲಾತಿಯಲ್ಲಿ ಬಾಗಲಕೋಟೆ ಜಿಲ್ಲಾ ಪಂಚಾಯತ ರಾಜ್ಯಕ್ಕೆ ಮೂರನೇ ಸ್ಥಾನ ಪಡೆದುಕೊಂಡಿದೆ.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯಾದ್ಯಂತ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ನವೆಂಬರ 25 ರಂದು ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆವರೆಗೆ ವಿಶೇಷ ತೆರಿಗೆ ವಸೂಲಾತಿ ಆಂದೋಲ ಹಮ್ಮಿಕೊಳ್ಳಲಾಗಿತ್ತು. ಅಭಿಯಾನದಲ್ಲಿ ಗ್ರಾ.ಪಂ ಅಧ್ಯಕ್ಷರು, ಉಪಾದ್ಯಕ್ಷರು, ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾ.ಪಂ ಸಿಬ್ಬಂದಿಗಳು ತೆರಿಗೆ ವಸೂಲಾತಿಯಲ್ಲಿ ಪಾಲ್ಗೊಂಡು ದಾಖಲೆ ನಿರ್ಮಿಸುವಲ್ಲಿ ಕಾರಣಿಭೂತರಾಗಿದ್ದಾರೆ.

ಬೀಳಗಿ ತಾಲೂಕಿನ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ 76.82 ಲಕ್ಷ ರೂ. ಗಳಷ್ಟು ಕರ ವಸೂಲಿ ಮಾಡಿದರೆ, ಬಾಗಲಕೋಟೆ ತಾಲೂಕಾ ವ್ಯಾಪ್ತಿಯಲ್ಲಿ 52.65 ಲಕ್ಷ ರೂ, ಮುಧೋಳ ತಾಲೂಕಾ ವ್ಯಾಪ್ತಿಯಲ್ಲಿ 42.12 ಲಕ್ಷ ರೂ, ಬಾದಾಮಿ ತಾಲೂಕಾ ವ್ಯಾಪ್ತಿಯಲ್ಲಿ 37.23 ಲಕ್ಷ ರೂ, ರಬಕವಿ–ಬನಹಟ್ಟಿ ತಾಲೂಕಾ ವ್ಯಾಪ್ತಿಯಲ್ಲಿ 24.49 ಲಕ್ಷ ರೂ, ಹುನಗುಂದ ತಾಲೂಕಾ ವ್ಯಾಪ್ತಿಯಲ್ಲಿ 23.19 ಲಕ್ಷ ರೂ, ಇಳಕಲ್ಲ ತಾಲೂಕಾ ವ್ಯಾಪ್ತಿಯಲ್ಲಿ 18.67 ಲಕ್ಷ ರೂ, ಜಮಖಂಡಿ ತಾಲೂಕಾ ವ್ಯಾಪ್ತಿಯಲ್ಲಿ 17.18 ಲಕ್ಷ ರೂ, ಹಾಗೂ ಗುಳೇದಗುಡ್ಡ ತಾಲೂಕಾ ವ್ಯಾಪ್ತಿಯಲ್ಲಿ 15.13 ಲಕ್ಷ ರೂ.ಗಳು ಸೇರಿ ಒಟ್ಟು 3.07 ಕೋಟಿ ರೂ.ಗಳ ತೆರಿಗೆ ಸಂಗ್ರಹಿಸಿ ಬಾಗಲಕೋಟೆ ಜಿಲ್ಲಾ ಪಂಚಾಯತ ದಾಖಲೆ ನಿರ್ಮಿಸಿದೆ.

ತೆರಿಗೆ ವಸೂಲಾತಿ ಪ್ರಗತಿಯಲ್ಲಿ ಇದೇ ರೀತಿ ಮುಂದಿನ ದಿನಗಳಲ್ಲಿ ಸಹ ಶೇ.100 ರಷ್ಟು ಪ್ರಗತಿ ಸಾಧಿಸಿದರು ಜಿ.ಪಂ ಸಿಇಓ ತಿಳಿಸಿದ್ದಾರೆ. ದಾಖಲೆ ಮಟ್ಟದ ಕರ ವಸೂಲಾತಿಗೆ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಶ್ರಮಿಸಿದವರನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹಾಗೂ ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ ಅಭಿನಂದನೆ ಸಲ್ಲಿಸಿದ್ದಾರೆ.



ಅತವಾಡ ಗ್ರಾಮದ ಸುಬೇದಾರ ಅರ್ಜುನ ಬಾ ಪಾಟೀಲ ಎಂಬ ಸೈನಿಕ ನಿಧನರಾದ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ಸದಸ್ಯ, ಚನ್ನರಾಜ ಹಟ್ಟಿಹೊಳಿ ಸೈನಿಕನ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ಗೌರವ ನಮನ ಸಲ್ಲಿಸಿದರು.

# ಅಮೃತ ಸರೋವರ ದಡದ ಮೇಲೆ ಸಂವಿಧಾನ ದಿನ ಆಚರಣೆ



ಬಾಗಲಕೋಟೆ: : ಬೀಳಗಿ ತಾಲೂಕಿನ ಸುನಗ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಅಮೃತ ಸರೋವರ ದಡದ ಮೇಲೆ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿ.ಪಂ ಸಿಇಓ ಶಶಿಧರ ಕುರೇರ ಮಾತನಾಡಿ ಸಂವಿಧಾನ ದಿನದ ಸ್ಮರಣಾರ್ಥವಾಗಿ ಅಮೃತ ಸರೋವರ ಬಳಕೆದಾರರ ಗುಂಪುಗಳು ಸರ್ಕಾರಿ ಅಧಿಕಾ-ರಿಗಳು ಸೇರಿದಂತೆ ಸ್ಥಳೀಯ ಸಮುದಾಯಗಳ ಭಾಗವಹಿಸುವಿಕೆಯೊಂದಿಗೆ ದೇಶದಾದ್ಯಂತ ಎಲ್ಲ ಅಮೃತ ಸರೋವರ ಸ್ಥಳಗಳಲ್ಲಿ ವಿಶೇಷ ಸಮಾರಂಭವನ್ನು ಆಚರಿಸಲಾಗುತ್ತಿದೆ.

ಜಿಲ್ಲೆಯ ಎಲ್ಲ ಅಮೃತ ಸರೋವರಗಳಲ್ಲಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆಯನ್ನು ಓದುವುದು, ಅದರ ಸಿದ್ದಾಂತವನ್ನು ಎತ್ತಿಹಿಡಿಯುವ ನಮ್ಮ ಬದ್ದತೆಯನ್ನು ದೃಡೀಕರಿಸುವುದು ಆಚರಣೆ ಪ್ರಮುಖ ಅಂಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲಾ ಮಕ್ಕಳಿಗೆ ಹಮ್ಮಿಕೊಂಡ ಪ್ರಬಂಧ ಸ್ಪರ್ಧೆಗಳಲ್ಲಿ ವಿಜೇತರಾದವ-ರಿಗೆ ಬಹುಮಾನವನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ತಾಲೂಕಾ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಪಂಚಾಯತ ಅಭಿವೃದ್ದಿ ಅಧಿಕಾರಿ ಹಾಗೂ ಜಿಲ್ಲಾ ಮತ್ತು ತಾಲೂಕಾ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

****

# ಆಧ್ಯಾತ್ಮ ಪ್ರವಚನದ ಪರಿಕರ ಬಿಡುಗಡೆ



ರಬಕವಿ–ಬನಹಟ್ಟಿ,ನ28: ನಗರದ ಹಿರೇಮಠದಲ್ಲಿ ಡಿ.11 ರಿಂದ 17ವರೆಗೆ ಜರುಗುವ ಶ್ರೀ ಶಾಂತವೀರ ಶಿವಾಚಾರ್ಯರರ 34 ನೇ ಚಿರಲಿಂಗಾಂಗ ಸಾಮರಸ್ಯ ಆಧ್ಯಾತ್ಮ ಪ್ರವಚನ ಹಾಗು ಅಯ್ಯಾಚಾರ ಸಾಮೂಹಿಕ ಲಿಂಗದೀಕ್ಷೆ ಕಾರ್ಯಕ್ರಮದ ಪರಿಕರಗಳನ್ನು ಬಿಡುಗಡೆಗೊಳಿಸಲಾಯಿತು.

ಪ್ರತಿದಿನ ಸಂಜೆ 6:30 ರಿಂದ ಜರುಗುವ ಆಧ್ಯಾತ್ಮಿಕ ಪ್ರವಚನದ ಸಾನಿಧ್ಯವನ್ನು ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ವಹಿಸಲಿದ್ದಾರೆ. ಜಮಖಂಡಿ ಕಲ್ಯಾಣಮಠದ ಗೌ-ರಿಶಂಕರ ಶಿವಾಚಾರ್ಯರ ನೇತೃತ್ವದಲ್ಲಿ ಹಿರೇಮಠದ ಶರಣಬಸವ ಶಿವಾಚಾರ್ಯರು ಅಧ್ಯಕ್ಷತೆ ವಹಿಸಲಿದ್ದಾರೆ. ಬಂಡಿಗಣಿಯ ಅನ್ನದಾನೇಶ್ವರ ಶ್ರೀಗಳ ಸಮ್ಮುಖದಲ್ಲಿ ಜಮಖಂಡಿ ಶಾಸಕ ಸಿದ್ದು ಸವದಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕ ಸಿದ್ದು ಸವದಿ, ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ, ಶೇಖರ ಮಾಲಾಪುರ, ಶ್ರೀಪಾದ ಬಾಣಕಾರ, ಶ್ರೀಶೈಲ ಧಬಾಡಿ, ಮಲ್ಲಿಕಾರ್ಜುನ ತುಂಗಳ ಅತಿಥಿಗಳಾಗಿ ಭಾಗವಹಿಸಿದ್ದಾರೆ.

ಪ್ರತಿ ದಿನ ಜೀವನ ದರ್ಶನ ವಿಷಯದಡಿ ಚಟ್ಟರಕಿಂ-ಡ ಶಂಕ್ರಯ್ಯಾ ಶಾಸ್ತ್ರಿಗಳಿಂದ ಪ್ರವಚನ ನಡೆಯಲಿದೆ.

ಪರಿಕರಗಳ ಬಿಡುಗಡೆ ಸಂದರ್ಭ ಚನ್ನವೀರಪ್ಪ ಹಾದಿಮನಿ, ದಾನಪ್ಪ ಹುಲಜತ್ತಿ, ಸುಭಾಸ ಜಾಡಗೌಡ, ಪಂಡಿತ ಪಟ್ಟಣ, ಪ್ರಶಾಂತ ಕೊಳಕಿ, ಶಿವಕುಮಾರ ಜುಂಜಪ್ಪನವರ, ಗುರಸಿದ್ದಪ್ಪ ಚನಾಳ ಸೇರಿದಂತೆ ಅನೇಕರಿದ್ದರು.

# ವಿಜ್ಞಾನ, ತಂತ್ರಜ್ಞಾನ ಪಾರ್ಕಗೆ ನಯಾನಗರದ ಪಿಎಂಶ್ರೀ ಶಾಲೆಯ ವಿದ್ಯಾರ್ಥಿಗಳ ಭೇಟಿ




ಬೈಲಹೊಂಗಲ–ತಾಲೂಕಿನ ನಯಾನಗರದ ಪಿಎಂಶ್ರೀ ಸರಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ವಿಜ್ಞಾನ ಮತ್ತು ತಂತ್ರಜ್ಞಾನದ ಸಮಗ್ರ ಮಾಹಿತಿ ಪಡೆಯುವುದಕ್ಕಾಗಿ ಹಾವೇರಿ ಜಿಲ್ಲೆಯ ಶಿಗ್ಗಾಂವ ತಾಲೂಕಿನ ತಿಮ್ಮಾಪೂರದಲ್ಲಿರುವ ಎಂ.ಎಸ್.ಸೈನ್ಸ್ ಮತ್ತು ಟೆಕ್ನಾಲಾಜಿ ಪಾರ್ಕ್‌ಗೆ ಗುರುವಾರ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು.

ಸುಮಾರು 68 ಮಕ್ಕಳಿಗೆ ನವೀಕ-ರಿಸಬಹುದಾದ ಶಕ್ತಿಯ ಮೂಲಗಳು, ರೊಬೋಟಿಕ್ಸ್, ಬಾಹ್ಯಾಕಾಶ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ನೂರಕ್ಕೂ ಹೆಚ್ಚು ಮಾದರಿಗಳನ್ನು ಈ ಪಿಎಂಶ್ರೀ ಯೋಜನೆಯ ಹಸಿರು ಶಾಲೆ ಶೀರ್ಷಿಕೆಯಡಿ ಅನುಭವಾತ್ಮಕ ಭೇಟಿ ಕೈಗೊಂಡು ಅನುಭವ ಪಡೆದುಕೊಂಡರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕರು ಉಪಸ್ಥಿತರಿದ್ದರು.

## ಜಿಆರ್‌ಜಿ152 ತಳಿ ತೊಗರಿ ಬೆಳೆ ಮಾಹಿತಿ ನೀಡಲು ಮನವಿ

ಬಸವನಬಾಗೇವಾಡಿ, ನ.27

ತಾಲೂಕಿನಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಲ್ಲಲ್ಲಿ ಜಿಆರ್‌ಜಿ152 ತಳಿ ತೊಗರಿ ಬೆಳೆದ ರೈತರ ಜಮೀನುಗಳಲ್ಲಿ ಹವಾಮಾನ ವೈಪರೀತ್ಯದಿಂದಾಗಿ ಹೂ ಮತ್ತು ಕಾಯಿ ಉದುರುತ್ತಿರುವುದು ಕಂಡುಬಂದಲ್ಲಿ ರೈತ ಬಾಂಧವರು ಬೆಳೆ ವಿಮೆ ನೋಂದಣಿ ಮಾಡಿದ ರಶೀದಿ, ಜಿಪಿ-ಎಸ್ ಪೋಟೋದೊಂದಿಗೆ ಅರ್ಜಿಯನ್ನು ಆಯಾ ರೈತ ಸಂಪರ್ಕ ಕೇಂದ್ರ ಇಲ್ಲವೇ ವಿಮಾ ಸಂಸ್ಥೆಯ ಪ್ರತಿನಿಧಿ ಮೊ.ಸಂಖ್ಯೆ 9632105476 ಸಂಖ್ಯೆ ಸಂಪರ್ಕಿಸಿ ಸಲ್ಲಿಸಬೇಕೆಂದು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಎಂ.ಎಚ್. ಯರಝರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಗಾ ಮಾರುಕಟ್ಟೆ ಕಟ್ಟಡಕ್ಕೆ ಬ್ಯಾನರ್ ಯಾರೂ ಕಟ್ಟದಂತೆ ಅಽಕಾರಿಗಳು ಕ್ರಮವಹಿಸಲು ಆಗ್ರಹ

ಬಸವನಬಾಗೇವಾಡಿ, ನ. 27

ಪಟ್ಟಣದ ಹೃದಯ ಭಾಗದಲ್ಲಿರುವ ಮೆಗಾ ಮಾರುಕಟ್ಟೆ ಕಟ್ಟಡದ ಮುಂಭಾಗ ಹಾಗೂ ಅದರ ಕಂಬಗಳಿಗೆ ಯಾವುದೇ ಬ್ಯಾನರ್‌ಗಳನ್ನು ಕಟ್ಟಬಾರದು ಎಂದು ಜಿಲ್ಲಾಧಿಕಾರಿಗಳು ಪುರಸಭೆ ಅಧಿಕಾರಿಗಳಿಗೆ ಸೂಚಿಸಿದರೂ ಅಧಿಕಾರಿಗಳು ಗಮನ ಹ-ರಿಸುತ್ತಿಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈಚೆಗೆ ಜಿಲ್ಲಾಧಿಕಾರಿಗಳು ಪಟ್ಟಣ-ಕ್ಕೆ ಬಂದಾಗ ಮೆಗಾಮಾರುಕಟ್ಟೆ ಕಟ್ಟಡದ ಮುಂಭಾಗ ಇಲ್ಲವೇ ಅದರ ಕಂಬಗಳಿಗೆ ಯಾರೂ ಬ್ಯಾನರ್ ಅಳವಡಿಸದಂತೆ ಪುರಸಭೆ ಅಧಿಕಾರಿಗಳು ಗಮನ ಹರಿಸಬೇಕು. ಈ ಕು-ರಿತು ಪುರಸಭೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುವದನ್ನು ಕರವೇ ಖಂಡಿಸುತ್ತದೆ. ಮುಂಬರುವ ದಿನಗಳಲ್ಲಿ ಯಾರಾದರೂ ಮೆಗಾಮಾರುಕಟ್ಟೆ ಮುಂಭಾಗ, ಕಂಬಗಳಿಗೆ ಬ್ಯಾನರ್ ಅಳವಡಿಸಿದರೆ ಪುರಸಭೆ ಅಧಿಕಾ-ರಿಗಳ ವಿರುದ್ದ ಕರವೇ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

## ಗ್ರಾಫಿ ತರಬೇತಿ : ಅರ್ಜಿ ಆಹ್ವಾನ

ವಿಜಯಪುರ, : ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಡ್ರೋನ್ ಕ್ಯಾಮರಾ ಫೋಟೋಗ್ರಾಫಿ ಮತ್ತು ವಿಡಿಯೋಗ್ರಾಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ–ಯುವತಿಯ-ರಿಗೆ ತರಬೇತಿ ನೀಡಲಾಗುತ್ತಿದ್ದು, ಆಸಕ್ತ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.


ಪರಿಶಿಷ್ಟ ಪಂಗಡಕ್ಕೆ ಸೇರಿದ ಎಸ್.ಎಸ್.ಎಲ್.ಸಿ. ಉತ್ತೀರ್ಣರಾದ 35 ರಿಂದ 40 ವರ್ಷ ವಯೋಮಾನದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ನಿಗದಿತ ಅರ್ಜಿ ನಮೂನೆ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಕಚೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡ್ರೋನ್ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ : ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಯುವಕ ಯುವತಿಯರಿಗೆ ಡ್ರೋನ್ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ಡಿ.13 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಛೇರಿ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಥವಾ ಸಮಾಜ ಕಲ್ಯಾಣ ಇಲಾಖೆ ಸಹಾಯ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾ-ರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

# ಅರಿಷಡ್ವರ್ಗಗಳನ್ನು ಗೆಲ್ಲುವುದು ಮನುಷ್ಯನ ನಿಜವಾದ ಸಾಧನೆ




ರಬಕವಿ–ಬನಹಟ್ಟಿ,ನ28: ವ್ಯಕ್ತಿಯ ಜೀವಾನುಭವೇ ಕಾವ್ಯವಾಗಿದೆ. ಕಾವ್ಯವನ್ನು ಬರೆಯುವಾಗಅದು ನಮ್ಮ ಸ್ವತ್ತಾಗಿರುತ್ತದೆ. ಬರೆದಾದ ಮೇಲೆ ಅದು ಓದುಗರ ಸ್ವತ್ತಾಗುತ್ತದೆ. ಆಗ ಕಾವ್ಯಕ್ಕೆ ಶಕ್ತಿ ಬರುತ್ತದೆ. ಅರಿಷಡ್ವರ್ಗಗಳನ್ನು ಗೆಲ್ಲುವುದೇ ಮಾನುಷ್ಯ ಜೀವನದ ಬಹುದೊಡ್ಡ ಸಾಧನೆಯಾಗಿದೆ ಎಂದು ಮೂಡಲಗಿ ತಾಲ್ಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಚಿದಾನಂದ ಹೂಗಾರ ತಿಳಿಸಿದರು.

ಅವರು ಈಚೇಗೆ ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕ ಮಹಾದೇವ ಪೋತರಾಜ ಅವರ ಕೃತಿ ಚಂದ್ರನಾಥನ ಚೌಪದಿಗಳು ಲೋಕಾರ್ಪಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪಾರಮಾರ್ಥಿಕ ನೆಲೆಗಟ್ಟಿನಿಂದ ಚೌಪದಿಗಳು ಮೂಡಿ ಬಂದಿವೆ. ದಿನಕರ ದೇಸಾಯಿ ಮತ್ತು ಕೆ.ಸಿ. ಶಿವಪ್ಪನವರು ಸೇರಿದಂತೆ ಅನೇಕರು ಚುಟುಕಗಳನ್ನು ರಚನೆ ಮಾಡಿದ್ದು, ಅಂಥವರು ಹಾಕಿಕೊಟ್ಟ ಮಾರ್ಗದಲ್ಲಿ ಪೋತರಾಜ ಅವರ ಕೃತಿ ಬಹಳಷ್ಟು ಗಮನ ಸೆಳೆಯಲಿದೆ. ಇಂದಿನ ದಿನಗಳಲ್ಲಿ ಪುಸ್ತಕ ಪ್ರಕಟಣೆಗೆ ಗ್ರಂಥ ದಾಸೋಹಿಗಳು ದೊರೆಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಪುಸ್ತಕ ಪ್ರೇಮಿಗಳು ಪುಸ್ತಕಗಳನ್ನು ಕೊಂಡು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಹೂಗಾರ ತಿಳಿಸಿದರು.

ರಬಕವಿ ಬನಹಟ್ಟಿ ತಾಲ್ಲೂಕು ಕಸಾಪ ಅಧ್ಯಕ್ಷ ಮ.ಕೃ, ಮೇಗಾಡಿ ಮಾತನಾಡಿ, ಇಲ್ಲಿಯ ಚೌಪದಿಗಳು ಅರ್ಥಪೂರ್ಣವಾಗಿದ್ದು ಅವು ನಮ್ಮನ್ನು ಚಿಂತನೆಗೆ ಹಚ್ಚುತ್ತವೆ. ಉಪನ್ಯಾಸಕರು ಇಂಥ ಚಟುವಟಿಕೆಗಳಲ್ಲಿ ತೊಡಗಿರುವುದರಿಂದ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗುತ್ತದೆ ಎಂದು ತಿಳಿಸಿದರು.

ಸಮಾಜಶಾಸ್ತ್ರದ ಉಪನ್ಯಾಸಕ ಎಸ್.ಅರ್. ಹಂದಿಗುಂದ, ರಾಯಬಾಗ ಸರ್ಕಾರಿ ಪ್ರಥ-'ಮ ದರ್ಜೆ ಕಾಲೇಜು ಪ್ರಾಧ್ಯಾಪಕ ಎಸ್. ಎಂ. ಐಹೋಳಿ ಪ್ರಕಾಶ ಅಂಬಲಿ, ಕೃತಿಕಾರ ಮಹಾದೇವ ಪೋತರಾಜ ಮಾತನಾಡಿದರು.

ಹಾರೂಗೇರಿಯ ಪ್ರಾಧ್ಯಾಪಕ ಆರ್.ಬಿ. ಕೊಕಟನೂರ ಕಾರ್ಯಕ್ರಮ ಉದ್ಘಾಟಿಸಿದರು. ಕಾಲೇಜು ಪ್ರಾಚಾರ್ಯ ಚೇತನ ಡಾಗಾ ಅಧ್ಯಕ್ಷತೆ ವಹಿಸಿದ್ದರು. ಬನಹಟ್ಟಿಯ ಹಿರೇಮಠದ ಶರಣಬಸವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು.

ಶಾನೂರಕುಮಾರ ಗಾಣಿಗೇರ, ಶಿವಕುಮಾರ ಕೋಡಿಹಾಳ, ಸಿದ್ರಾಮ ದ್ಯಾಗನಟ್ಟಿ, ಸೋಮು ನಿಂಗನೂರ, ವಿನೋಧ ಘಟ್ಟೆ, ಸೇರಿದಂತೆ ಅನೇಕರು ಇದ್ದರು. ಓಂಕಾರ ಯರಗಟ್ಟಿಕರ ಸ್ವಾಗತಿಸಿದರು. ಮಾರುತಿ ನಡಕಟ್ಟಿನ ವಂದಿಸಿದರು. ದಿವ್ಯಾ ರಾಶಿಯವರ ನಿರೂಪಿಸಿದರು.

## ವಿವಿಧ ಇಲಾಖೆಯ ವಸತಿ ನಿಲಯಗಳ ಪ್ರಗತಿ ಪರಿಶೀಲನಾ ಸಭೆ

# ಮಕ್ಕಳಿಗೆ ಮೆನುವಿನ ಪ್ರಕಾರ ಆಹಾರ ಪೂರೈಸಿ : ಕುರೇರ್



**ಬಾಗಲಕೋಟೆ** : ವಿವಿಧ ಇಲಾಖೆ ಅಡಿಯಲ್ಲಿ ಬರುವ ವಸತಿ ನಿಲಯಗಳ ಮಕ್ಕಳಿಗೆ ನಿಗಧಿಪಡಿಸಿದ ಮೆನುವಿನ ಪ್ರಕಾರ ಆಹಾರ ಪೂರೈಸಬೇಕು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ನಿಲಯ ಮೇಲ್ವಚಾರಕರಿಗೆ ಸೂಚಿಸಿದರು.

ಈಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಗುರುವಾರ ಜರುಗಿದ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಇಲಾಖೆಯಡಿ ಬರುವ ವಿವಿಧ ವಸತಿ ನಿಲಯಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಿಗಧಿಪಡಿಸಿದ ಮೆನುವಿನ ಪ್ರಕಾರ ಗುಣಮಟ್ಟ ಹಾಗೂ ಸೂಕ್ತ ಪ್ರಮಾಣದಲ್ಲಿ ಆಹಾರ ನೀಡಲು ಸೂಚಿಸಿದರು. ನಿಲಯಗಳಲ್ಲಿ ಕಡ್ಡಾಯವಾಗಿ ಬಯೋ ಮೆಟ್ರಿಕ್ ಬಳಸುವ ಮೂಲಕ ಮಕ್ಕಲ ಹಾಜರಾಗಿ ಹೆಚ್ಚಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿರುವ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಹೆಚ್ಚಿನ ಗಮನ ಹರಿಸಬೇಕು. ಪ್ರತಿದಿನ ಸಂಜೆ 2 ಗಂಟೆಗಳ ಕಾಲ ಅಬ್ಯಾಸ ಮಾಡಿಸುವ ಕೆಲಸವಾಗಬೇಕು ಎಂದರು. ವಸತಿ ನಿಲಯಗಳಲ್ಲಿರುವ ಕಂಪ್ಯೂಟರ ಹಾಗೂ ಗ್ರಂಥಾಲಯಗಳು ಬಳಕೆಯಾಗಬೇಕು. ಮಕ್ಕಳಿಗೆ ಸಂಪನ್ಮೂಲ ವ್ಯಕ್ತಿಗಳಿಂದ ಪ್ರೇರಣಾತ್ಮಕ ಭಾಷಣ ಕೊಡಿಸಬೇಕು ಎಂದರು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎ.ಎ.ತುಂಬರಮಟ್ಟಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಸೇರಿದಂತೆ ವಿವಿಧ ವಸತಿ ನಿಲಯಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.

# ಮೂಡಲಗಿಯಲ್ಲಿ ಅದ್ದೂರಿ ಸಂವಿಧಾನ ಜಾಗೃತಿ ಜಾಥಾ




ಮೂಡಲಗಿ : ಜಗತ್ತಿನಅತೀ ಶ್ರೇಷ್ಠ ಸಂವಿಧಾನವಾದ ನಮ್ಮದೇಶದ ಹೆಮ್ಮೆಯ ಸಂವಿಧಾನ ಸಮರ್ಪಣೆಯಅಮೃತ ಮಹೋತ್ಸವದ ಅಂಗವಾಗಿ ಮೂಡಲಗಿ ಪಟ್ಟಣದ ಶ್ರೀ ಶ್ರೀಪಾದಬೋಧ ಸ್ವಾಮೀಜಿ ಸರ್ಕಾರಿ ಪ್ರಥ-'ಮದರ್ಜೆಕಾ ಲೇಜಿನ ವತಿಯಿಂದ ಬೃಹತ್ ಸಂವಿಧಾನಜಾಗೃತಿಜಾಥ-ಾವನ್ನುಹಮ್ಮಿ ಕೊಳ್ಳಲಾಗಿತ್ತು. ಮಹಾ ವಿದ್ಯಾಲಯದ ಎಲ್ಲಾ ಉಪನ್ಯಾಸಕರು ಸುಮಾರು 1200 ವಿದ್ಯಾರ್ಥಿಗಳೊಂದಿಗೆ ಕಾಲೇಜಿನಿಂದ ಹೊರಟು ಪಟ್ಟಣದಡಾ. ಬಿ. ಆರ್.ಅಂಬೇಡ್ಕರ್ ವೃತ್ತದವರೆಗೆ ಸಂವಿಧಾನಜಾಗೃತಿ ಘೋಷಣೆಗಳನ್ನು ಕೂಗುತ್ತಾ ಸಾಗಿದರು.ಅಂಭೇಡ್ಕರ್ ವೃತ್ತದಲ್ಲಿ ಸಮಾವೇಶಗೊಂದು, ಅಲ್ಲಿ ಸಂವಿಧಾನದ ಪೀಠಿಕೆಯ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಕಾರ್ಯಕ್ರಮದಅಧ್ಯಕ್ಷತೆಯನ್ನ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಮಹೇಶ ಕಂಬಾರ ಮಾತನಾಡಿ ನಮ್ಮ ಮಹಾವಿದ್ಯಾಲಯವು ಪ್ರತಿ ವರ್ಷದಂತೆ ಈ ವರ್ಷವೂ ಸಹ ವಿಶಿಷ್ಟವಾಗಿ ಆಚ-ರಿಸುತ್ತ ಬಂದಿದ್ದು, ಕಳೆದ ಸಾಲಿನಲ್ಲಿ 'ಮನೆ ಮನೆಗೆ ಸಂವಿಧಾನ' ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿದನ್ನು ಸ್ಮ-ರಿಸಿದರು. ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾನಅವಕಾಶವನ್ನು ಕಲ್ಪಿಸಿರುವ ಸಂವಿಧಾನವು ಈ ದೇಶದ ನಾಡಿಮಿಡಿತವಾಗಿದೆ ಮತ್ತು ಪ್ರತಿಯೊಬ್ಬರೂ ಸಂವಿಧಾನದ ಆಶಯಗಳಿಗೆ ತಕ್ಕಂತೆ ಬದುಕಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೂಡಲಗಿಯ ಸಮಾಜಕಲ್ಯಾಣ ಇಲಾಖೆಯ ನಿಲಯಪಾಲಕ ಯಲ್ಲಪ್ಪ ಭಜಂತ್ರಿಯವರು ಪೀಠಿಕೆಯ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಕಾರ್ಯಕ್ರಮದಲ್ಲಿಗುತ್ತಿಗೆದಾರ ಮ-ರಿಯಪ್ಪ ಮರೆಪ್ಪಗೋಳ, ಶಾಬು ಸಣ್ಣಕ್ಕಿ, ಸುರೇಶ ಸಣ್ಣಕ್ಕಿ, ಉಪನ್ಯಾಸಕರಾದ ಸಂಜೀವಗಾಣಿಗೇರ, ಸಂಜೀವ ಮದರಖಂಡಿ, ಚೇತನ್‌ರಾಜ್, ಯೋಗಿನಿ, ರಾಧಾ ಎಂ.ಎನ್,ಸುಮಿತ್ರಾ ಮಾಸ್ತಿ, ಶಿವಾನಂದ ಚಂಡಕೆ, ಪ್ರಸಾದ ವಗ್ಗನ್ನವರ, ನಿಂಗಪ್ಪ ಸಂಗ್ರೋಜಿಕೊಪ್ಪ, ಡಾ.ಹಾಲಪ್ಪ ಮಡಿವಾಳರ, ಹನಮಂತ ಕಾಮಬಳೆ ಮುಂತಾದವರು ಭಾಗವಹಿಸಿದರು.

## ನ. ೩೦ ರಂದು ಬೈಲಹೊಂಗಲ ಪಟ್ಟಣದಲ್ಲಿ ಕಿತ್ತೂರು ಕರ್ನಾಟಕ ಸೇನೆ ಉದ್ಘಾಟನೆ.

# ಉತ್ತರದ ಅಭಿವೃದ್ಧಿಗೆ ದಕ್ಷಿಣ ನಾಯಕರ ನಿರ್ಲಕ್ಷ : ಮಹಾದೇವ ತಳವಾರ ಕಿಡಿ



ಬೈಲಹೊಂಗಲ– ರಾಜ್ಯದ ದಕ್ಷಿಣ ಭಾಗದ ಸಂಘಟನೆಗಳು ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳಿಗೆ ಗಮನ ಹರಿಸದೆ ಇರುವುದು ವಿಪರ್ಯಾಸದ ಸಂಗತಿ.ಈ ಭಾಗದ ಸಮಸ್ಯೆಗಳ ಕುರಿತು ಧ್ವನಿ ಎತ್ತಲು ಕಿತ್ತೂರು ಕರ್ನಾಟಕ ಸೇನೆ ಸದಾ ಸಿದ್ಧವೆಂದು ಸಂಘಟನೆ ರಾಜ್ಯಾಧ್ಯಕ್ಷ ಮಹಾದೇವ ತಳವಾರ ಗುಡುಗಿದರು.

ಪಟ್ಟಣದ ನಿರೀಕ್ಷಣಾ ಮಂದಿರದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಅವರು ಮಾತನಾಡಿ ಇಚ್ಛಾಶಕ್ತಿ ಹೊಂದಿದ ಉತ್ತರ ಕರ್ನಾಟಕದ ಸ್ವಾಭಿಮಾನಿ ಕೆಚ್ಚೆದೆಯ ಕನ್ನಡಿರನ್ನು ಬಳಸಿಕೊಂಡು ಈ ಭಾಗದ ಸಮಸ್ಯೆಗಳ ಪರಿಹಾರಕ್ಕೆ ಹೆಚ್ಚಿನ ಒತ್ತನ್ನು ಕೊಡದೆ ಇರುವುದು ಬೇಸರದ ಸಂಗತಿ.

ಗ್ರಾಮೀಣ ಭಾಗದಿಂದ ಸಂಘಟನೆ ಕಟ್ಟಲು ಹಲವು ವರ್ಷಗಳಿಂದ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ ಕಾರ್ಯಕರ್ತರಿಗೆ,ನಾಡು ನುಡಿಗೆ ತಮ್ಮ ಜೀವನ ಮುಡಿಪಾಗಿಟ್ಟು ಹಲವು ಪ್ರಕರಣಗಳಿಗೆ ಗುರಿಯಾಗಿ, ಕೊನೆಗೆ ತಿರಸ್ಕಾರಕ್ಕೆ ಒಳಗಾದ ಉತ್ತರ ಕರ್ನಾಟಕದ ಸ್ವಾಭಿಮಾನಿ ಕನ್ನಡಿಗರು ಹುಟ್ಟುಹಾಕಿದ ಕಿತ್ತೂರು ಕರ್ನಾಟಕ ಸೇನೆಯ ಉದ್ಘಾಟನೆ ಸಮಾರಂಭ ನ. 30 ರಂದು ಬೈಲಹೊಂಗಲ ಪಟ್ಟಣದ ವೀರಮಾತೆ ಕಿತ್ತೂರು ಚನ್ನಮ್ಮಾಜಿ ಐಕ್ಯ ಸ್ಥಳದಲ್ಲಿ ನೆರವೇರಲಿದೆ.

ಉದ್ಘಾಟನೆ ಕಾರ್ಯಕ್ರಮದ ಪ್ರಯುಕ್ತ ನ. 30 ರಂದು ಸಾಯಂಕಾಲ 5 ಗಂಟೆಗೆ ನಡೆಯಲಿರುವ ರಸಮಂಜರಿ ಹಾಗೂ ನಗೆಹಬ್ಬ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಲಿಂಗಾಯತ ಪಂಚಮಸಾಲಿ ಜಗದ್ಗುರು ಮಹಾಪೀಠ ಕೂಡಲ ಸಂಗಮದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ,ಸಾನಿಧ್ಯವನ್ನು ಧಾರ್ಮಿಕ ದತ್ತಿ ಇಲಾಖೆ

ನಿರ್ದೇಶಕರಾದ ಡಾ. ಮಹಾಂತಯ್ಯ ಆರಾಧ್ರಿಮಠ ಶಾಸ್ತ್ರಿಗಳು ವಹಿಸಲಿದ್ದು, ಉದ್ಘಾಟನೆಯನ್ನು ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ನೆರವೇರಿಸುವರು. ಅಧ್ಯಕ್ಷತೆಯನ್ನು ಖ್ಯಾತ ನ್ಯಾಯವಾದಿಗಳಾದ ಶ್ರೀಶೈಲ ಬೋಳನ್ನವರ ವಹಿಸಲಿದ್ದು, ಶಾಸಕರುಗಳಾದ ಮಹಾಂತೇಶ ಕೌಜಲಗಿ, ಬಾಬಾಸಾಹೇಬ ಪಾಟೀಲ,

ವಿಶ್ವಾಸ ವೈದ್ಯ ಸೇರಿದಂತೆ ಗಣ್ಯಮಾನ್ಯರು ಭಾಗಿಯಾಗಲಿದ್ದಾರೆ.

ಡಿ. 1 ರಂದು ಸಾಯಂಕಾಲ 5 ಗಂಟೆಗೆ ನಡೆಯಲಿರುವ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಬೈಲಹೊಂಗಲ ಮೂರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ, ಅಂಕಲಗಿ ಅಡವಿ ಸಿದ್ದೇಶ್ವರ ಮಠದ ಡಾ. ಅಮರ ಸಿದ್ದೇಶ್ವರ ಸ್ವಾಮೀಜಿ ವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತ ಈಶ್ವರ ಹೋಟಿ, ಉದ್ಘಾಟಕರಾಗಿ ಮಾಜಿ ಶಾಸಕ ಡಾ. ವಿಶ್ವನಾಥ ಪಾಟೀಲ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ, ಮುಖ್ಯ ಅತಿಥಿಗಳಾಗಿ ಉದ್ಯಮಿ ವಿಜಯ ಮೆಟಗುಡ್ಡ, ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ, ಪುರಸಭೆ ಅಧ್ಯಕ್ಷ ವಿಜಯ ಬೋಳನ್ನವರ ನಗರದ ಗಣ್ಯಮಾನ್ಯರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ಜಿಲ್ಲಾಧ್ಯಕ್ಷ ಶಿವಾನಂದ ಕೋಲಕಾರ ಮಾತನಾಡಿ ಇತಿಹಾಸದ ಪುಟಗಳಲ್ಲಿ ಕ್ರಾಂತಿಯ ಕಿಚ್ಚು ಹಚ್ಚಿದ ಕೀರ್ತಿಗೆ ಪಾತ್ರವಾಗಿರುವ ಬೈಲಹೊಂಗಲ ನಾಡಿನ

ಚನ್ನಮ್ಮಾಜಿ ಐಕ್ಯ ಸ್ಥಳದಿಂದ ಕಿತ್ತೂರು ಕರ್ನಾಟಕ ಸೇನೆ ಉದ್ಘಾಟನೆಗೊಳ್ಳುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಈಗಾಗಲೇ ಬೆಳಗಾವಿ ಜಿಲ್ಲೆಯ 8 ತಾಲೂಕುಗಳಲ್ಲಿ ಸಂಘಟನೆ ಕಾರ್ಯ ಚಟುವಟಿಕೆ ಪ್ರಗತಿಯಲ್ಲಿದೆ ಮುಂಬರುವ ದಿನಗಳಲ್ಲಿ ರಾಜ್ಯಾದ್ಯಂತ ಸಂಘಟನೆಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಶ್ರಮಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಂಘಟನೆ ಕೇಂದ್ರ ಸಮಿತಿ ಸದಸ್ಯರಾದ ದೇವೇಂದ್ರ ತಳವಾರ, ರಮೇಶ ತಳವಾರ ತಾಲೂಕು ಅಧ್ಯಕ್ಷ ರಾಜು ಬೋಳನ್ನವರ, ಸಿದ್ಧಾರೂಢ ಹೊಂಡಪ್ಪನವರ, ಶಿವಾನಂದ ಕುರಬೇಟ ಸೇರಿದಂತೆ ಕಾರ್ಯಕರ್ತರು ಉಪಸ್ಥಿತ-ರಿದ್ದರು.

# ವಿಜಯಪುರ ಕೇಂದ್ರ ಕಾರಾಗೃಹದಲ್ಲಿ ಸಂವಿಧಾನ ದಿನ ಆಚರಣೆ



ವಿಜಯಪುರ, : ವಿಜಯಪುರ ಕೇಂದ್ರ ಕಾರಾಗೃಹ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ನ.26ರಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಅವರು ಸಂವಿಧಾನ ಪ್ರಮಾಣ ವಚನ ಬೋಧಿಸಿ, ಬಂಧಿಗಳಿಗಿರುವ ಉಚಿತ ಕಾನೂನು ಸೇವೆಗಳ ಕು-ರಿತು ಮಾತನಾಡಿದರು.

ಕೇಂದ್ರ ಕಾರಾಗೃಹದ ಅಧೀಕ್ಷಕರಾದ ಬಿ.ಎಂ. ಕೊಟ್ರೇಶ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರಾಗೃಹದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು. ಅಶೋಕ ರಾಠೋಡ ನಿರೂಪಿಸಿ ವಂದಿಸಿದರು.

*****

## ಇಗ್ನೋ ಪರೀಕ್ಷೆ : ಪರೀಕ್ಷಾ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳಲು ಸೂಚನೆ

ವಿಜಯಪುರ, ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವ ವಿದ್ಯಾಲಯವು ಟರ್ಮ್ ಎಂಡ್ ಪರೀಕ್ಷೆಗಳನ್ನು ಡಿ.2 ರಿಂದ ಜನವರಿ 9ರವರೆಗೆ ಬಿಜಾಪುರ ಪ್ರಾದೇಶಿಕ ಕೇಂದ್ರದ 6 ಇಗ್ನೋ ಪರೀಕ್ಷಾ ಕೇಂದ್ರಗಳಲ್ಲಿ ನಡೆಸುತ್ತಿದ್ದು, ನೊಂದಾಯಿಸಿ ವಿದ್ಯಾರ್ಥಿಗಳು ಪರೀಕ್ಷಾ ಪ್ರವೇಶ ಪತ್ರಗಳನ್ನು www. ignou.ac.in ಲಿಂಕ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08352–252006, ಮೊ: 9482311006 ಹಾಗೂ ಇಮೇಲ್ : ಡಿಭಿಭುರಿಚಿಠಿಣಡಿ@ಟಿಂಟಿಠಣ. ಚಿಭಿ.ಟಿ ವಿಳಾಸಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

*****

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 247, Postal Reg No. PMG/KA/NK/BM/135/22-24 / POST AT Vantamury Colony Post Office